ಸಂಪುಟ: 04 ಸಂಚಿಕೆ: 255 ಪುಟಗಳು: 08 ಗುರುವಾರ 28 ನವೆಂಬರ್ 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ತಾಳ್ಮೆ ಮತ್ತು ಮೌನ
ಅತ್ಯಂತ ಶಕ್ತಿಶಾಲಿ..
ತಾಳ್ಮೆ ಮಾನಸಿಕವಾಗಿ
ಗಟ್ಟಿಗೊಳಿಸಿದರೆ
ಮೌನ ಭಾವನಾತ್ಮಕ
ಗಟ್ಟಿತನ ನೀಡುತ್ತದೆ..

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ದೇವೇಗೌಡರನ್ನು ನಿಂದಿಸಿದರೆ, ಗೂಟದ ಕಾರು ಸಿಗುವ ಭ್ರಮೆ ಯೋಗೇಶ್ವರ್‌ಗೆ

• ಉದಯವಾಹಿನಿ, ಮಂಡ್ಯ

ದೇವೇಗೌಡರ ಕುಟುಂಬವನ್ನು ನಿಂದಿಸಿದರೆ ಗೂಟದ ಕಾರು ಸಿಗುತ್ತದೆ ಅನ್ನುವ ಭ್ರಮೆಯಲ್ಲಿ ಸಿ.ಪಿ.ಯೋಗೇಶ್ವರ್ ಇದ್ದಾರೆ. ಜೆಡಿಎಸ್ ಅನ್ನು ಮುಗಿಸುವ ರೀತಿ ಮಾತನಾಡುವ ಯೋಗೇಶ್ವರ್ ಅವರೇ ಎಚ್ಚರಿಕೆ ಇರಲಿ, ನಿಮ್ಮ ನಡವಳಿಕೆ ಸರಿಪಡಿಸಿಕೊಳ್ಳದಿದ್ದರೆ, ಡಿ.ಕೆ.ಶಿವಕುಮಾರ್ ಮತ್ತು ಡಿ.ಕೆ.ಸುರೇಶ್ ನಿಮ್ಮ ಬಗ್ಗೆ ಮಾತನಾಡಿರುವ ರೆಕಾರ್ಡ್ ಇದೆ. ಅದನ್ನು ಹಾದಿ ಬೀದಿಯಲ್ಲಿ ಹೇಳಿ ಮಾನ ಹರಾಜು ಹಾಕುತ್ತೇವೆ ಎಂದು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ತಿರುಗೇಟು ನೀಡಿದರು. ಗೆಲುವಿನ ಮದದಿಂದ ದೇವೇಗೌಡರನ್ನು ಮನೆಯಲ್ಲಿರಿ ಅನ್ನೋದು, ಕುಮಾರಣ್ಣ ಅವರನ್ನು ರಣ ಹೇಡಿ ಅನ್ನೋದು ಯೋಗೇಶ್ವರ್ ಅವರಿಗೆ ಶೋಭೆ ತರುವುದಿಲ್ಲ. ರಾಜ ಕಾರಣಕ್ಕೆ ದೇವೇಗೌಡರು ಬೀದಿಯಲ್ಲಿ ಓಡಾಡಲಿಲ್ಲ, ರೈತರ ಸಮಸ್ಯೆಗಳ ನಿವಾರಣೆಗಾಗಿ ಹೋರಾಟ ನಡೆಸಿದ್ದಾರೆ.

ರೈತರು ಒಪ್ಪಿರುವುದಕ್ಕೆ ಗೌಡ್ರು ಇನ್ನೂ ಗೌಡರಾಗಿದ್ದಾರೆ ಎಂದು ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು. ಯೋಗೇಶ್ವರ್ ಕೂಡ ಚುನಾವಣೆಯಲ್ಲಿ ಹಲವಾರು ಬಾರಿ ಸೋತಿದ್ದಾರೆ. ಈ ಬಾರಿ ಚುನಾವಣೆ ಇನ್ನೆರಡು ದಿನ ಇರುವಾಗಲೇ ರಣಹೇಡಿ ತರಹ ಯೋಗೇಶ್ವರ್ ಓಡಿ ಹೋದರು. ಈಗ ಗೆದ್ದಿರುವುದನ್ನು ಸ್ವಾಗತಿಸುತ್ತೇವೆ. ಚನ್ನಪಟ್ಟಣ ಮತದಾರರನ್ನು ಯೋಗೇಶ್ವರ್ ಗೌರವಿಸುವುದನ್ನು ಕಲಿಯಬೇಕು ಎಂದರು.

## ಬೆಂಗಳೂರಿನ ಹೆಚ್‌ಎಸ್‌ಬಿಸಿ ಬ್ಯಾಂಕ್ ಗೆ ಬಾಂಬ್ ಬೆದರಿಕೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ವಿವಿಧ ಶಾಲೆಗಳು, ಹೋಟೆಲ್‌ಗಳಿಗೆ ಹುಸಿ ಬಾಂಬ್ ಬೆದರಿಕೆ ಸಂದೇಶದ ಬಳಿಕ ಇದೀಗ ಬ್ಯಾಂಕ್‌ಗಳಿಗೂ ಇಂತಹ ಬೆದರಿಕೆ ಕರೆಗಳು ಆರಂಭವಾಗಿವೆ. ಬೆಂಗಳೂರಿನ ಎಂ.ಜಿ.ರಸ್ತೆಯಲ್ಲಿರುವ ಹೆಚ್‌ಎಸ್‌ಬಿಸಿ ಬ್ಯಾಂಕ್ ಗೆ ದುಷ್ಕರ್ಮಿಯೊಬ್ಬ ಬಾಂಬ್ ಬೆದರಿಕೆ ಸಂದೇಶ ರವಾನಿಸಿದ್ದಾನೆ. ಎಂ.ಜಿ.ರಸ್ತೆಯಲ್ಲಿರುವ ಹೆಚ್‌ಎಸ್‌ಬಿಸಿ ಬ್ಯಾಂಕ್ ಗೆ ಇ-ಮೇಲ್ ಮೂಲಕ ಬೆದರಿಕೆ ಸಂದೇಶ ಬಂದಿದೆ ಎಂದು ತಿಳಿದು ಬಂದಿದೆ. ದುಷ್ಕರ್ಮಿಯೊಬ್ಬ ಇ-ಮೇಲ್ ರವಾನಿಸಿದ್ದು, ಅದರಲ್ಲಿ ಬ್ಯಾಂಕ್‌ನಲ್ಲಿ ಬಾಂಬ್ ಇಟ್ಟಿದ್ದೇವೆ, ಸ್ಫೋಟವಾಗಲಿದೆ ಎಂದು ಸಂದೇಶ ಕಳುಹಿಸಿದ್ದಾನೆ. ವಿಷಯ ತಿಳಿಯುತ್ತಿದ್ದಂತೆ ಬ್ಯಾಂಕ್ ಆಡಳಿತ ಮಂಡಳಿ ಸಿಬ್ಬಂದಿಗಳನ್ನು ಹೊರಗೆ ಕಳುಹಿಸಿದ್ದು ಪೊಲೀಸರಿಗೆ ಮಾಹಿತಿ ನೀಡಿದೆ. ಸ್ಥಳಕ್ಕೆ ಹಲಸೂರು ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಭ್ರಷ್ಟಾಚಾರ ತಡೆಗೆ ಚೈನಾ ಮಾದರಿ ಶಿಕ್ಷೆ ಅಗತ್ಯ : ಸಂತೋಷ ಹೆಗ್ಡೆ

• ಉದಯವಾಹಿನಿ, ಲಿಂಗಸುಗೂರು

ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಚೀನಾ ಮಾದರಿ ಶಿಕ್ಷೆಯ ಪದ್ಧತಿ ಬೇಕಿದೆ. ಅಂದಾಗ ಭ್ರಷ್ಟಾಚಾರ ನಿಯಂತ್ರಣ ಸಾಧ್ಯ ಎಂದು ಸುಪ್ರಿಂ ಕೋರ್ಟ್ ನಿವೃತ್ತ ನ್ಯಾಯಾಮೂರ್ತಿ ಎನ್. ಸಂತೋಷ ಹೆಗ್ಡೆ ಹೇಳಿದರು. ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭ್ರಷ್ಟಾಚಾರ ದಿನದಿಂದ ದಿನಕ್ಕೆ ವಿಸ್ತಾರಗೊಳ್ಳುತ್ತಿದೆ. ಈಗಿರುವ ವಿಚಾರಣೆ, ಶಿಕ್ಷೆಗೆ ಬೆಲೆಯೇ ಇಲ್ಲದಂತಾಗಿದೆ. ಗಲ್ಲು ಶಿಕ್ಷೆಯಂಥ ಶಿಕ್ಷೆ ಮಾನದಂಡ ಆದಲ್ಲಿ ಭ್ರಷ್ಟಾಚಾರ ತಡೆಯಲು ಸಾಧ್ಯವಾಗಬಹುದು ಎಂದರು. ರಾಷ್ಟ್ರಪಿತ ಮಹಾತ್ಮ ಗಾಂಧಿ ಜೈಲಿಗೆ ಹೋಗಿ ಬಂದಿದ್ದಾರೆ. ನಾವು ಹೋಗಿ ಬರುವಲ್ಲಿ ತಪ್ಪೇನಿದೆ ಎಂಬ ಅಹಂಭಾವ ರಾಜಕಾರಣದಲ್ಲಿ ಮನೆ ಮಾಡಿದೆ. ನೈತಿಕ ಮೌಲ್ಯಗಳು ಕುಸಿತಗೊಂಡಿವೆ. ಜೈಲಿನಿಂದ ಬಿಡುಗಡೆಯಾಗಿ ಬರುವವರ ಭವ್ಯ ಮೆರವಣಿಗೆ ಮಾಡುತ್ತಿರುವುದು ನೋವಿನ ಸಂಗತಿ ಎಂದು ಕಳವಳ ವ್ಯಕ್ತಪಡಿಸಿದರು. ಆಸೆ, ಆಕಾಂಕ್ಷೆಗಳು ಬೇಕು.

ವಿಕೃತ ಮಟ್ಟಕ್ಕೆ ಕೊಂಡೊಯ್ದಿದ್ದಾರೆ. ರಾಜ್ಯದಲ್ಲಿ ಮುಡಾ ಹಗರಣದಲ್ಲಿ ಹೈಕೋರ್ಟ್ ನಿರ್ದೇಶನ ನೀಡಿದೆ. ಅದಾಗ್ಯೂ ಮೊಂಡುತನ ಪ್ರದರ್ಶನ ನೋಡುತ್ತಿದ್ದೇವೆ. ಭ್ರಷ್ಟಾಚಾರದ ಹಣದಿಂದ ಶ್ರೀಮಂತ ಆಗಬಹುದು. ನೆಮ್ಮದಿ ಬದುಕು ಕಟ್ಟಿಕೊಳ್ಳಲಾಗದು ಎಂದರು.

## ಸರ್ಕಾರದಿಂದ ರೈತ ವಿರೋಧಿ ನೀತಿ: ವಿ ಸುನಿಲ್ ಕುಮಾರ್

• ಉದಯವಾಹಿನಿ, ಬೆಂಗಳೂರು

ಅಕ್ರಮ ಸಕ್ರಮ ಬಗರ್ ಹುಕುಂ ಸಮಿತಿಯ ಅವಗಾಹನೆಗೆ ತರದೇ ಕಂದಾಯ ಇಲಾಖೆ ಅಧಿಕಾರಿಗಳು ಲಕ್ಷಾಂತರ ಅರ್ಜಿ ತಿರಸ್ಕರಿಸಿರುವುದು ಸರ್ಕಾರದ ರೈತ ವಿರೋಧಿ ಕ್ರಮ ಎಂದು ಬಿಜೆಪಿ ಪ್ರಧಾನ ಕಾರ್ಯದರ್ಶಿ ಹಾಗೂ ಶಾಸಕ ವಿ.ಸುನಿಲ್‌ಕುಮಾರ್ ಟೀಕಿಸಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಮಲೆನಾಡು, ಕರಾವಳಿ ಭಾಗಗಳು ಸೇರಿದಂತೆ ರಾಜ್ಯದ ಬಹುತೇಕ ಎಲ್ಲಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರ ಶಾಸಕರ ಅಧ್ಯಕ್ಷತೆಯಲ್ಲಿ ಈ ಸಮಿತಿ ರಚನೆ ಮಾಡಲಾಗಿದೆ. ಅರ್ಜಿಗಳ ಅಂಗೀಕಾರ ಅಥವಾ ತಿರಸ್ಕಾರ ಈ ಸಮಿತಿಯಿಂದಲೇ ಆಗಬೇಕು. ಆದರೆ, ಅಧಿಕಾರಿಗಳು ಈ ವಿಚಾರವನ್ನು ಸಭೆಯಲ್ಲಿ ಚರ್ಚಿಸದೇ ಏಕಪಕ್ಷೀಯವಾಗಿ ನಿರಾಕರಿಸುತ್ತಿರುವುದು ಸಂವಿಧಾನ ಬಾಹಿರ ಎಂದು ಹೇಳಿದರು. ಕಂದಾಯ ಸಚಿವ ಕೃಷ್ಣ ಬೈರೇಗೌಡರು ಬಗರ್ ಹುಕುಂ ವಿಚಾರ ಇತ್ಯರ್ಥಗೊಳಿಸಲು ಬದ್ಧ ಎಂದು ಹೇಳಿಕೆ ಕೊಟ್ಟಿದ್ದಾರೆ. ಆದರೆ, ಸಚಿವರ ಸೂಚನೆ ಮೇರೆಗೆ ಅರ್ಜಿ ಕೈಬಿಡಲಾಗಿದೆ ಎಂದು ಅಧಿಕಾರಿಗಳು ಸಬೂಬು ನೀಡುತ್ತಿದ್ದಾರೆ. ಸುಮಾರು ಒಂದು ಲಕ್ಷಕ್ಕೂ ಮೇಲ್ಪಟ್ಟು ಅರ್ಜಿ ಕೈಬಿಡುವಂತೆ ಗುರಿ ನಿಗದಿ ಮಾಡಲಾಗಿದೆ ಎಂಬ ಮಾತುಗಳು ಕೇಳಿ ಬಂದಿದೆ. ಸರ್ಕಾರ ಈ ಬಗ್ಗೆ ತಕ್ಷಣ ಸ್ಪಷ್ಟನೆ ನೀಡಬೇಕು ಎಂದು ಅವರು ಆಗ್ರಹಿಸಿದ್ದಾರೆ.







# ಪ್ರತ್ಯೇಕ ಹೋರಾಟ ಬಣ ಬಡಿದಾಟ

● ಸೋಲಿಗೆ ಎದೆಗುಂದಬೇಡಿ: ವಿಜಯೇಂದ್ರ ಪತ್ರ

**ವಿಜಯೇಂದ್ರರನ್ನು ಟೀಕಿಸಿದರೆ ಪಕ್ಷದ ರಾಷ್ಟ್ರೀಯ ನಾಯಕರನ್ನು ಟೀಕಿಸಿದಂತೆ**

**ಯತ್ನಾಳ್ ಟೀಂ ಬಿಸಿತುಪ್ಪ ವಿಜಯೇಂದ್ರ ಮೇಲೆ ಒತ್ತಡ**



• ಉದಯವಾಹಿನಿ, ಬೆಂಗಳೂರು

ವಕ್ಫ್ ಮಂಡಳಿ ಆಸ್ತಿ ವಿವಾದ ಭುಗಿಲೆದ್ದಾಗಿನಿಂದ ರಾಜ್ಯ ಬಿಜೆಪಿ ನಾಯಕರಿಂದ ಅಂತರ ಕಾಯ್ದುಕೊಳ್ಳುವ ಜತೆಗೆ ಪಕ್ಷದ ಹೆಸರಿನಲ್ಲೇ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರತ್ಯೇಕವಾಗಿ ಹೋರಾಟ ನಡೆಸುತ್ತಿರುವುದು ಬಿಜೆಪಿಗೆ ತೀವ್ರ ಇರುಸು ಮುರುಸು ತಂದಿದೆ. ಯತ್ನಾಳ್ ನಡೆಗೆ ಪಕ್ಷದಲ್ಲಿ ಆಕ್ಷೇಪವೂ ಹೆಚ್ಚಾಗಿದ್ದು, ವರಿಷ್ಠರ ಗಮನಕ್ಕೆ ತರುವಂತೆ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮೇಲೆ ಒತ್ತಡ ಹೇರುತ್ತಿರುವುದು ವಿಚಾರ ಗಂಭೀರ ಸ್ವರೂಪ ಪಡೆದುಕೊಳ್ಳುತ್ತಿದೆ.

ವಕ್ಫ್ ಆಸ್ತಿ ವಿವಾದದ ವಿರುದ್ಧ ಯತ್ನಾಳ್ ಹಾಗೂ ರಾಜ್ಯ ಬಿಜೆಪಿ ನಾಯಕರು ದೊಡ್ಡದಾಗಿ ದನಿ ಎತ್ತಿದ್ದಾರೆ. ಆದರೆ ಆರಂಭದಿಂದಲೂ ಯತ್ನಾಳ್ ಬಿಜೆಪಿ ಹೋರಾಟದಿಂದ ಅಂತರ ಕಾಯ್ದುಕೊಂಡು ಪ್ರತ್ಯೇಕವಾಗಿಯೇ ಪ್ರತಿರೋಧ ಮುಂದುವರಿಸಿದ್ದಾರೆ. ವಸ್ತುಸ್ಥಿತಿ ಅಧ್ಯಯನಕ್ಕಾಗಿ ಮಾಜಿ ಡಿಸಿಎಂ ಗೋವಿಂದ ಕಾರಜೋಳ ನೇತೃತ್ವದಲ್ಲಿ ರಚನೆಯಾದ ತಂಡದಲ್ಲಿ ಯತ್ನಾಳ್ ಹೆಸರಿಲ್ಲದಿದ್ದುದು ಆರಂಭದಲ್ಲೇ ವಿವಾದಕ್ಕೆ ಕಾರಣವಾಯಿತು. ಬಳಿಕ ಯತ್ನಾಳ್, ಸಂಸದ ರಮೇಶ್ ಜಿಗಜಿಣಗಿ ಅವರನ್ನು ತಂಡಕ್ಕೆ ಸೇರಿಸಿದರೂ ಯತ್ನಾಳ್ ತಂಡವನ್ನು ಸೇರಲಿಲ್ಲ. ಇನ್ನು ಬಿಜೆಪಿಯು 'ನಮ್ಮ ಭೂಮಿ ನಮ್ಮ ಹಕ್ಕು' ಹೆಸರಿನಡಿ ಜನ ಜಾಗೃತಿ ನಡೆಸಲು ಸಿದ್ಧತೆ ನಡೆಸುತ್ತಿರುವ ಹೊತ್ತಿನಲ್ಲೇ ಯತ್ನಾಳ್ ನ.25ರಿಂದ ಪ್ರವಾಸದ ಮೂಲಕ ಹೋರಾಟ ತೀವ್ರಗೊಳಿಸುವುದಾಗಿ ಘೋಷಿಸಿದರು. ಅದರಂತೆ ಬೀದರ್, ಕಲಬುರಗಿಯಲ್ಲಿ ಎರಡು ದಿನ ಪಕ್ಷದ ಹೆಸರಿನಲ್ಲೇ ಯತ್ನಾಳ್ ಹೋರಾಟ ನಡೆಸಿರುವುದು ಪಕ್ಷಕ್ಕೆ ತೀವ್ರ ಮುಜುಗರ ತಂದಿದೆ.

- ಜೆಪಿ ನಡ್ಡಾಗೆ ದೂರು ನೀಡಲು ವಿಜಯೇಂದ್ರ ಬೆಂಬಲಿಗರ ಒತ್ತಡ
- ಪ್ರತ್ಯೇಕ ವಕ್ಫ್ ಹೋರಾಟಕ್ಕೆ ಕೇಸರಿ ಪಕ್ಷದಲ್ಲಿ ತೀವ್ರ ಅಸಮಾಧಾನ
- ಬಿಜೆಪಿ ಕೋರ್ ಕಮಿಟಿಯ ಡಿಸೆಂಬರ್ ಸಭೆಯಲ್ಲಿ ಚರ್ಚೆ ಸಾಧ್ಯತೆ

ಈ ನಡುವೆ, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್, ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಮೂರು ತಂಡಗಳು ಡಿ.4ರಿಂದ 6ರವರೆಗೆ ಸಂಬಂಧಪಟ್ಟ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಭಿಪ್ರಾಯ ಸಂಗ್ರಹಕ್ಕೆ ಸಜ್ಜಾಗಿವೆ. ಆದರೆ ಯತ್ನಾಳ್ ಹಾಗೂ ಬೆಂಬಲಿಗರು ಶಾಸಕರು, ಪ್ರಮುಖರು ಈಗಾಗಲೇ ಹೋರಾಟ ನಡೆಸಿರುವ ಜಿಲ್ಲೆಗಳಲ್ಲಿ ಮತ್ತೆ ಹೋರಾಟ ನಡೆಸುವುದು ಹೇಗೆ ಎಂಬ ಜಿಜ್ಞಾಸೆ ಪಕ್ಷದ ನಾಯಕರನ್ನು ಕಾಡುತ್ತಿದೆ. ವರಿಷ್ಠರ ಅನುಮತಿ ಇರುವುದರಿಂದಲೇ ಹೋರಾಟ ನಡೆಸುತ್ತಿರುವುದಾಗಿ ಯತ್ನಾಳ್ ಹೇಳಿದ್ದಾರೆ.

ಆದರೆ ವರಿಷ್ಠರ ಅನುಮತಿಯೂ ಇಲ್ಲ, ರಾಜ್ಯಾಧ್ಯಕ್ಷರು, ಜಿಲ್ಲಾಧ್ಯಕ್ಷರ ಗಮನಕ್ಕೂ ತರದೇ ಯತ್ನಾಳ್ ಪ್ರತ್ಯೇಕವಾಗಿ ಹೋರಾಟ ನಡೆಸಿದ್ದಾರೆ ಎಂದು ಪಕ್ಷದ ಪ್ರಮುಖರ ಗುಂಪು ಆರೋಪಿಸಿದೆ.

ಹೋರಾಟ ನಡೆಸುತ್ತಿರುವ ಕಡೆಯೆಲ್ಲಾ ಯತ್ನಾಳ್ ಅವರು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ, ವಿಜಯೇಂದ್ರ ವಿರುದ್ಧ ಟೀಕೆ ಟಿಪ್ಪಣಿ ಮಾಡುತ್ತಿರುವುದು ಬಿಜೆಪಿ ನಾಯಕರನ್ನು ಇನ್ನಷ್ಟು ಕೆರಳಿಸಿದೆ.

### ಮುಂದುವರೆದ ಭಿನ್ನರ ಅಭಿಯಾನ

ರಾಜ್ಯ ನಾಯಕತ್ವಕ್ಕೆ ಸಡ್ಡು ಹೊಡೆದು ವಕ್ಫ್‌ಗೆ ಸಂಬಂಧಿಸಿದಂತೆ ಪ್ರತ್ಯೇಕ ಯಾತ್ರೆ ನಡೆಸುತ್ತಿರುವ ಬಿಜೆಪಿ ಭಿನ್ನರ ಯಾತ್ರೆ ಅಭಾಧಿತವಾಗಿ ಮುಂದುವರೆದಿದೆ. ಪ್ರತ್ಯೇಕ ಯಾತ್ರೆ ನಡೆಸುತ್ತಿರುವ ಭಿನ್ನರ ವಿರುದ್ಧ ಮಾಜಿ ಮುಖ್ಯಮಂತ್ರಿ, ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಸೇರಿದಂತೆ ಹಲವು ನಾಯಕರು ಅಸಮಾಧಾನ ಹೊರ ಹಾಕಿದ್ದರೂ ಭಿನ್ನರು ಮಾತ್ರ ಯಾವುದನ್ನು ಲೆಕ್ಕಿಸದೆ ತಮ್ಮ ಯಾತ್ರೆಯನ್ನು ಮುಂದುವರೆಸಿದ್ದಾರೆ. ಇಂದು ರಾಯಚೂರಿನಲ್ಲಿ ಭಿನ್ನರು ವಕ್ಫ್‌ಗೆ ಸಂಬಂಧಿಸಿದಂತೆ ಸಭೆ ನಡೆಸಿ ಮೆರವಣಿಗೆಯಲ್ಲಿ ತೆರಳಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

**ಬಿಜೆಪಿ ವರಿಷ್ಠರ ಮೌನ**



### ಯತ್ನಾಳ್ ವಿರುದ್ಧ ಸಮರ

ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ವಿಜಯಪುರದ ಶಾಸಕ, ವಕ್ಫ್ ವಿರುದ್ಧ ಹೋರಾಟ ನಡೆಸುತ್ತಿರುವ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಸಮರ ಸಾರಿದಂತಿದೆ. ಬಿಎಸ್ ಯಡಿಯೂರಪ್ಪ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರನ್ನು ಯತ್ನಾಳ್ ಟೀಕಿಸುವುದು ಸರಿಯಲ್ಲ, ಸೋತವರು, ಟಿಕೆಟ್ ಸಿಗದ 4-5 ಜನರನ್ನು ಜೊತೆಗಿಟ್ಟು ಕೊಂಡು ಅವರು ಹೋರಾಟ ಅಂತ ಮಾಡುತ್ತಿದ್ದಾರೆ, ವಿಜಯೇಂದ್ರರನ್ನು ರಾಜ್ಯಾಧ್ಯಕ್ಷ ಮಾಡಿದ್ದು ರಾಷ್ಟ್ರೀಯ ನಾಯಕರು ಹಾಗಾಗಿ ವಿಜಯೇಂದ್ರರನ್ನು ಟೀಕಿಸುವುದು ವರಿಷ್ಠರನ್ನು ಟೀಕಿಸಿದಂತೆ, ಯಡಿಯೂರಪ್ಪ ಅವರು ಬಿಜೆಪಿಯನ್ನು ಕಟ್ಟಿ ಬೆಳೆಸುವಾಗ ಇವರಲ್ಲಿ ಯಾರೂ ಕಣ್ಣು ಬಿಟ್ಟರಲಿಲ್ಲ ಎಂದು ರೇಣುಕಾಚಾರ್ಯ ಹೇಳಿದರು.




### ವರಿಷ್ಠರಿಗೆ ಮಾಹಿತಿ ನೀಡುವಂತೆ ಒತ್ತಡ

ರಾಜ್ಯ ಬಿಜೆಪಿ ಕಚೇರಿಯಲ್ಲಿ ನಡೆದ ಸಂಘಟನಾ ಪರ್ವ ರಾಜ್ಯ ಮಟ್ಟದ ಕಾರ್ಯಾಗಾರದಲ್ಲೂ ಈ ವಿಚಾರದ ಬಗ್ಗೆ ಚರ್ಚೆಯಾಗಿದೆ. ಯತ್ನಾಳ್ ಪ್ರತ್ಯೇಕ ಹೋರಾಟದಿಂದ ಕಾರ್ಯಕರ್ತರು ಹಾಗೂ ಜನರಲ್ಲಿ ಗೊಂದಲ ಸೃಷ್ಟಿಯಾಗಿದೆ. ಉಪ ಚುನಾವಣೆಯಲ್ಲಿನ ಸೋಲಿಗೆ ಸಮನ್ವಯದ ಕೊರತೆ, ಪಕ್ಷ ವಿರೋಧಿ ಚಟುವಟಿಕೆಗಳು ಕಾರಣವಾಗಿವೆ. ವಿಧಾನಮಂಡಲ ಅಧಿವೇಶನ ಆರಂಭಕ್ಕೂ ಮೊದಲೇ ಇದಕ್ಕೆಲ್ಲಾ ಅಂತ್ಯ ಹಾಡಬೇಕಿದೆ. ರಾಜ್ಯಾಧ್ಯಕ್ಷರು ಕೂಡಲೇ ದಿಲ್ಲಿಗೆ ತೆರಳಿ ವರಿಷ್ಠರನ್ನು ಭೇಟಿಯಾಗಿ ಯತ್ನಾಳ್ ಕಾರ್ಯ ವೈಖರಿ ಬಗ್ಗೆ ಮಾಹಿತಿ ನೀಡಬೇಕೆಂದು ಹಲವು ಜಿಲ್ಲಾಧ್ಯಕ್ಷರು ಒತ್ತಡ ಹೇರಿರುವ ಪ್ರಸಂಗ ನಡೆದಿದೆ.

### ಕೋರ್ ಕಮಿಟಿಯಲ್ಲಿ ಚರ್ಚೆ ಸಾಧ್ಯತೆ

ಡಿ.7 ಇಲ್ಲವೇ 8ರಂದು ಬಿಜೆಪಿ ಕೋರ್ ಕಮಿಟಿ ನಡೆಯಲಿದ್ದು, ಆಗ ಯತ್ನಾಳ್ ಅವರ ನಡೆ- ನುಡಿ ಬಗ್ಗೆ ಚರ್ಚಿಸುವ ಸಾಧ್ಯತೆ ಇದೆ. ಸಮಿತಿಯಲ್ಲಿ ತೀರ್ಮಾನ ಕೈಗೊಂಡು ಅದರಂತೆ ಮುಂದುವರಿಯುವ ಸಾಧ್ಯತೆ ಇದೆ. ಆದರೆ ಅಧಿವೇಶನ ಆರಂಭಕ್ಕೂ ಮೊದಲೇ ಸೂಕ್ತ ಕ್ರಮವಾಗದಿದ್ದರೆ ಸರಕಾರದ ದುರಾಡಳಿತ, ವೈಫಲ್ಯಗಳ ವಿರುದ್ಧ ಹೋರಾಟ ನಡೆಸುವ ಸಂಘಟಿತ ಹೋರಾಟಕ್ಕೆ ಹಿನ್ನಡೆಯಾಗುವ ಅಪಾಯದ ಬಗ್ಗೆಯೂ ಸಭೆಯಲ್ಲಿ ಪ್ರಸ್ತಾಪವಾಗಿದೆ. ಒಟ್ಟಾರೆ, ವಕ್ಫ್ ಆಸ್ತಿ ವಿವಾದ ಸಂಬಂಧ ಹೋರಾಟದಲ್ಲಿ ಬಿಜೆಪಿಯ ಬಣ ಬಡಿದಾಟ ತಾರಕಕ್ಕೇರಿರುವುದು ಬಯಲಾಗಿದೆ. ವರ್ಷಾಂತ್ಯ ಇಲ್ಲವೇ ವರ್ಷಾರಂಭದ ಹೊತ್ತಿಗೆ ಯತ್ನಾಳ್ ನಡೆ ವಿರುದ್ಧ ವರಿಷ್ಠರ ಗಮನಕ್ಕೆ ತರುವ ಮೂಲಕ ಪಕ್ಷದಲ್ಲಿ ಶಿಸ್ತು ಕಾಯ್ದುಕೊಂಡು ಸಂಘಟನೆಗೆ ಬಲ ತುಂಬ ಬೇಕೆಂಬ ಒತ್ತಡ ಹೆಚ್ಚಾಗಿದೆ.

## ಸಂಪುಟ ಪುನಾರಚನೆ ಸುಳಿವು ನೀಡಿದ: ಸಚಿವ

• ಉದಯವಾಹಿನಿ, ಬೆಂಗಳೂರು



ಶೀಘ್ರದಲ್ಲಿಯೇ ರಾಜ್ಯ ಸಚಿವ ಸಂಪುಟ ಪುನಾರಚನೆಯಾಗಲಿದೆ ಎಂಬ ಬಗ್ಗೆ ರಾಜಕೀಯ ವಲಯದಲ್ಲಿ ಭಾರಿ ಚರ್ಚೆ ನಡೆಯುತ್ತಿದೆ. ಬೆಳಗಾವಿಯ ಚಳಿಗಾಲದ ಅಧಿವೇಶನದ ಬಳಿಕ ಸಚಿವ ಸಂಪುಟ ಪುನಾರಚನೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

ಈ ಬಗ್ಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ನೀಡಿರುವ ಪ್ರತಿಕ್ರಿಯೆ ಇನ್ನಷ್ಟು ಪುಷ್ಠಿ ನೀಡುವಂತಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ಸಚಿವ ಸಂಪುಟ ಪುನಾರಚನೆ ಬಗ್ಗೆ ಮಾತು ಕೇಳಿಬರುತ್ತಿವೆ. ಕೆಲವರ ಖಾತೆ ಬದಲಾವಣೆ ಬಗ್ಗೆಯೂ ಚರ್ಚೆಯಿದೆ. ಆದರೆ ಯಾವಾಗ ಮಾಡುತ್ತಾರೆ ಎಂದು ಗೊತ್ತಿಲ್ಲ ಎಂದು ಹೇಳಿದ್ದಾರೆ.

ಸಂಪುಟ ಪುನಾರಚನೆ ಮಾಡಲುಬಹುದು ಮಾಡದೆಯೂ ಇರಬಹುದು. ನನಗಂತೂ 2 ವರ್ಷಕ್ಕೆ ಸ್ಥಾನ ಬದಲಾವಣೆ ಎಂದು ಯಾರೂ ಹೇಳಿಲ್ಲ. ಎಲ್ಲವೂ ಹೈಕಮಾಂಡ್ ನಿರ್ಧಾರಕ್ಕೆ ಬಿಟ್ಟಿದ್ದು. ದೆಹಲಿಯಿಂದ ಲಿಸ್ಟ್ ಬಂದರೆ ಎಲ್ಲರೂ ಬದಲಾಗಬೇಕು. ಲಿಸ್ಟ್‌ನಲ್ಲಿ ಹೆಸರು ಬಂದರೆ ಮನೆ ಖಾಲಿ ಮಾಡ್ಕೊಂಡು ಹೋಗಬೇಕು. ದೆಹಲಿ ನಾಯಕರ ತೀರ್ಮಾನವೇ ಎಲ್ಲದಕ್ಕೂ ಫೈನಲ್ ಎಂದು ತಿಳಿಸಿದ್ದಾರೆ. ಇದೇ ವೇಳೆ ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕಾಗಿ ಲಾಭಿ ವಿಚಾರವಾಗಿ ಪ್ರತಿಕ್ರಿಯಿಸಿದ ಸಚಿವರು, ಯಾವುದೇ ಲಾಭಿಯಿಲ್ಲ. ಕೆಪಿಸಿಸಿ ಅಧ್ಯಕ್ಷ ಸ್ಥಾನದ ಆಯ್ಕೆ ಅಷ್ಟು ಸುಲಭದ ಮಾತಲ್ಲ, ಅದನ್ನು ನಿಭಾಯಿಸುವುದೂ ಸುಲಭವಲ್ಲ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ ಎಂದು ಹೇಳಿದ್ದಾರೆ.

## ವಿಷಾದ ವ್ಯಕ್ತಪಡಿಸಿದ ಚಂದ್ರಶೇಖರನಾಥ ಸ್ವಾಮೀಜಿ

• ಉದಯವಾಹಿನಿ, ಬೆಂಗಳೂರು

ಮುಸ್ಲಿಮರಿಗೆ ಮತದಾನದ ಹಕ್ಕು ರದ್ದು ಮಾಡಬೇಕು ಎಂಬ ಹೇಳಿಕೆ ನೀಡಿದ್ದ ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷ ಚಂದ್ರಶೇಖರನಾಥ ಸ್ವಾಮೀಜಿ ಹೇಳಿಕೆ ತೀವ್ರ ವಿವಾದಕ್ಕೆ ಕಾರಣವಾಗಿದೆ. ಸ್ವಾಮೀಜಿಗಳ ಹೇಳಿಕೆ ಚರ್ಚೆಗೆ ಗ್ರಾಸವಾಗುತ್ತಿದ್ದಂತೆ ಎಚ್ಚೆತ್ತ ಚಂದ್ರಶೇಖರನಾಥ ಸ್ವಾಮೀಜಿ ತಮ್ಮ ಹೇಳಿಕೆಗೆ ವಿಷಾದ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಸ್ವಾಮೀಜಿ, ಬೆಂಗಳೂರು ನಗರದ ಫ್ರೀಡಂ ಪಾರ್ಕ್ ನಲ್ಲಿ ನಡೆದ ಭಾರತೀಯ ಕಿಸಾನ್ ಸಂಘ ಆಯೋಜಿಸಿದ್ದ ಸಾರ್ವಜನಿಕ ಸಮಾವೇಶದಲ್ಲಿ ಮುಸಲ್ಮಾನರಿಗೆ ಮತದಾನದ ಹಕ್ಕು ರದ್ದುಪಡಿಸಬೇಕು ಎಂಬ ನನ್ನ ಹೇಳಿಕೆ ಚರ್ಚೆಗೆ ಕಾರಣವಗಿದೆ. ಬಾಯಿತಪ್ಪಿನಿಂದ ನೀಡಿರುವ ಹೇಳಿಕೆಯಿಂದ ಮುಸಲ್ಮಾನ ಸಹೋದರರಿಗೆ ಬೇಸರವಾಗಿದ್ದರೆ ವಿಷಾದ ವ್ಯಕ್ತಪಡಿಸುವುದಾಗಿ ತಿಳಿಸಿದ್ದಾರೆ.

## ನಾನು ಅನುದಾನ ಕೇಳುತ್ತೇನೆ ತಪ್ಪೇನು?

• ಉದಯವಾಹಿನಿ, ಬೆಂಗಳೂರು



ಕ್ಷೇತ್ರದ ಅಭಿವೃದ್ಧಿಗೆ ಅನುದಾನ ನೀಡುತ್ತಿಲ್ಲ. ಹಾಗಾಗಿ 5 ಗ್ಯಾರಂಟಿ ಯೋಜನೆಗಳಲ್ಲಿ ಯಾವುದಾದರು ಎರಡು ನಿಲ್ಲಿಸಿ ಎಂದು ಶಾಸಕ ಗವಿಯಪ್ಪ ಹೇಳಿಕೆ ನೀಡಿದ್ದರು. ಈ ಒಂದು ಹೇಳಿಕೆಯನ್ನ ಗೃಹ ಸಚಿವ ಜಿ ಪರಮೇಶ್ವರ್ ಅವರು ಸಮರ್ಥಿಸಿಕೊಳ್ಳುವ ರೀತಿಯಲ್ಲಿ ಹೇಳಿಕೆ ನೀಡಿದ್ದು, ನಾನು ಕೂಡ ಅನುದಾನ ಕೇಳುತ್ತೇನೆ ಅದರಲ್ಲಿ ತಪ್ಪೇನಿದೆ ಎಂದು ತಿಳಿಸಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಒಂದೆರಡು ಗ್ಯಾರಂಟಿ ನಿಲ್ಲಿಸಬೇಕು ಎಂದು ಗವಿಯಪ್ಪ ಹೇಳಿಕೆ ವಿಚಾರವಾಗಿ ಅವರವರ ಅಭಿಪ್ರಾಯ ಹೇಳು ತ್ತಾರೆ. ಗ್ಯಾರಂಟಿ ಬಗ್ಗೆ ರಾಜ್ಯ ಸರ್ಕಾರ ಪಕ್ಷ ನಿರ್ಧಾರ ತೆಗೆದುಕೊಂಡಿದೆ.

ಗ್ಯಾರಂಟಿ ಯೋಜನೆಗಳ ಬಗ್ಗೆ ಚುನಾವಣಾ ಪ್ರಣಾಳಿಕೆಯಲ್ಲಿ ಭರವಸೆ ನೀಡಲಾಗಿದ್ದು, ಗ್ಯಾರಂಟಿ ಯೋಜನೆ ನಂಬಿಕೊಂಡೆ ಜನ ನಮಗೆ ಮತ ಹಾಕಿದ್ದಾರೆ. ಶಾಸಕರು ಅನುದಾನ ಕೇಳಲಿ ಅದರಲ್ಲಿ ತಪ್ಪಿಲ್ಲ. ಈಗ ನಾನು ಕೂಡ ಅನುದಾನವನ್ನು ಕೇಳುತ್ತೇನೆ ಅದು ತಪ್ಪಾ? ಅನೇಕ ಕಾರ್ಯಕ್ರಮಗಳನ್ನು ಇಂದಿನ ಸರ್ಕಾರ ಬಿಟ್ಟು ಹೋಗಿತ್ತು.

ಅನುದಾನಕ್ಕೆ ಯಾವುದೇ ತೊಂದರೆ ಆಗಲ್ಲ ಈಗಾಗಲೇ ಬ್ಯಾಲೆನ್ಸ್ ಮಾಡುವುದಕ್ಕೆ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ ಎಂದು ಪರಮೇಶ್ವರ್ ತಿಳಿಸಿದರು.

## ರೈತರಿಗೆ ವಕ್ಫ್ ಕ್ಯಾನ್ಸರ್ ಇದ್ದಂತೆ

• ಉದಯವಾಹಿನಿ, ಯಾದಗಿರಿ

ರೈತರಿಗೆ ವಕ್ಫ್ ಕ್ಯಾನ್ಸರ್ ಇದ್ದಂತೆ. ಸಿಎಂ ಸಿದ್ದರಾಮಯ್ಯರವರು ಕಲಂ 11 ರಲ್ಲಿ ತೆಗೆದುಹಾಕಲು ಸೂಚಿಸಿದ್ದಾರೆ. ಆದರೆ, ಜಮೀನು ಅಕ್ರಮ ಮಾಡಿಕೊಂಡು ಧಮಿ ಹಾಕುತ್ತಿದ್ದಾರೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು. ಶಹಾಪುರ ತಾಲ್ಲೂಕಿನಲ್ಲಿ ಕೊಂಗಂಡಿ ಗ್ರಾಮದ ರೈತರ ಜಮೀನುಗಳಿಗೆ ಬುಧವಾರ ಭೇಟಿ ನೀಡಿದ ಶಾಸಕ ಯತ್ನಾಳ ನೇತೃತ್ವದ ನಿಯೋಗ, ವಕ್ಫ್ ಆಸ್ತಿ ಎಂದು ನಮೂದಾಗಿರುವ ಜಮೀನು ಮಾಲಿಕರೊಂದಿಗೆ ಸಂವಾದ ನಡೆಸಿದರು. ನಮ್ಮ ಜಮೀನು ರೈಲ್ವೆ ಕಾಮಗಾರಿ ಭೂಸ್ವಾಧೀನಕ್ಕಾಗಿ ವಶಪಡಿಸಿಕೊಂಡಿದ್ದಾರೆ. ಆದರೆ, ವಕ್ಫ್ ಆಸ್ತಿ ಎಂದು ತಕರಾರು ಮಾಡುತ್ತಿದ್ದಾರೆ. ಇದರಿಂದ ಭೂ ಪರಿಹಾರ ಸಿಕ್ಕಿಲ್ಲ ಎಂದು ರೈತರು ಮಾಹಿತಿ ನೀಡಿದರು. ಗ್ರಾಮದ ಸುಮಾರು 150 ಎಕರೆ ಜಮೀನು ವಕ್ಫ್ ಆಸ್ತಿ ಎಂದು ನಮೂದಾಗಿದೆ ಎಂದು ಗ್ರಾಮಸ್ಥರು ತಿಳಿಸಿದರು. ವಕ್ಫ್ ಟ್ರಿಬೂನಲ್ ವಜಾಗೊಳಿಸಬೇಕು. ಜನ ಜಾಗೃತಿಗಾಗಿ ನಮ್ಮ ಹೋರಾಟ ನಡೆಯುತ್ತಿದೆ. ಕೇಂದ್ರ ಸರ್ಕಾರ ಜಾರಿಗೆ ತರುತ್ತಿರುವ ವಕ್ಫ್ ತಿದ್ದುಪಡಿ ಬೇಗ ಅನುಷ್ಠಾನಗೊಳಿಸಬೇಕು ಎಂದು ಶಾಸಕ ಯತ್ನಾಳ ಆಗ್ರಹಿಸಿದರು.

## ಪೋಡಿ ದುರಸ್ತಿ ಸರಳೀಕರಣಕ್ಕೆ ಸರ್ಕಾರದಿಂದ ಮಹತ್ವದ ಆದೇಶ

• ಉದಯವಾಹಿನಿ, ಬೆಂಗಳೂರು



ಭೂಮಂಜೂರಿ ಪ್ರಕರಣಗಳ ದರಖಾಸ್ತು ಪೋಡಿ ದುರಸ್ತಿ ಸಂಬಂಧ ನಮೂನೆ-1 ರಿಂದ 5 ಮತ್ತು ನಮೂನೆ-6 ರಿಂದ 10 ಪ್ರಕ್ರಿಯೆ ಸರಳೀಕರಣ ಮಾಡುವ ಕುರಿತು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಆದೇಶದಲ್ಲಿ ಏನಿದೆ? ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಆಯವ್ಯಯ ಭಾಷಣದ ಕಂಡಿಕೆ 395 ರಲ್ಲಿ ದರಖಾಸ್ತು ಪೋಡಿ ಅಭಿಯಾನದಡಿ ರೈತರ ಜಮೀನಿನ ದುರಸ್ತಿ ಪ್ರಕ್ರಿಯೆಯನ್ನು ಸುಗಮಗೊಳಿಸಲು, ಸರ್ಕಾರಿ ಜಮೀನುಗಳಿಗೆ ಸರ್ಕಾರದಿಂದ ಸ್ವಯಂ ಪ್ರೇರಿತವಾಗಿ ನಮೂನೆ-1 ರಿಂದ 5 ರವರೆಗಿನ ದಾಖಲೆಗಳನ್ನು ಸಿದ್ಧಪಡಿಸಲಾಗುವುದು' ಎಂದು ಘೋಷಿಸಲಾಗಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ (27) ರ ಘನ ಉಚ್ಚ ನ್ಯಾಯಾಲಯದ ಆದೇಶದಲ್ಲಿ ಪೋಡಿ ದುರಸ್ತಿ ವಿಚಾರವಾಗಿ ನಮೂನೆ 1-5 ಮತ್ತು 6-10 ಕ್ಕೆ ಸಂಬಂಧಪಟ್ಟಂತೆ ಘನ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ 21276/2021 ದಿನಾಂಕ 10-01-2022ರ ಆದೇಶವನ್ನು ಸಂಬಂಧಪಟ್ಟ ಅಧಿಕಾರಿಗಳು ಅನುಷ್ಠಾನಗೊಳಿಸದೇ ಇರುವುದನ್ನು ಗಂಭೀರವಾಗಿ ಪರಿಗಣಿಸಿ ಈ ರೀತಿಯ ಪ್ರಕರಣಗಳು ಪುನರಾವರ್ತಿಸದಂತೆ, ನ್ಯಾಯಾಲಯದ ಆದೇಶಗಳನ್ನು ಕೂಡಲೇ ಅನುಷ್ಠಾನಗೊಳಿಸುವ ಕುರಿತು ಸೂಕ್ತ ಕ್ರಮ ವಹಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆ ಇವರಿಗೆ ಸೂಚಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (29) ರ ಸರ್ಕಾರದ ಆದೇಶದಲ್ಲಿ ದರಖಾಸ್ತು ಪೋಡಿ ಅಭಿಯಾನದಡಿ ರೈತರ ಜಮೀನಿನ ದುರಸ್ತಿ ಪ್ರಕ್ರಿಯೆಯನ್ನು ಸುಗಮಗೊಳಿಸಲು, ರಾಜ್ಯದ ಮಂಜೂರಿ ಜಮೀನುಗಳಿಗೆ ಸಂಬಂಧಿಸಿದ ವಿವರವಾದ ಮಾಹಿತಿಯು ಶೀಘ್ರವಾಗಿ ಲಭ್ಯವಾಗುವ ನಿಟ್ಟಿನಲ್ಲಿ ಭೌತಿಕವಾಗಿ ದಾಖಲಿಸಲಾಗಿರುವ ನಮೂನೆ-01 ರಿಂದ 05 ರವರೆಗಿನ ನಮೂನೆಗಳನ್ನು ಡಿಜಿಟೈಜ್ ಮಾಡಲು ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

## ಕೈ ಸರಕಾರ 2018ರಲ್ಲಿ ಜಿ.ಟಿ.ದೇವೇಗೌಡರನ್ನು ಬಂಧಿಸಲು ಮುಂದಾಗಿತ್ತು: ರೇವಣ್ಣ

• ಉದಯವಾಹಿನಿ, ಬೆಂಗಳೂರು

ಜಿ.ಟಿ.ದೇವೇಗೌಡರನ್ನು ಕಾಂಗ್ರೇಸ್ ಸರಕಾರ ಬಂಧಿಸಲು ಸಿದ್ಧತೆ ನಡೆದಿತ್ತು. ಆಗ ಕುಮಾರಸ್ವಾಮಿ ಒಂದು ಗುಟುರು ಹಾಕಿ ಎಲ್ಲರನ್ನೂ ಓಡಿಸಿದ್ದರು' ಎಂದು ಜೆಡಿಎಸ್ ನಾಯಕ ಎಚ್.ಡಿ.ರೇವಣ್ಣ ಹೊಸ ಬಾಂಬ್ ಸಿಡಿಸಿದ್ದಾರೆ. ಜೆಡಿಎಸ್ ಶಾಸಕರೊಂದಿಗೆ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ರೇವಣ್ಣ 2018 ರಲ್ಲಿ ಇದೇ ಕಾಂಗ್ರೇಸ್ ಸರಕಾರ ಇತ್ತು. ಜಿ.ಟಿ.ದೇವೇಗೌಡರನ್ನು ಬಂಧಿಸಲು ಸಿದ್ಧತೆ ನಡೆಸಲಾಗಿತ್ತು. ನಮ್ಮ ಅಭಿಮಾನಿ ಪೊಲೀಸ್ ಅಧಿಕಾರಿಯೊಬ್ಬರು ಕರೆ ಮಾಡಿ ಹೇಳಿ,ಜಿ.ಟಿ.ದೇವೇಗೌಡರನ್ನು ಬಂಧಿಸಲು ಪೊಲೀಸ್ ಅಧಿಕಾರಿಗಳ ತಂಡ ಸಿದ್ಧವಾಗಿದೆ ಎಂದು ಮುನ್ಸೂಚನೆ ನೀಡಿದರು.

ಜಿ.ಟಿ.ದೇವೇಗೌಡರೇನು ಲೂಟಿ ಹೊಡೆದಿದ್ದಾರಾ?. ಆಗ ಕುಮಾರಸ್ವಾಮಿ ಅವರು ಗುಟುರು ಹಾಕಿ ಎಲ್ಲರನ್ನೂ ಓಡಿಸಿದ್ದರು. ಯಾವು ಕೇಸು ಎಂದು ಈಗಿನ ಆಡಳಿತ ಪಕ್ಷವನ್ನು ಕೇಳಿ' ಎಂದರು. ಕುಮಾರಣ್ಣ ಗುಟುರು ಹಾಕದಿದ್ದರೆ ಜಿ.ಟಿ.ದೇವೇಗೌಡರು ನನ್ನ ಹಾಗೆ ಜೈಲಿಗೆ ಹೋಗಬೇಕಿತ್ತು. ಬೇಕಾದರೆ ಯಾವ ದೇವರ ಮುಂದೆಯೂ ಹೇಳುತ್ತೇನೆ. ಜಿ.ಟಿ.ದೇವೇಗೌಡರನ್ನು ಮನವೊಲಿಸಲು ನಮ್ಮ ಪಕ್ಷಕ್ಕೆ ಗೊತ್ತಿದೆ ಎಂದರು.

# ಉಪ ಚುನಾವಣೆಯ ಗೆಲುವು ಬೆನ್ನಲ್ಲೇ ಸಿಎಂ, ಡಿಸಿಎಂ ದೆಹಲಿಗೆ

▶▶ ವರಿಷ್ಠರ ಜೊತೆ ಸಂಪುಟ ಪುನಾರಚನೆ ಚರ್ಚೆ..? ▶▶ ಡಿಸಿಎಂ ಅವರು ನೂತನ ಸಂಸದೆ ಪ್ರಿಯಾಂಕಾ ಗಾಂಧಿ ಅವರನ್ನು ಭೇಟಿ ಮಾಡಿ ಶುಭಕೋರಿದ್ದಾರೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ 3 ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಯ ಗೆಲುವಿನ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ದೆಹಲಿಯತ್ತ ಮುಖಮಾಡಲಿದ್ದಾರೆ. ಈಗಾಗಲೇ ಡಿಕೆಶಿ ದೆಹಲಿಗೆ ತೆರಳಿದ್ದು, ಸಿಎಂ ಸಿದ್ದರಾಮಯ್ಯ ಅವರು ಗುರುವಾರ ದೆಹಲಿ ವಿಮಾನ ಏರಲಿದ್ದಾರೆ.

ಎಐಸಿಸಿ ಕಾರ್ಯಕಾರಿಣಿ ಸಭೆಯಲ್ಲಿ ಭಾಗವಹಿಸುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಸಂಜೆ ದೆಹಲಿಗೆ ತೆರಳಲಿದ್ದಾರೆ. ಶುಕ್ರವಾರ ಮಧ್ಯಾಹ್ನ ಸಭೆ ನಡೆಯಲಿದೆ. ಇದೇ ವೇಳೆ ಮುಖ್ಯಮಂತ್ರಿಗಳು ಕೇಂದ್ರದ ಕೆಲ ಸಚಿವರನ್ನು ಭೇಟಿಯಾಗಿ ರಾಜ್ಯದ ವಿಚಾರಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ ಎಂದು ಸಿಎಂ ಕಾರ್ಯಾಲಯ ತಿಳಿಸಿದೆ. ಇನ್ನು ಈಗಾಗಲೇ ದೆಹಲಿ ತಲುಪಿರುವ ಡಿಕೆ ಶಿವಕುಮಾರ್ ಅವರು ನೂತನ ಸಂಸದೆ ಪ್ರಿಯಾಂಕಾ ಗಾಂಧಿ ಅವರನ್ನು ಭೇಟಿ ಮಾಡಿ ಶುಭಕೋರಿದ್ದಾರೆ. ಶುಕ್ರವಾರ ಸಿಎಂ, ಡಿಸಿಎಂ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ.




**ಉಪ ಚುನಾವಣೆ ಗೆಲುವಿನ ಮಾಹಿತಿ:** ರಾಜ್ಯದಲ್ಲಿ 3 ಉಪ ಚುನಾವಣೆ ಗೆಲುವಿನ ಬಗ್ಗೆಯೂ ಹೈಕಮಾಂಡ್ ನಾಯಕರಿಗೆ ಸಿಎಂ, ಡಿಸಿಎಂ ಮಾಹಿತಿ ನೀಡಲಿದ್ದಾರೆ. ಸರ್ಕಾರದ ವಿರುದ್ಧದ ವಿರೋಧ ಪಕ್ಷಗಳ ಆರೋಪಗಳ ನಡುವೆಯೂ 3 ಕ್ಷೇತ್ರಗಳನ್ನು ಗೆದ್ದ ವಿಚಾರವಾಗಿ ವರಿಷ್ಠರ ಗಮನಕ್ಕೆ ತರಲಿದ್ದಾರೆ.

### ಸಂಪುಟ ಪುನಾರಚನೆ ಚರ್ಚೆ

ಇನ್ನು ರಾಜ್ಯದಲ್ಲಿ ಸಂಪುಟ ಪುನಾರಚನೆ ಚರ್ಚೆಗಳು ನಡೆಯುತ್ತಿದೆ. ಈ ಬಗ್ಗೆ ಸ್ವತಃ ಡಿಕೆಶಿ ಸುಳಿವನ್ನೂ ನೀಡಿದ್ದಾರೆ. ಕೆಲವು ಸಚಿವರು ತ್ಯಾಗ ಮಾಡಬೇಕಾದ ಸಂದರ್ಭ ಬರಬಹುದು ಎಂಬ ಅರ್ಥದಲ್ಲೂ ಹೇಳಿಕೆ ನೀಡಿದ್ದಾರೆ. ಈ ನಿಟ್ಟಿನಲ್ಲಿ ದೆಹಲಿ ಭೇಟಿಯ ಸಂದರ್ಭದಲ್ಲಿ ವರಿಷ್ಠರಿಗೆ ಈ ವಿಚಾರವನ್ನು ಗಮನಕ್ಕೆ ತರುವ ಸಾಧ್ಯತೆ ಇದೆ.ಆದರೆ ರಾಜ್ಯದಲ್ಲಿ ಸರ್ಕಾರ ರಚನೆಯಾಗಿ ಒಂದುವರೆ ವರ್ಷ ಆಗಿರುವಾಗಲೇ ಸಂಪುಟ ಪುನಾರಚನೆಯ ಅಗತ್ಯತೆ ಏಕೆ ಎಂಬ ಪ್ರಶ್ನೆಗಳನ್ನು ಕೆಲವು ಸಚಿವರು ಕೇಳುತ್ತಿದ್ದಾರೆ. ಈ ಎಲ್ಲಾ ಹಿನ್ನೆಲೆಯಲ್ಲಿ ವರಿಷ್ಠರ ಜೊತೆಗೆ ಚರ್ಚೆ ನಡೆಸಿ ತೀರ್ಮಾನ ಕೈಗೊಳ್ಳುವ ಸಾಧ್ಯತೆ ಇದೆ. ಒಂದು ವೇಳೆ ವರಿಷ್ಠರು ಗ್ರೀನ್ ಸಿಗ್ನಲ್ ನೀಡಿದರೆ ಮಾತ್ರ ಸಂಪುಟ ಪುನಾರಚನೆ ಪ್ರಕ್ರಿಯೆ ಶುರುವಾಗಲಿದೆ.

### ದೆಹಲಿಯಿಂದ ವಾಪಸ್ಸಾದ ನಂತರದ ಕುತೂಹಲ

ಈಗಾಗಲೇ ಸಂಪುಟ ಪುನರಾಚನೆಯ ವದಂತಿಗಳನ್ನು ಸಿಎಂ ಹಾಗೂ ಡಿಸಿಎಂ ಇಬ್ಬರೂ ಅಲ್ಲಗಳೆದಿದ್ದಾರೆ. ಸಚಿವರಿಗೆ ಇನ್ನೆರಡು ತಿಂಗಳಲ್ಲಿ ಸಚಿವ ಸ್ಥಾನ ತೊರೆಯುವಂತೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಹೇಳಲಾಗಿದೆ. ಆದರೆ, ಇವ್ಯಾವನ್ನು ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಒಪ್ಪಿಕೊಂಡಿಲ್ಲ. ಈಗ ದೆಹಲಿಗೆ ಹೋಗಿ ಬಂದ ನಂತರ ಸಂಪುಟದಲ್ಲೇನಾದರೂ ಬದಲಾವಣೆ ಆಗಬಹುದಾ ಎಂಬ ಕುತೂಹಲ ಮೂಡಿದೆ.

**ಈ ದಿನದ ದರ** | ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,751/Gram24ct ₹7,105/Gram22ct | ಬೆಳ್ಳಿ: ₹89.50/Gram



**ಸಿದ್ಧಸೂಕ್ತಿ**

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಇಸ್ಲಾಂ ಕ್ರಿಶ್ಚಿಯನ್ ವೈರುಧ್ಯ

ಭಾರತದಲ್ಲಿ ಹಿಂದುಗಳಲ್ಲದೇ ಜೈನರು ಬೌದ್ಧರು ಸಿಖ್ಖರು ಪಾರ್ಸಿಗಳು ನೆಲೆಸಿದ್ದಾರೆ. ಬಸದಿ ವಿಹಾರ ಗುರುದ್ವಾರ ನಿರ್ಮಿಸಿ ಅವರಿಷ್ಟದೇವರನ್ನು ಆರಾಧಿಸುತ್ತಾರೆ. ಪಾರ್ಸಿಗಳನ್ನು ಹೊರತು ಪಡಿಸಿ ಉಳಿದವರೆಲ್ಲರೂ ಭಾರತ ಮೂಲದವರು. ಈ ಎಲ್ಲರೂ ಸೌಹಾರ್ದದಿಂದಲೇ ಇದ್ದೇವೆ. ಆದರೆ ಇಸ್ಲಾಂ ಕ್ರೈಸ್ತ ಜನ ಹಿಂದುಗಳೊಂದಿಗೆ ನಿರಂತರ ಸಂಘರ್ಷಣೆಯಲ್ಲಿದ್ದಾರೆ. ಅವರು ಮಸೀದಿ ಚರ್ಚ್ ನಿರ್ಮಿಸಿ ಅವರಿಷ್ಟದೇವರನ್ನು ಪೂಜಿಸಲು ಹಿಂದುಗಳ ವಿರೋಧವಿಲ್ಲ. ಆದರೆ ಹಿಂದುಗಳ ದೇವರನ್ನು ನಿಂದಿಸುವುದನ್ನು, ಮತಾಂತರ ಮಾಡಿಕೊಳ್ಳುವುದನ್ನು ಇದಕ್ಕಾಗಿ ಬಲಾತ್ಕಾರ ಹಿಂಸೆ ಅತ್ಯಾಚಾರ ಕೊಲೆ ನಡೆಸುವುದನ್ನು, ದೇವರ ವಿಗ್ರಹಗಳನ್ನು ಕಡಿದು ಹಾಕುವುದನ್ನು ದೇವಸ್ಥಾನಗಳನ್ನು ಕೆಡವಿ ಅಲ್ಲಿ ಅವುಗಳ ಮೇಲೆ ಮಸೀದಿ ಕಟ್ಟುವುದನ್ನು, ಈ ದೇಶದಲ್ಲಿದ್ದು ಪಾಕಿಸ್ತಾನದ ಧ್ವಜವನ್ನು ಹಾರಿಸುವುದನ್ನು ವಿರೋಧಿಸುತ್ತೇವೆ. ಅಲ್ಲಾಹು ಅಕ್ಬರ್ ಎನ್ನುವುದನ್ನು ವಿರೋಧಿಸುವುದಿಲ್ಲ, ಭಾರತ ಮಾತೆಗೆ ವಂದಿಸದಿರುವುದನ್ನು ವಿರೋಧಿಸುತ್ತೇವೆ. ಮತ್ತೊಂದು ಧರ್ಮವನ್ನು ನಿಂದಿಸೆಂದು ನೋವುಂಟುಮಾಡೆಂದು ನಾಶಪಡಿಸೆಂದು ಯಾವ ಧರ್ಮವೂ ಪ್ರಚೋದಿಸುವುದಿಲ್ಲ. ಹಾಗಿದ್ದರೆ ಅದು ಧರ್ಮವಲ್ಲ. ಧರ್ಮದ ಹೆಸರಿನಲ್ಲಿ ಧರ್ಮವರಿಯದ ಕಿಡಿಗೇಡಿಗಳು ಮಾಡುವ ದುಷ್ಕೃತ್ಯಗಳಿವು.

# ಬೀದರಿನಲ್ಲಿ ವಕ್ಫ್ ಹೋರಾಟಕ್ಕೆ ಚಾಲನೆ: ಯತ್ನಾಳ್

## ಯತ್ನಾಳರ ಮೂರ್ಖತನದ ಪ್ರದರ್ಶನ, ಮನೆಯಿಂದ ಹೊರ ಬಂದು ಹೋರಾಟ ಮಾಡಿ

• ಉದಯವಾಹಿನಿ, ಬೆಂಗಳೂರು

ಬಸವಣ್ಣನವರಂತೆ ಹೊಳೆಗೆ ಹಾರಿ' ಎಂದು ಭಾಷಣ ಮಾಡಿರುವ ಬಿಜೆಪಿ ಶಾಸಕ ಹಾಗೂ ಕೇಂದ್ರದ ಮಾಜಿ ಸಚಿವ ಬಸವನಗೌಡ ಪಾಟೀಲ ಯತ್ನಾಳ್ ಅವರ ಹೇಳಿಕೆಗೆ ರಾಜ್ಯದಾದ್ಯಂತ ವ್ಯಾಪಕ ಆಕ್ರೋಶ ವ್ಯಕ್ತವಾಗುತ್ತಿದೆ. ಬೀದರಿನಲ್ಲಿ ವಕ್ಫ್ ಹೋರಾಟಕ್ಕೆ ಚಾಲನೆ ನೀಡುವ ಸಂದರ್ಭದಲ್ಲಿ ಮಾತನಾಡಿದ ಯತ್ನಾಳ್ ಅವರು, ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ವಕ್ಫ್ ನಿಂದ ನಿಮ್ಮ ಆಸ್ತಿ ರಕ್ಷಣೆ ಮಾಡಿಕೊಳ್ಳಬೇಕಾದರೆ ನೀವು ಮನೆಯಿಂದ ಹೊರ ಬಂದು ಹೋರಾಟ ಮಾಡ ಬೇಕಾಗುತ್ತದೆ. ಜಮೀನು ಹೋದರೂ ನೀವು ಹೊರಗ ಬರಲ್ಲ ಎಂದರೆ ಬಸವಣ್ಣನವರ ಹಾಗೆ ತುಂಬಿದ ಹೊಳೆಗೆ ಹಾರಿ ಸಾಯಬೇಕು. ಇಲ್ಲವಾದರೆ ಗಡ್ಡ ಬಿಟ್ಟು ಮುಸ್ಲಿಂ ಆಗಿ ಎಂದು ಕೈಯಿಂದ ಸನ್ನೆ ಮಾಡಿದರು. ಈ ಹೇಳಿಕೆ ಇದೀ ವ್ಯಾಪಕ ವಿರೋಧ ಹಾಗೂ ಆಕ್ರೋಶ ವ್ಯಕ್ತವಾಗುತ್ತಿದೆ. ಜಾಗತಿಕ ಲಿಂಗಾಯತ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಮತ್ತು ನಿವೃತ್ತ ಐಎಎಸ್ ಅಧಿಕಾರಿ ಎಸ್.ಎಂ. ಜಾಮದಾರ್ ಅವರು ಯತ್ನಾಳ್ ಹೇಳಿಕೆ ಆಘಾತ ತಂದಿದೆ ಎಂದು ಹೇಳಿದ್ದಾರೆ. ಯತ್ನಾಳ್ ಅವರು ಸಂದರ್ಭ, ಸಮಯ ಮತ್ತು ಸ್ಥಳದ ಎಲ್ಲಾ ಜ್ಞಾನವನ್ನು ಕಳೆದುಕೊಂಡಿದ್ದಾರೆಂದು ಕಿಡಿಕಾರಿದ್ದಾರೆ. ಯತ್ನಾಳ್ ಅವರ ಹೇಳಿಕೆಯು ಅಲ್ಪಸಂಖ್ಯಾತರ ವಿರುದ್ಧ ಬಹುಸಂಖ್ಯಾತರನ್ನು ಕೆರಳಿಸುವ ಉದ್ದೇಶದಿಂದ ಕೂಡಿದ್ದು.



ಉದಯವಾಹಿನಿ ಚಿತ್ರ

**ಲಿಂಗಾಯತ ವಿದ್ವಾಂಸರು ಕೂಡ ಯತ್ನಾಳ್ ಹೇಳಿಕೆ**

ಬಸವಣ್ಣನವರ ಹೆಸರನ್ನು ಹೇಳುವ ಮೂಲಕ ಎಲ್ಲೆ ಮೀರಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ಲಿಂಗಾಯತ ವಿದ್ವಾಂಸರು ಕೂಡ ಯತ್ನಾಳ್ ಹೇಳಿಕೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಯತ್ನಾಳ್ ಹೇಳಿಕೆ ಬಸವಣ್ಣನವರ ಮೇಲಿನ ನೇರ ದಾಳಿ ಎಂದು ಪ್ರಾಧ್ಯಾಪಕ ಪಂಚಾಕ್ಷರಿ ಹಳೇಬೀಡು ಹೇಳಿದ್ದಾರೆ. ಕೆಲವರು ಅಜ್ಞಾನದಿಂದ, ಇನ್ನು ಕೆಲವರು ದುರುದ್ದೇಶದಿಂದ ಮಾತನಾಡುತ್ತಿದ್ದಾರೆ, ಯತ್ನಾಳ್ ಅವರು ಬಸವಣ್ಣನವರನ್ನು ಅವಮಾನಿಸಲು, ಲಿಂಗಾಯತ ನಂಬಿಕೆಯನ್ನು ಹಾಳು ಮಾಡಲು ಮತ್ತು ಬಸವ ತತ್ವದ ಪ್ರಬಲ ಸತ್ಯಗಳನ್ನು ಅಳಿಸಲು ಪ್ರಯತ್ನಿಸುತ್ತಿದ್ದಾರೆ ಎಂಬುದು ಇದರಿಂದ ಸ್ಪಷ್ಟವಾಗುತ್ತಿದೆ ಎಂದು ಕಿಡಿಕಾರಿದ್ದಾರೆ. ಯಾರೋ ಅಟ್ಟಿಸಿಕೊಂಡು ಬಂದಾಗ ಬಸವಣ್ಣನವರು ಹೇಡಿಯಂತೆ ಹೊಳೆಗೆ ಹಾರಿ ಸತ್ತರು ಎನ್ನುವ ಅರ್ಥ ಈ ಹೇಳಿಕೆಯಲ್ಲಿದೆ.

> ಇಂತಹ ಮಾತುಗಳಿಂದ ಬಸವಣ್ಣನವರ ಅವಹೇಳನ ಆಗುವುದಿಲ್ಲ. ಅವರ ಸಾಧನೆ ಇಡೀ ಜಗತ್ತಿಗೆ ಗೊತ್ತಿದೆ. ಇಲ್ಲಿ ನಡೆದಿರುವುದು ಯತ್ನಾಳರ ಮೂರ್ಖತನದ ಪ್ರದರ್ಶನ. ಯತ್ನಾಳ ಪ್ರಬುದ್ಧತೆ ಏನು ಎಂದು ಎಲ್ಲರಿಗೂ ಗೊತ್ತಿಯುವ ವಿಷಯ. ತನ್ನ ಮುಖಕ್ಕೆ ತಾನೇ ಮಸಿ ಬಳೆದುಕೊಂಡಿದ್ದಾರೆ. ಇದರಿಂದ ಬಸವಣ್ಣನವರಿಗೆ ಏನೂ ಆಗದಿದ್ದರೂ ಸಾಮಾಜಿಕ ಕಳಕಳಿ ಇರುವ ಪ್ರತಿಯೊಬ್ಬರೂ ಇದು ಖಂಡಿಸಬೇಕಾಗಿರುವ ವಿಷಯ ಎಂದು ತಿಳಿಸಿದ್ದಾರೆ.
>
> -ಎಸ್.ಎಂ.ಜಾಮದಾರ್

> ಕೆಲವು ವೈದಿಕಶಾಹಿ ಮನಸ್ಥಿತಿಯವರು ಸತ್ಯ ಗೊತ್ತಿದ್ದೂ ಬೇಕಂತಲೇ ಈ ರೀತಿ ಮಾತನಾಡುತ್ತಾರೆ. ಅವರ ಉದ್ದೇಶ ಬಸವಣ್ಣನವರನ್ನು ತುಳಿಯುವುದು, ಲಿಂಗಾಯತ ಧರ್ಮ ಮತ್ತು ಬಸವತತ್ವ ಮೇಲೇಳದಂತೆ ನೋಡಿಕೊಳ್ಳುವುದು. ಇಂತವರು ಲಿಂಗಾಯತ ಸಂಪ್ರದಾಯದಲ್ಲಿ ಹುಟ್ಟಿರುವ ಯತ್ನಾಳರನ್ನು ಛೂ ಬಿಟ್ಟು ನಮ್ಮ ಕೈಯಲ್ಲೇ ನಮ್ಮ ಗುರುವನ್ನು ನಿಂದಿಸುವ ಕೆಲಸ ಮಾಡುತ್ತಿದ್ದಾರೆ. ಇಲ್ಲಿ ಬೇರೆಯವರು ಹೊರಗಡೆ ನಿಂತು ಮಗನ ಕೈಯಲ್ಲೇ ಅಪ್ಪನನ್ನು ನಿಂದಿಸುವ ಕೆಲಸ ಮಾಡುತ್ತಿದ್ದಾರೆ.

ಯತ್ನಾಳರು ಈ ರೀತಿ ಹೇಳಲು ವಚನಗಳಲ್ಲಿ ಯಾವುದೇ ಸಾಕ್ಷ್ಯಾಧಾರ ಇಲ್ಲ. ವಚನಗಳನ್ನು ಸರಿಯಾಗಿ ಅಧ್ಯಯನ ಮಾಡಿರುವವರಿಗೆ ಬಸವಣ್ಣನವರ ಅಂತ್ಯ ಹೇಗಾಯಿತು, ಅವರ ಕೊನೆ ಘಳಿಗೆ ಹೇಗಿತ್ತು ಅನ್ನುವುದರಲ್ಲಿ ಸ್ಪಷ್ಟತೆ ಇದೆ. ಆದರೆ ಯತ್ನಾಳ್ ಈ ಅರಿವಿಲ್ಲದೆ ಅಪಚಾರ ಮಾಡಿದ್ದಾರೆ. ಕೆಲವರು ಅಜ್ಞಾನದಿಂದ ಈ ರೀತಿ ಮಾತಾಡುತ್ತಾರೆ.

## ಹರಿದಾಸ ವೈಭವ ಗಾಯನ

• ಉದಯವಾಹಿನಿ, ಬೆಂಗಳೂರು



ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀ ಪಾದಂಗಳವರ ಆದೇಶ ದಂತೆ ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಗಿರಿ ರಾಜಾಚಾರ್ಯರ ನೇತೃತ್ವದಲ್ಲಿ ನವೆಂಬರ್ 28, ಗುರುವಾರ ಸಂಜೆ 7-00ಕ್ಕೆ ಶ್ರೀಮತಿ ರೇಖಾ ಭಟ್, ನಂಜನಗೂಡು ಇವರಿಂದ ಹರಿದಾಸ ವೈಭವ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಇವರ ಗಾಯನಕ್ಕೆ ಕೀ-ಬೋರ್ಡ್ ವಾದನದಲ್ಲಿ ಶ್ರೀ ಅಮಿತ್ ಶರ್ಮಾ ಮತ್ತು ತಬಲಾ ವಾದನದಲ್ಲಿ ಶ್ರೀ ಸರ್ವೋತ್ತಮ ಸಹಕರಿಸಲಿದ್ದಾರೆ ಎಂದು ಶ್ರೀ ಗೊಗ್ಗಿ ಕೃಷ್ಣಾಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಒಂದನೇ ಮುಖ್ಯರಸ್ತೆ, ಪವಮಾನಪುರ, ಬೆಂಗಳೂರು-560062

## ಉದ್ಯಮಿ ಬಿಲ್ಡರ್‌ಗಳಿಗೆ ಐಟಿ ಶಾಕ್: 25ಕ್ಕೂ ಹೆಚ್ಚು ಕಡೆ ದಾಳಿ, ದಾಖಲೆ ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಆದಾಯ ತೆರಿಗೆ ವಂಚನೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿರುವ ಉದ್ಯಮಿಗಳಿಗೆ ಹಾಗೂ ಬಿಲ್ಡರ್ ಗಳಿಗೆ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಶಾಕ್ ನೀಡಿದ್ದು, ಉದ್ಯಮಿ ಮತ್ತು ಬಿಲ್ಡರ್ ಗಳ ಮನೆ ಹಾಗೂ ಕಚೇರಿಗಳ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲನೆ ಮಾಡುತ್ತಿದ್ದಾರೆ. ಸಿನಿಮಾ ನ ವ್ಯವಹಾರ ಕರ್ನಾಟಕ ಹೌದು ಬೆಂಗಳೂರಿನಲ್ಲಿ ಉದ್ಯಮಿಗಳಿಗೆ ಐಟಿ ಶಾಕ್ ನೀಡಿದ್ದು, 25 ಹೆಚ್ಚು ಕಡೆ ದಾಳಿ ನಡೆಸಿದ ಐಟಿ ಅಧಿಕಾರಿಗಳು, ಉದ್ಯಮಿಗಳು ಬಿಲ್ಡರ್ ಗಳ ಮನೆ ಹಾಗೂ ಕಚೇರಿಗಳಲ್ಲಿ ಐಟಿ ಅಧಿಕಾರಿಗಳು ದಾಳಿ ಮಾಡಿ ಪರಿಶೀಲನೆ ನಡೆಸುತ್ತಿದ್ದಾರೆ. ದಾಳಿ ಕುರಿತಂತೆ ಇನ್ನಷ್ಟು ಮಾಹಿತಿಯನ್ನು ನಿರೀಕ್ಷಿಸಲಾಗುತ್ತಿದೆ.

## ಉದ್ಯಾನವನಗಳಲ್ಲಿ ನಾಯಿಗಳ ಮಲ ವಿಸರ್ಜನೆಗೆ ಕಾರಣವಾಗುವವರಿಗೆ ಹೆಚ್ಚಿನ ದಂಡ ವಿಧಿಸಿ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿನ ಉದ್ಯಾನವನಗಳ ಸ್ವಚ್ಛತೆ ಕಾಯ್ದುಕೊಳ್ಳುವುದು ರಾಜ್ಯ ಸರ್ಕಾರ ಹಾಗೂ ಬಿಬಿಎಂಪಿ ಜವಾಬ್ದಾರಿಯಾಗಿದ್ದು ಈ ನಿಟ್ಟಿನಲ್ಲಿ ಉದ್ಯಾನವನಗಳಲ್ಲಿ ನಾಯಿಗಳ ಮಲ ವಿಸರ್ಜನೆಗೆ ಕಾರಣವಾಗುವವರಿಗೆ ಹೆಚ್ಚಿನ ದಂಡ ವಿಧಿಸುವಂತೆ ಹೈಕೋರ್ಟ್ ಸೂಚನೆ ನೀಡಿದೆ. ನಗರದ ಉದ್ಯಾನವನಗಳಲ್ಲಿ ಸಾಕು ನಾಯಿಗಳಿಂದ ಆಗುತ್ತಿರುವ ಮಲ ವಿಸರ್ಜನೆಗೆ ಕಡಿವಾಣ ಹಾಕುವಂತೆ ಸರ್ಕಾರಕ್ಕೆ ಸೂಚನೆ ನೀಡಬೇಕೆಂದು ಕೋರಿ ಮೆಸರ್ಸ್ ಕಂಪ್ಯಾಷನ್ ಅನ್ಲಿಮಿಟೆಡ್ ಪ್ಲಸ್ ಆಯಕ್ಷನ್ (ಕೂಪ) ಎಂಬ ಸರ್ಕಾರೇತರ ಸಂಸ್ಥೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿತ್ತು. ಈ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎನ್ .ವಿ.ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ.ವಿ.ಅರವಿಂದ ಅವರಿದ್ದ ವಿಭಾಗೀಯ ಪೀಠ, ಹಲವು ಮಾರ್ಗಸೂಚಿಗಳನ್ನು ರಚಿಸಿ, ಅರ್ಜಿ ಇತ್ಯರ್ಥಪಡಿಸಿತು.

## ನವೆಂಬರ್ 30 ರೊಳಗೆ ಕೆಲಸ ಮಾಡದಿದ್ರೆ ಸಿಗಲ್ಲ ರೇಷನ್

• ಉದಯವಾಹಿನಿ, ಬೆಂಗಳೂರು

ಪಡಿತರ ಚೀಟಿ ಹೊಂದಿರುವವರಾಗಿದ್ದರೆ, ಡಿಸೆಂಬರ್ 1 ರ ಮೊದಲು ನಿಮ್ಮ ಇ-ಕೆವೈಸಿ ಪೂರ್ಣಗೊಳಿಸುವುದು ಬಹಳ ಮುಖ್ಯ. ಇದನ್ನು ಮಾಡದಿದ್ದರೆ ನಿಮ್ಮ ಪಡಿತರ ಚೀಟಿ ರದ್ದಾಗಬಹುದು. ಸಿನಿಮಾ ಕೇಂದ್ರ ಸರ್ಕಾರವು ಈಗಾಗಲೇ ಎಲ್ಲಾ ಪಡಿತರ ಚೀಟಿದಾರರಿಗೆ ಇ-ಕೆವೈಸಿ ಮಾಡುವಂತೆ ಸೂಚನೆಗಳನ್ನು ನೀಡಿದ್ದು, ಸೆಪ್ಟೆಂಬರ್ 1 ಕೊನೆಯ ದಿನಾಂಕವಾಗಿತ್ತು. ವ್ಯವಹಾರ ಆದರೆ, ಇ-ಕೆವೈಸಿ ಮಾಡದವರಿಗೆ ಸರ್ಕಾರ ಒಂದು ತಿಂಗಳು ವಿಸ್ತರಿಸಿತ್ತು. ಕರ್ನಾಟಕ ಈಗ ಈ ದಿನಾಂಕವನ್ನು ನ. 30 ರವರೆಗೆ ವಿಸ್ತರಿಸಲಾಗಿದೆ. ಈ ದಿನಾಂಕದೊಳಗೆ ಇ-ಕೆವೈಸಿ ಪೂರ್ಣಗೊಳಿಸಲು ನಿಮಗೆ ಸಾಧ್ಯವಾಗದಿದ್ದರೆ, ನಿಮ್ಮ ಪಡಿತರ ಚೀಟಿಯನ್ನು ರದ್ದುಗೊಳಿಸಲಾಗುತ್ತದೆ. ಪಡಿತರ ಚೀಟಿದಾರರು ತಮ್ಮ ಗುರುತು ನೋಂದಣಿ ಅಥವಾ ಮರುನೋಂದಣಿ ಮಾಡಿಸದೇ ಇರುವ ಎಲ್ಲಾ ಸದಸ್ಯರು ನವೆಂಬರ್ 30 ರೊಳಗೆ ತಮ್ಮ ಹತ್ತಿರದ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ತಮ್ಮ ಬೆರಳಚ್ಚು ನೀಡಿ ಭಯೋಸಂಗ್ರಹಣೆ (ಇ-ಕೆವೈಸಿ) ಸಂಗ್ರಹಣೆ ಕಾರ್ಯ ಮಾಡಿಸಿಕೊಳ್ಳಬೇಕು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ತಿಳಿಸಿದೆ.

## ಸಾರಿಗೆ ನೌಕರರ ಮುಷ್ಕರ : ಡಿ.31 ರಿಂದ ಬಸ್ ಸಂಚಾರದಲ್ಲಿ ವ್ಯತ್ಯಯ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಸಾರಿಗೆ ಇಲಾಖೆಯ ನೌಕರರು ಸರ್ಕಾರದ ವಿರುದ್ಧ ಸಿಡಿದೆದ್ದಿದ್ದು ಡಿ.31 ರಿಂದ ಮುಷ್ಕರಕ್ಕೆ ಕರೆ ಕೊಟ್ಟಿದ್ದು, ಬಸ್ ಸಂಚಾರದಲ್ಲಿ ವ್ಯತ್ಯಯವಾಗುವ ಸಾಧ್ಯತೆಯಿದೆ. ಸಾರಿಗೆ ನೌಕರರ ಹಿರಿಯ ಮುಖಂಡ ಅನಂತ ಸುಬ್ಬರಾವ್ ಅವರು ಈಗಾಗಲೇ ಡಿ. 31 ರಿಂದ ಸಾರಿಗೆ ಮುಷ್ಕರಕ್ಕೆ ಈಗಾಗಲೇ ಕರೆ ನೀಡಿದ್ದಾರೆ. ಬೆಳಗಾವಿಯಲ್ಲಿ ಡಿ.9ರಿಂದ ಚಳಿಗಾಲದ ಅಧಿವೇಶನ ನಡೆಯಲಿದ್ದು, ಅಂದು ಸಾರಿಗೆ ನೌಕರರು ಬೆಳಗಾವಿ ಚಲೋ ನಡೆಸಲಿದ್ದು, ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ನೋಟಿಸ್ ನೀಡಲಾಗುವುದು. ಬಳಿಕ ಡಿ. 31ರಿಂದ ಸಾರಿಗೆ ಮುಷ್ಕರ ಆರಂಭಿಸಲಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ. ರಾಜ್ಯದ 6 ಸಾರಿಗೆ ನೌಕರರ ಸಂಘಟನೆಗಳ ಒಕ್ಕೂಟ ಸೇರಿ ಜಂಟಿ ಕ್ರಿಯಾ ಸಮಿತಿ ಮಾಡಿಕೊಂಡಿದ್ದು, 6 ಸಂಘಟನೆಗಳು ಮುಷ್ಕರಕ್ಕೆ ಬೆಂಬಲ ಘೋಷಿಸಿವೆ. ಸಾರಿಗೆ ನೌಕರರ ಬೇಡಿಕೆಗಳನ್ನು ಸರ್ಕಾರ ನಿರ್ಲಕ್ಷ್ಯ ಮಾಡಿದರೆ ಸಾರಿಗೆ ಸಂಚಾರ ಸಂಪೂರ್ಣ ಸ್ಥಗಿತಗೊಳಿಸಲಾಗುವುದು ಎಂದು ಸಾರಿಗೆ ನೌಕರರು ಎಚ್ಚರಿಕೆ ನೀಡಿದ್ದಾರೆ.

## ಸರ್ಕಾರದ ವಿರುದ್ಧ ಮುಗಿಬೀಳಲು ವಿಪಕ್ಷಗಳು ಸಜ್ಜು!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬೆಳಗಾವಿಯ ಸುವರ್ಣಸೌಧದಲ್ಲಿ ಚಳಿಗಾಲ ಅಧಿವೇಶನ ಡಿ.9ರಿಂದ ಆರಂಭಗೊಳ್ಳಲಿದ್ದು ಅಧಿವೇಶನ ಹಿನ್ನೆಲೆಯಲ್ಲಿ ವಕ್ಫ್ ವಿವಾದ, ಬಿಪಿಎಲ್ ಕಾರ್ಡ್ ರದ್ದು ಮತ್ತಿತರ ವಿಷಯಗಳನ್ನು ಪ್ರಸ್ತಾಪಿಸಿ ಸರ್ಕಾರದ ವಿರುದ್ಧ ಮುಗಿಬೀಳಲು ಸಜ್ಜಾಗಿವೆ.

ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು, ಮುಂದಿನ ತಿಂಗಳು ಬೆಳಗಾವಿಯಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನ ನಡೆಯಲಿದೆ. ಈ ಬಾರಿ ರಾಜ್ಯ ಸರ್ಕಾರ ಕೇವಲ ಎರಡು ವಾರಗಳ ಅಧಿವೇಶನವನ್ನು ನಿಗದಿಪಡಿಸಿದೆ. ಇನ್ನೂ ಹೆಚ್ಚು ದಿನ ಅಧಿವೇಶನ ನಡೆಸಲು ಮನವಿ ಮಾಡಲಾಗುವುದು ಎಂದು ಹೇಳಿದರು. ವಕ್ಫ್ ಮಂಡಳಿಯಿಂದ ಆಗುತ್ತಿರುವ ಭೂ ಕಬಳಿಕೆ ಜ್ವಲಂತ ಸಮಸ್ಯೆಯಾಗಿದೆ. ಬಡವರ ರೇಷನ್ ಕಾರ್ಡ್ ರದ್ದು ಮಾಡಿ ಗ್ಯಾರಂಟಿಗಾಗಿ ಹಣ ಉಳಿಸಲಾಗುತ್ತಿದೆ. ಈ ಸಮಸ್ಯೆಯ ವಿರುದ್ಧ ಅಧಿವೇಶನದಲ್ಲಿ ಹೋರಾಟ ಮಾಡಲಾಗುವುದು ಅಬಕಾರಿ ಇಲಾಖೆಯ ಹಗರಣ, ಬೆಳೆನಾಶಕ್ಕೆ ಪರಿಹಾರ ಮೊದಲಾದ ಸಮಸ್ಯೆಯ ವಿರುದ್ಧವೂ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.

## ಬಿಜೆಪಿ ಕಾರ್ಯಕರ್ತರಿಗೆ ಧೈರ್ಯ ತುಂಬಿದ ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ಸೋಲಿಗೆ ಎದೆಗುಂದಬೇಡಿ. ದುರ್ಮಾರ್ಗಗಳನ್ನು ಬಳಸಿ ಉಪಚುನಾವಣೆಯನ್ನು ಗೆಲ್ಲುವುದು ಆಡಳಿತ ನಡೆಸುವ ಸಂದರ್ಭದಲ್ಲಿ ಕಾಂಗ್ರೆಸ್ಸಿಗೆ ಹೊಸತೇನೂ ಅಲ್ಲ. ಈ ನಿಟ್ಟಿನಲ್ಲಿ ಈ ಚುನಾವಣೆಯ ಅಪಜಯವನ್ನು ನಾವ್ಯಾರೂ ಹಿನ್ನಡೆ ಎಂದು ಪರಿಗಣಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಹೇಳುವ ಮೂಲಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಪಕ್ಷದ ಕಾರ್ಯಕರ್ತರಿಗೆ ಧೈರ್ಯ ತುಂಬುವ ಪ್ರಯತ್ನ ಮಾಡಿದ್ದಾರೆ.

ಈ ಸಂಬಂಧ ಅವರು ಸಾಮಾಜಿಕ ಜಾಲತಾಣದ ಮೂಲಕ 'ಸಹೃದಯ ಕಾರ್ಯಕರ್ತ ಬಂಧುಗಳೇ' ಎಂದು ಸಂಬೋಧಿಸಿ ಸುದೀರ್ಘ ಬಹಿರಂಗ ಪತ್ರ ಬರೆದಿದ್ದಾರೆ. ಪತ್ರದಲ್ಲೇನಿದೆ...



ಸಹೃದ ಯ ಕಾರ್ಯಕರ್ತ ಬಂಧುಗಳೇ, ಉಪ ಚುನಾವಣೆ ಫಲಿತಾಂಶಗಳು ಪಕ್ಷ ಸಂಘಟನೆಯ ಸಾಮರ್ಥ್ಯ ಹಾಗೂ ಪ್ರಭಾವವನ್ನು ಬಿಂಬಿಸುವ ಅಳತೆಗೋಲಾಗಿರುವುದಿಲ್ಲ. ಸ್ಥಳೀಯ ಸಮಸ್ಯೆಗಳು ಹಾಗೂ ಸರ್ಕಾರದ ಪ್ರಭಾವವನ್ನು ಆಧರಿಸಿ ಈ ಚುನಾವಣಾ ಫಲಿತಾಂಶಗಳು ಹೊರಹೊಮ್ಮುತ್ತವೆ. ಸದ್ಯ ರಾಜ್ಯದಲ್ಲಿ ನಡೆದ ಮೂರು ಕ್ಷೇತ್ರಗಳ ಉಪಚುನಾವಣೆಯಲ್ಲಿ ನಮ್ಮ ಪಕ್ಷ ಎರಡು ಕ್ಷೇತ್ರಗಳಲ್ಲಿ ಮಿತ್ರ ಪಕ್ಷ ಜೆಡಿಎಸ್ ಒಂದು ಕ್ಷೇತ್ರದಲ್ಲಿ ಪರಾಜಯಗೊಂಡಿರುವ ಕಾರಣದಿಂದ ನಾವ್ಯಾರೂ ಎದೆಗುಂದಬೇಕಿಲ್ಲ.

ನಿರೀಕ್ಷೆಯಂತೆ ಆಡಳಿತ ಪಕ್ಷ ಕಾಂಗ್ರೆಸ್‌ನ ಅಧಿಕಾರ ದುರುಪಯೋಗ ಹಾಗೂ ಆಮಿಷಗಳು ಮತದಾರರನ್ನು ದಿಕ್ಕು ತಪ್ಪಿಸುವ ನಿಟ್ಟಿನಲ್ಲಿ ಪರಿಣಾಮ ಬೀರಿದೆ ಎಂಬುದು ನಿಸ್ಸಂಶಯ, ಆದರೂ ಉಪಚುನಾವಣೆಯ ಈ ಸೋಲನ್ನು ನಾವು ಸಕಾರಾತ್ಮಕವಾಗಿಯೇ ಸ್ವೀಕರಿಸೋಣ. ಈ ಫಲಿತಾಂಶ ಭವಿಷ್ಯತ್ತಿನಲ್ಲಿ ನಮಗೆ ಮುಂದಿರುವ ಸವಾಲುಗಳನ್ನು ಎಚ್ಚರಿಸುವ ಸಂಕೇತವೂ ಆಗಿದೆ ಎಂದು ಭಾವಿಸೋಣ.

## ಬುಡಕಟ್ಟು ಜನರಿಗೆ ಶುದ್ಧ ಕುಡಿಯುವ ನೀರು ಸೇರಿ ವಿವಿಧ ಸೌಲಭ್ಯ ನೀಡಲು ಕ್ರಮ

• ಉದಯವಾಹಿನಿ, ಬೆಂಗಳೂರು

ಆದಿವಾಸಿ, ಬುಡಕಟ್ಟು ಜನರನ್ನು ಮುಖ್ಯವಾಹಿನಿಗೆ ತರುವುದೆಂದರೆ ಅವರ ಸಂಸ್ಕೃತಿ, ಪರಂಪರೆಯನ್ನು ನಾಶ ಗೊಳಿಸುವುದಲ್ಲ ಬದಲಾಗಿ ಸೌಲಭ್ಯ ವಂಚಿತರಾಗಿರುವ ಅವರಿಗೆ ಮೂಲಭೂತ ಸೌಕರ್ಯವನ್ನು ಒದಗಿಸುವುದು ಮತ್ತು ಅವರ ಸಂಸ್ಕೃತಿಯನ್ನು ಉಳಿಸುತ್ತಲೇ ಅವರನ್ನು ಆಧುನಿಕ ಬದುಕಿನ ಅಗತ್ಯ ಸೌಲಭ್ಯಗಳನ್ನು ಒದಗಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆ.

ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೊಡಗು, ಮೈಸೂರು ಚಾಮರಾಜನಗರ, ಶಿವಮೊಗ್ಗ, ಹಾಗೂ ಹಾಸನ ಜಿಲ್ಲೆಗಳ ಅಳಿವಿನಂಚಿನಲ್ಲಿರುವ ಆದಿವಾಸಿ,ಬುಡಕಟ್ಟು ಜನರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು. ಇದರಲ್ಲಿ ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದಂತೆ ಮತ್ತು ಹಾಡಿಗಳು ಹಾಗೂ ಬುಡಕಟ್ಟು ವಸತಿಗಳಿಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಲಾಯಿತು. ಹಾಡಿಗಳು ಮತ್ತು ಬುಡಕಟ್ಟು ವಸತಿ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ವಿಶೇಷ ಯೋಜನೆ ರೂಪಿಸಲಾಗುವುದು. ಇದರಲ್ಲಿ ಬೋರ್ ವೆಲ್‌ಗಳ ಕೊರೆಯುವಿಕೆ,



ಉದಯವಾಹಿನಿ ಚಿತ್ರ

ನೀರಿನ ಶುದ್ದೀಕರಣ ಘಟಕಗಳ ಸ್ಥಾಪನೆ, ಮತ್ತು ಪೈಪ್ ಲೈನ್ ಜಾಲದ ನಿರ್ಮಾಣ ಸೇರಿವೆ. ಮೈಸೂರು ಜಿಲ್ಲೆಯಲ್ಲಿ 12 ಹಾಗೂ ಚಾಮರಾಜನಗರ ಜಿಲ್ಲೆಯ 16 ಹಾಡಿಗಳಿಗೆ ಜೆಜೆಎಂ ಮೂಲಕ ಕುಡಿಯುವ ನೀರು ಸಂಪರ್ಕ ಕಲ್ಪಿಸಲು ಕ್ರಮವಹಿಸಲಾಗುವುದು. ಮುಖ್ಯ ರಸ್ತೆಗಳಿಗೆ ಸಂಪರ್ಕಿಸಲು ಸಾಧ್ಯವಾಗುವಂತೆ ಹಾಡಿಗಳ ರಸ್ತೆಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗುವುದು. ಕರ್ನಾಟಕ ಇದರಿಂದ ಸಾರಿಗೆ ಸೌಲಭ್ಯ ಹೆಚ್ಚಾಗಿ, ಆರೋಗ್ಯ ಸೇವೆಗಳು ಮತ್ತು ಶಿಕ್ಷಣ ಸೌಲಭ್ಯಗಳಿಗೆ ಸುಲಭ ಪ್ರವೇಶ ದೊರೆಯಲಿದೆ.

> ಚಾಮರಾಜನಗರ ಜಿಲ್ಲೆಯಲ್ಲಿ 38 ಹಾಡಿಗಳಿಗೆ ಹಾಗೂ ಕೊಡಗು ಜಿಲ್ಲೆಯಲ್ಲಿ 24 ಹಾಡಿಗಳಿಗೆ ರಸ್ತೆ ಸಂಪರ್ಕ ಒದಗಿಸಲು ಕ್ರಮ ವಹಿಸಲಾಗುವುದು. ಕುಡಿಯುವ ನೀರು ಹಾಗೂ ರಸ್ತೆ ಸಂಪರ್ಕ ಕಾಮಗಾರಿಗಳನ್ನು ಕೂಡಲೇ ಕೈಗೆತ್ತಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.

## ಬಿಬಿಎಂಪಿ ಅಧಿಕಾರಿಗಳ ಮನೆ ಮೇಲೆ ಲೋಕಾಯುಕ್ತ ದಾಳಿ ದಾಖಲೆಗಳ ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ಪಶ್ಚಿಮ ವಲಯ ಕಲ್ಯಾಣ ವಿಭಾಗದಲ್ಲಿ ಬಹುಕೋಟಿ ಹಗರಣ ಆರೋಪದ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿರುವ ಬಿಬಿಎಂಪಿ ಅಧಿಕಾರಿಗಳಿಗೆ ಲೋಕಾಯುಕ್ತ ಅಧಿಕಾರಿಗಳು ಶಾಕ್ ನೀಡಿದ್ದು, ಬಿಬಿಎಂಪಿ ಅಧಿಕಾರಿಗಳ ಮನೆಯ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದು ಅಲ್ಲದೆ ಹಲವು ದಾಖಲೆಗಳನ್ನು ಇದೀಗ ಪರಿಶೀಲನೆ ನಡೆಸುತ್ತಿದ್ದಾರೆ.

ಸಿನಿಮಾ ಹೌದು ಬಿಬಿಎಂಪಿ ಉಪ ಹಣಕಾಸು ನಿಯಂತ್ರಕ ಸತ್ಯಮೂರ್ತಿ ಮನೆ, ಬಿಬಿಎಂಪಿ ಕಲ್ಯಾಣಾಧಿಕಾರಿ ಲಲಿತಾ ಮನೆಯ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ ಬೆಂಗಳೂರಿನ ದೇವಯ್ಯ ಪಾರ್ಕ್ ಬಳಿಯ ಲಲಿತಾ ನಿವಾಸ ಹಾಗೂ ವ್ಯವಹಾರ ಕರ್ನಾಟಕ ವೈಯಾಲಿಕಾವಲಿನಲ್ಲಿರುವ ಸತ್ಯಮೂರ್ತಿ ನಿವಾಸದಲ್ಲಿ ಅಧಿಕಾರಿಗಳು ದಾಳಿ ಮಾಡಿ ಪರಿಶೀಲನೆ ನಡೆಸುತ್ತಿದ್ದಾರೆ.




ಉದಯವಾಹಿನಿ ಚಿತ್ರ

ಬಿಬಿಎಂಪಿ ಪಶ್ಚಿಮ ವಲಯ ಕಲ್ಯಾಣ ವಿಭಾಗದಲ್ಲಿ ಬಹುಕೋಟಿ ಹಗರಣ ಆರೋಪದ ಹಿನ್ನೆಲೆಯಲ್ಲಿ ದಾಳಿ ಮಾಡಲಾಗಿದೆ. ಕಲ್ಯಾಣ ಕಾರ್ಯಕ್ರಮ ಅನುಷ್ಠಾನದಲ್ಲಿ ಈ ಒಂದು ಹಗರಣ ನಡೆದಿತ್ತು. ಫಲಾನುಭವಿಗಳ ಹಣವನ್ನು ಸೊಸೈಟಿ ಗಳಿಗೆ ವರ್ಗಾಯಿಸಿ ವಂಚನೆ ಎಸಗಿರುವ ಆರೋಪ ಕೇಳಿ ಬಂದಿತ್ತು. ಡಿವೈಎಸ್ಪಿ ಸುನಿಲ್ ವೈ ನಾಯಕ್ ನೇತೃತ್ವದಲ್ಲಿ 8 ತಂಡಗಳಾಗಿ ದಾಳಿ ನಡೆಸಲಾಗಿದೆ.

## ಗೃಹಜ್ಯೋತಿ ಯೋಜನೆ ನೋಂದಣಿಗೆ ಇನ್ನೂ ಇದೆ ಅವಕಾಶ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಜ್ಯೋತಿ ಯೋಜನೆಯು ಯಶಸ್ವಿಯಾಗಿ ಜಾರಿಗೊಂಡು ಒಂದು ವರ್ಷ ಪೂರೈಸಿದ್ದು, ಅರ್ಹ ವಿದ್ಯುತ್ ಗ್ರಾಹಕರು ನೋಂದಾಯಿಸಿಕೊಳ್ಳಲು ಇನ್ನೂ ಅವಕಾಶವಿದೆ. ಸಿನಿಮಾ ಉಚಿತ ವಿದ್ಯುತ್ ನೀಡುವ ಗೃಹಜ್ಯೋತಿ ಯೋಜನೆ ಆರಂಭವಾಗಿ ಒಂದು ವರ್ಷ, ಮೂರು ತಿಂಗಳು ಕಳೆದಿವೆ. ವ್ಯವಹಾರ ಜಿಲ್ಲೆಯಲ್ಲಿ ಒಟ್ಟಾರೆ 2.80 ಲಕ್ಷ ಕುಟುಂಬಗಳು ನೋಂದಣಿಯಾಗಿ ಯೋಜನೆ ಲಾಭ ಪಡೆದುಕೊಂಡಿವೆ. ಎಲ್ಲಾ ಕುಟುಂಬಗಳಿಗೆ ಶೂನ್ಯ ಬಿಲ್ ಬಂದಿದೆ. ಉಳಿದ ಕುಟುಂಬಗಳ ಉಚಿತ ಅರ್ಹತೆಗಿಂತ ಹೆಚ್ಚು ವಿದ್ಯುತ್ ಬಳಸಿದ್ದಲ್ಲಿ ಹಣ ಪಾವತಿಸಿವೆ. ಕರ್ನಾಟಕ ರಾಜ್ಯ ಸರ್ಕಾರವು ಚುನಾವಣೆಯಲ್ಲಿ ನೀಡಿದ ಆಶ್ವಾಸನೆಯಂತೆ 200 ಯೂನಿಟ್ವರೆಗೂ ಉಚಿತ ವಿದ್ಯುತ್ ನೀಡುವ ಗ್ಯಾರಂಟಿ ಯೋಜನೆಯನ್ನು 2023 ಆಗಸ್ಟ್‌ರಿಂದ ಆರಂಭಿಸಿತು. ಕಳೆದ ವರ್ಷ ಜೂನ್ 18 ರಿಂದ ನೋಂದಣಿ ಅವಕಾಶ ನೀಡಿತ್ತು.




ಗೃಹ ವಿದ್ಯುತ್ ಗ್ರಾಹಕರು ಕಳೆದ ಒಂದು ವರ್ಷದಲ್ಲಿ ಮಾಸಿಕ ಬಳಸಿದ ಸರಾಸರಿ ಯೂನಿಟ್‌ಗೆ ಶೇಕಡಾ 10 ರಷ್ಟು ಹೆಚ್ಚುವರಿ ಯೂನಿಟ್ ಉಚಿತವಾಗಿರುತ್ತದೆ. ಅದಕ್ಕಿಂತ ಹೆಚ್ಚು ಬಳಸುವ ವಿದ್ಯುತ್‌ಗೆ ದರ ಪಾವತಿಸಬೇಕಾಗುತ್ತದೆ.

**ಗೃಹಜ್ಯೋತಿ ಯೋಜನೆ ಅಂಕಿ ಅಂಶಗಳು:**

**ಇಂದಿಗೂ ನೋಂದಣಿ ಅವಕಾಶ:** ಇಂದಿಗೂ ಗೃಹಜ್ಯೋತಿ ಯೋಜನೆಯ ನೋಂದಣಿಗೆ ಅವಕಾಶವಿದೆ. ಮನೆ ಬದಲಾವಣೆ ಮಾಡಿಕೊಳ್ಳುವವರು, ಹೊಸ ಮನೆ ಕಟ್ಟುವವರು ಕೂಡ ನೋಂದಣಿ ಮಾಡಿಕೊಳ್ಳಬಹುದು.

ಅವರಿಗೆ ನಿಯಮಗಳಂತೆ ನಿಗದಿತ ಯೂನಿಟ್‌ಗಳು ಮಾತ್ರ ಉಚಿತ ಇರುತ್ತವೆ.

> ಈ ವರ್ಷದ ಆಗಸ್ಟ್ ತಿಂಗಳಿಗೆ ಗೃಹಜ್ಯೋತಿಗೆ ಒಂದು ವರ್ಷ ಪೂರೈಸಿದ ಸಂದರ್ಭದಲ್ಲಿ ಇಂಧನ ಇಲಾಖೆಯು ಬಾಡಿಗೆ ಮನೆ ಅಥವಾ ಯಾವುದೇ ಕಾರಣಕ್ಕೆ ಮನೆ ಬದಲಿಸುವ ಸಂದರ್ಭದಲ್ಲಿ ಹಳೆಯ ಖಾತೆ ಸಂಖ್ಯೆಯನ್ನು ಡಿ-ಲಿಂಕ್ ಮಾಡಿ, ಮತ್ತೊಂದು ಮನೆಯ ಆರ್.ಆರ್. ಸಂಖ್ಯೆಯೊಂದಿಗೆ ನೋಂದಣಿಯಾಗಿ, ಗೃಹ ಜ್ಯೋತಿಯ ಲಾಭ ಪಡೆಯಬಹುದು ಎಂದು ತಿಳಿಸಿದೆ.

# ಚಕ್ರವ್ಯೂಹದಲ್ಲಿ ಸಿಲುಕಿಸಿದವರಿಗೆ ಪತ್ರದ ಮೂಲಕ ನಿಖಿಲ್ ಉತ್ತರ!

## ಜೆಡಿಎಸ್ ಶಾಸಕರನ್ನು ಖಾಲಿ ಮಾಡಿಸುತ್ತೇನೆ ಎಂದು ನಾಲಿಗೆ ಜಾರಿಗೆ ಸಿ.ಪಿ.ಯೋಗೇಶ್ವರ್ ವಿರುದ್ಧ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ಚನ್ನಪಟ್ಟಣ ಉಪ ಚುನಾವಣೆಯಲ್ಲಿ ಗೆಲುವು ಕಂಡ ಕಾಂಗ್ರೆಸ್ ಪಕ್ಷ ಆ ಗೆಲುವಿನಲ್ಲಿಯೂ ವಿಕೃತಿ ಮೆರೆಯುತ್ತಿದೆ ಎಂದು ಯುವ ಜನತಾದಳ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು ಬೇಸರ ವ್ಯಕ್ತಪಡಿಸಿದ್ದಾರೆ. ಫಲಿತಾಂಶ ಹೊರಬಿದ್ದ ಮೇಲೆ ಕಾರ್ಯಕರ್ತರಿಗೆ ದೀರ್ಘ ಪತ್ರ ಬರೆದಿರುವ ಅವರು, ಜೆಡಿಎಸ್ ಶಾಸಕರನ್ನು ಖಾಲಿ ಮಾಡಿಸುತ್ತೇನೆ ಎಂದು ನಾಲಿಗೆ ಜಾರಿಗೆ ಸಿ.ಪಿ.ಯೋಗೇಶ್ವರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಿಖಿಲ್ ಬಚ್ಚಾ.. ಪಾಪ ನಿಖಿಲ್.' ಎಂಬ ಅನುಕಂಪಕ್ಕೆ ತುತ್ತಾಗಿ ಕೈ ಚೆಲ್ಲುವ ಬಾಲಬುದ್ದಿಯ ಮನಸ್ಥಿತಿಯವನಲ್ಲ ನಾನು ಎಂದು ಕೆಲ ಕಾಂಗ್ರೆಸ್ ನಾಯಕರಿಗೆ ನಿಖಿಲ್ ಕುಮಾರಸ್ವಾಮಿ ಅವರು ತೀಕ್ಷ್ಣವಾಗಿ ತಿರುಗೇಟು ನೀಡಿದ್ದಾರೆ.

ಅಲ್ಲದೆ, ಕೇವಲ ಸ್ವಾರ್ಥಕ್ಕಾಗಿ, ಅಧಿಕಾರದ ಹಪಾಹಪಿಗಾಗಿ ಪಕ್ಷದಿಂದ ಪಕ್ಷಕ್ಕೆ ಜಿಗಿಯುವ, ಎಲ್ಲಿ ಹೆಚ್ಚು ಪ್ಯಾಕೇಜ್ ಸಿಕ್ಕಿದರೆ ಅಲ್ಲಿಗೆ ಹಾರಿ ಜೇಬು ಭರ್ತಿ ಮಾಡಿಕೊಳ್ಳುವ ರಾಜಕೀಯ ವ್ಯಾಪಾರಿಗಳಲ್ಲ ನಮ್ಮ ಶಾಸಕರು. ಗೆದ್ದಲು ಕಟ್ಟಿದ ಹುತ್ತದೊಳಕ್ಕೆ ಹಾವಿನಂತೆ ಹೊಕ್ಕು ಕೈಹಿಡಿದವರನ್ನೇ ಕಚ್ಚಿ ವಿಷಕಾರುವ ರಾಜಕೀಯ ವಿಷಜಂತುಗಳಿಗೆ ನಾವು ಹೆದರುವುದಿಲ್ಲ ಎಂದು ಯೋಗೇಶ್ವರ್ ಮೇಲೆ ಚಾಟಿ ಬೀಸಿದ್ದಾರೆ. ಚನ್ನಪಟ್ಟಣ ವಿಧಾನಸಭೆ ಕ್ಷೇತ್ರದ ಉಪ ಚುನಾವಣೆಯಲ್ಲಿ NDA ಅಭ್ಯರ್ಥಿಯಾಗಿದ್ದ ನನ್ನ ಸೋಲು ಅನಿರೀಕ್ಷಿತ ಸೋಲು ಯಾಕಾಯಿತೆಂದು ಈಗಾಗಲೇ ಕಾರಣ ಕೊಟ್ಟಿದ್ದೇನೆ. ಹಾಗೆಂದು, ಸೋಲಿಗೆ ಹೆದರಿ ಸುಮ್ಮನೆ ಕೂರುವ ಜಾಯಮಾನ ನನ್ನದಲ್ಲ, ನಮ್ಮ ಪಕ್ಷದ್ದೂ ಅಲ್ಲ. ಇಂಥ ಅನೇಕ ಸೋಲುಗಳನ್ನು ಪಕ್ಷ ಜೀರ್ಣಿಸಿಕೊಂಡಿದೆ. ಸತತ ಹೋರಾಟಗಳ ಮೂಲಕ ಪಕ್ಷವು ಫೀನಿಕ್ಸ್‌ನಂತೆ ಎದ್ದು ಬಂದಿದೆ. ಪಕ್ಷದ ಇಂತಹ ಅನೇಕ ಏಳುಬೀಳಿನ ದಾರಿಯಲ್ಲಿ ನಾನೊಬ್ಬ ಸಣ್ಣ ಪಯಣಿಗ. ಅಷ್ಟಾಗಿಯೂ ಅನೇಕ ನಾಯಕರನ್ನು ಪಕ್ಷವು ರಾಜ್ಯಕ್ಕೆ ಧಾರೆಯೆರೆದು ಕೊಟ್ಟಿದೆ, ಅದು ಮಣ್ಣಿನಮಗ ಪೂಜ್ಯ ದೇವೇಗೌಡರ ಗರಡಿಯ ಫಲ. ಈ ಸೋಲು ನನಗೆ ನೋವುಂಟು ಮಾಡಿದೆ, ನಿಜ. ಇಲ್ಲ ಎಂದು ಹೇಳಿ ಆತ್ಮವಂಚನೆ ಮಾಡಿಕೊಳ್ಳುವುದಿಲ್ಲ. ಹಾಗಂತ, ಸೋಲುತ್ತೇನೆ ಎಂದು ನಾನು ಚುನಾವಣೆಗೆ ಸ್ಪರ್ಧಿಸಿರಲಿಲ್ಲ. ಗೆಲ್ಲಲು ಪ್ರಾಮಾಣಿಕವಾಗಿ ಹೋರಾಡಿದ್ದೇವೆ. ಕೆಲ ಅಂಶಗಳಿಂದ ಹಿನ್ನಡೆಯಾಗಿದೆಯಾದರೂ, ಮತ್ತೆ ಪುಟಿದೆದ್ದು ಬರುವ ಛಲ ನನಗಿದೆ. ನೋವು ಭರಿಸುವ ಶಕ್ತಿ ಹೇಗೆ ನನ್ನಲ್ಲಿ ತುಂಬಿದೆಯೋ.. ಹಾಗೆಯೇ ಛಲದಿಂದ ಎದ್ದು ಬರುವ ಕೆಚ್ಚನ್ನೂ ರಕ್ತಗತವಾಗಿ ರೂಢಿಸಿಕೊಂಡಿದ್ದೇನೆ. ನಿಖಿಲ್ ಬಚ್ಚಾ... ಪಾಪ ನಿಖಿಲ್' ಎಂಬ ಅನುಕಂಪಕ್ಕೆ ತುತ್ತಾಗಿ ಕೈ ಚೆಲ್ಲುವ ಬಾಲಬುದ್ಧಿಯ ಮನಸ್ಥಿತಿಯವನಲ್ಲ ನಾನು. ಹಿಂದಿನ ಎರಡು ಸೋಲುಗಳು ನನಗೆ ಅಸಹಾಯಕತೆಯನ್ನು ಮೆಟ್ಟಿನಿಂತು ಅಪಮಾನ ಧಿಕ್ಕರಿಸಿ ಸೆಣಸುವ ಆತ್ಮಬಲ ಕೊಟ್ಟಿವೆ. ಚನ್ನಪಟ್ಟಣದಲ್ಲಿಯೂ ಅದೇ ಛಲ, ಆತ್ಮಬಲದಿಂದ ಜೆಡಿಎಸ್-ಬಿಜೆಪಿ ಕಾರ್ಯಕರ್ತರು, ಮುಖಂಡರ ಜತೆಗೂಡಿ ದಿಟ್ಟ ಹೋರಾಟ ನಡೆಸಿದ್ದೇನೆ.



ಉದಯವಾಹಿನಿ ಚಿತ್ರ

**ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಬೇಸರ**

ಜನತಾ ಜನಾರ್ದನನ ನಿರ್ಣಯವನ್ನು ಶಿರಬಾಗಿ ಸ್ವೀಕರಿಸಿದ್ದೇನೆ ನನ್ನ ಸೋಲು ನನ್ನ ಕಾರ್ಯಕರ್ತರಿಗೆ ಅತೀವ ನೋವುಂಟು ಮಾಡಿದೆ. ಅದನ್ನು ನಾನು ಬಲ್ಲೆ. ಇಡೀ ರಾಜ್ಯದ ಕಾರ್ಯಕರ್ತರೆಲ್ಲರೂ ವೀರಯೋಧರಂತೆ ಚನ್ನಪಟ್ಟಣದಲ್ಲಿ ಹಗಲಿರುಳೂ ದುಡಿದರು. ಮನೆಮನೆಯನ್ನೂ ತಲುಪಿ ನನ್ನ ಗೆಲುವಿಗಾಗಿ ಶ್ರಮಿಸಿದರು. ಅಂತಿಮವಾಗಿ ಸೋಲಾಯಿತು, 'ಅದು ಜನತಾ ಜನಾರ್ದನನ ನಿರ್ಣಯ. ಅದನ್ನು ನಾನು ಶಿರಬಾಗಿ ಸ್ವೀಕರಿಸಿದ್ದೇನೆ.

> ವಿಪರ್ಯಾಸವೆಂದರೆ, ಗೆದ್ದವರಿಗೆ ನೆಮ್ಮದಿ ಇಲ್ಲ, ಕನಿಷ್ಠ ಗೆಲುವನ್ನು ಅರ್ಥಪೂರ್ಣವಾಗಿಸಿಕೊಳ್ಳುವ ಮನಃಸ್ಥಿತಿಯೂ ಇಲ್ಲ. ಆ ಮುಖಗಳಲ್ಲಿ ನಗುವೇ ಇಲ್ಲ. ಅವರ ಸಂಭ್ರಮ ವಿಜೃಂಭಣೆಯಲ್ಲಿ ಪ್ರಾಮಾಣಿಕತೆಯೂ ಇಲ್ಲ. ಸೋತ ಅಭ್ಯರ್ಥಿಯನ್ನು ಹೀಗಳೆಯುವ, ಎದುರಾಳಿ ಪಕ್ಷ ಮತ್ತು ಅದರ ನಾಯಕರನ್ನು ನಿಂದಿಸುವುದರಲ್ಲಿ ಮಗ್ನರಾಗಿದ್ದಾರೆ. ಅವರ ನಿಂದನೆಯ ವೈಖರಿ ನೋಡಿದರೆ ಅವರೆಷ್ಟು ಅನ್ಯನಿಂದನಾ ವೇದನೆಯಲ್ಲಿ ಮುಳುಗಿದ್ದಾರೆಂದು ಅರ್ಥವಾಗುತ್ತದೆ. ಅವರದ್ದು ಸತ್ಯದ ಜಯವಲ್ಲ. ಆ ಪಾಪಪ್ರಜ್ಞೆ ಅವರನ್ನು ಕಾಡುತ್ತಿದೆ.

> ನಾವು ಸತ್ಯದ ಪರವಾಗಿದ್ದೇವೆ. ಸತ್ಯಮೇವ ಜಯತೆ ಎನ್ನುವುದು ನಮ್ಮ ಪಾಲಿಗೆ ಬರೀ ಜಾಹೀರಾತಿನ ಸ್ಲೋಗನ್ ಅಲ್ಲ, ರಾಷ್ಟ್ರಪಿತ ಬಾಪೂಜಿ ಹೇಳಿದ ಸತ್ಯ ಮಾರ್ಗದಲ್ಲಿಯೇ ನಡೆಯೋಣ. ಆ ಮರ್ಯಾದಾ ಪುರುಷೋತ್ತಮ ರಾಮನ ದಾರಿ ನಮ್ಮ ಆದರ್ಶ ಶ್ರೀಕೃಷ್ಣ ಪರಮಾತ್ಮನ ಸತ್ಯನೀತಿ ನಮ್ಮ ಮುಂಬೆಳಕು. ನಾವು ಯಾರೂ ಧೃತಿಗೆಡಬೇಕಿಲ್ಲ. ನಿಮ್ಮೊಂದಿಗೆ ನಾನಿದ್ದೇನೆ. ಇಡೀ ಪಕ್ಷವೇ ಇದೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ಪತ್ರದಲ್ಲಿ ತಿಳಿಸಿದ್ದಾರೆ.

ಉದಯ ವಾಹಿನಿ

ಪ್ರಾದೇಶಿಕ

ಗುರುವಾರ
28 ನವೆಂಬರ್ 2024



# ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆ: ಅಧಿಕಾರಿಗಳ ಗೈರು

**• ಅನುಷ್ಠಾನ ಸಮಿತಿಯ ಕೆಲ ಅಧಿಕಾರಿಗಳು ಕಳೆದ ಮೂರು ಸಭೆಗಳಿಗೂ ನಿರಂತರವಾಗಿ ಗೈರಾಗಿದ್ದಾರೆ**

**• ಉದಯವಾಹಿನಿ ಸೋಮವಾರಪೇಟೆ**

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಪೂರ್ಣಪ್ರಮಾಣದಲ್ಲಿ ಅನುಷ್ಠಾನಗೊಳಿಸಲು ಅಧಿಕಾರಿಗಳ ಪಾತ್ರ ಮುಖ್ಯ, ಆದರೆ, ಕೆಲ ಅಧಿಕಾರಿಗಳು ಸಭೆಗೆ ಗೈರಾಗುವ ಮೂಲಕ ಯೋಜನೆಗೆ ಅವಮಾನ ಮಾಡುತ್ತಿದ್ದಾರೆ' ಎಂದು ತಾಲ್ಲೂಕು ಅನುಷ್ಠಾನ ಸಮಿತಿ ಅಧ್ಯಕ್ಷ ಜಿ.ಎಂ. ಕಾಂತರಾಜು ದೂರಿದರು. ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಿದ್ದ ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

'ಅನುಷ್ಠಾನ ಸಮಿತಿಯ ಕೆಲ ಅಧಿಕಾರಿಗಳು ಕಳೆದ ಮೂರು ಸಭೆಗಳಿಗೂ ನಿರಂತರವಾಗಿ ಗೈರಾಗಿದ್ದಾರೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖಾಧಿಕಾರಿ ಈ ಸಭೆಗೆ ಪ್ರಮುಖವಾಗಿದ್ದರೂ, ಸಭೆಗೆ ಬಂದು ಯಾವುದೇ ಮಾಹಿತಿ ನೀಡುತ್ತಿಲ್ಲ. ಮುಂದಿನ ಸಭೆಗೂ ಬಾರದಿದ್ದರೆ ಅವರ ವಿರುದ್ಧ ಮೇಲಧಿಕಾರಿಗಳಿಗೆ ದೂರು ನೀಡಲಾಗುವುದು' ಎಂದು ಎಚ್ಚರಿಸಿದರು.

**ಅಧಿಕಾರಿಗಳ ಪಾತ್ರ ಮುಖ್ಯ**

'ಕೆಎಸ್‌ಆರ್‌ಟಿಸಿಯ ಕೆಲ ನಿರ್ವಾಹಕರು ಮತ್ತು ಚಾಲಕರಿಗೆ ಪ್ರಯಾಣಿಕರ ಬಗ್ಗೆ ಯಾವ ರೀತಿಯಲ್ಲಿ ಸೌಜನ್ಯದಿಂದ ವರ್ತಿಸಬೇಕು ಎಂದು ತಿಳಿದಿಲ್ಲ. ಶಕ್ತಿ ಯೋಜನೆಯನ್ನು ಜನ ಟೀಕಿಸಲು ಕೆಲ ನಿರ್ವಾಹಕರೇ ಕಾರಣರಾಗಿದ್ದಾರೆ. ನನಗೂ ನಿರ್ವಾಹಕ ಅವಮಾನ ಮಾಡಿದ್ದ. ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ತೋರಿಸುವ ಮೊದಲೇ ಪೂರ್ಣ ಪ್ರಮಾಣದ ಟಿಕೆಟ್ ನೀಡಿದ್ದ. ನಾನು ಗುರುತಿನ ಚೀಟಿ ತೋರಿಸಿದೆ. ಆದರೆ, ಬಸ್ ಹತ್ತುವಾಗಲೇ ಗುರುತಿನ ಚೀಟಿ ಹಿಡಿದುಕೊಂಡು ಬರಬೇಕು ಎಂದು ಅಸಭ್ಯವಾಗಿ ವರ್ತಿಸಿದ. ಹಿರಿಯ ನಾಗರಿಕರಿಗೆ ನೀಡುವ ರಿಯಾಯಿತಿ ಹಣವನ್ನು ಸರ್ಕಾರ ಕೆಎಸ್ ಆರ್‌ಟಿಸಿಗೆ ಭರಿಸುತ್ತದೆ. ಅವರು ಭಿಕ್ಷೆ ಕೊಡುವುದಲ' ಎಂದು ಹೇಳಿದರು.

ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಪರಮೇಶ ಕುಮಾರ್ ಮಾತನಾಡಿ, ಬಸ್ ತಡವಾಗಿ ಬಂದಿದ್ದಕ್ಕೆ ಸಭ್ಯತೆಯಿಂದಲೇ ಪ್ರಶ್ನಿಸಿದಾಗ, ಇದೇನೂ ಮರ್ಸಿಡಿಸ್ ಬೆಂಜಾ, ಬೇಕಾದ್ರೆ ಹೋಗಿ ಕುಕ್ಕೊಳ್ಳಿ' ಎಂದು ಅನಾಗರಿಕತೆ ಪ್ರದರ್ಶಿಸಿದ್ದ. ನಿರ್ವಾಹಕನೊಂದಿಗೆ ವಾಗ್ವಾದ ಮಾಡಲಿಲ್ಲ. ನೇರವಾಗಿ ಹಿರಿಯ ಅಧಿಕಾರಿಗೆ ಮೇಲ್ ಮೂಲಕ ದೂರು ನೀಡಿದೆ' ಎಂದು ತಮಗೆ ಆದ ಅನುಭವದ ಬಗ್ಗೆ ತಿಳಿಸಿದರು.

ಇವರಿಗೆ ಸಭ್ಯತೆ ಯನ್ನು ಕಲಿಸುವ ತರಬೇತಿ ಕಾರ್ಯಾಗಾರ ಆಯೋಜಿ ಸುವ ಅನಿವಾರ್ಯತೆ ಇದೆ' ಎಂದರು.

ಮನೋರಂಜನೆ 'ಮಹಿಳೆಯರು ಬಸ್‌ಗೆ ಕೈ ಅಡ್ಡ ಹಾಕಿದರೆ ಅನೇಕ ಚಾಲಕರು ಬಸ್ ನಿಲ್ಲಿಸದೇ ಹೋಗುತ್ತಾರೆ' ಎಂದು ಸದಸ್ಯ ವಿರೇಂದ್ರ ಕುಮಾರ್ ದೂರಿದರು.

ಬೆಂಗಳೂರು ಗ್ರಾಮಾಂತರ ಹಂಡ್ಲಿ ಮತ್ತು ಹಿಪ್ಪಿ ಗೇಟ್‌ನಲ್ಲಿ ವೇಗದೂತ ಬಸ್‌ಗಳಿಗೆ ಪ್ರಯಾಣಿಕರು ನಿಲುಗಡೆಗೆ ಮನವಿ ಮಾಡಿದ್ದರೂ ನಿಲ್ಲಿಸುವುದಿಲ್ಲ' ಎಂದು ಸದಸ್ಯರು ದೂರಿದ ಹಿನ್ನೆಲೆಯಲ್ಲಿ, 'ಅಂತಹ ಬಸ್ ನಂಬರ್, ಮಾರ್ಗ, ಸಮಯವನ್ನು ಬರೆದು ದೂರು ನೀಡಿದರೆ, ಅಧಿಕಾರಿಗಳು ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು' ಎಂದು ಸಂಚಾರ ನಿಯಂತ್ರಕ ಶ್ರೀನಿವಾಸ್ ಭರವಸೆ ನೀಡಿದರು.



ಉದಯವಾಹಿನಿ ಚಿತ್ರ

**ಗೃಹಜ್ಯೋತಿ ಯೋಜನೆಯಲ್ಲಿ ತಾಲ್ಲೂಕಿನಲ್ಲಿ 26,418 ಮನೆಗಳಿಗೆ ಉಚಿತ ವಿದ್ಯುತ್ ನೀಡುತ್ತಿದ್ದು, ಆಧಾರ್ ಸಂಖ್ಯೆ ಸರಿಹೊಂದದ ಮತ್ತು ಇನ್ನಿತರ ತಾಂತ್ರಿಕ ಕಾರಣಗಳಿಂದ 166 ಮನೆಗಳಿಗೆ ಸೌಲಭ್ಯ ಸಿಗುತ್ತಿಲ್ಲ. ಶೇ 99.38 ಸಾಧನೆಯಾಗಿದೆ**

**–ವಿನಯ್ ಕುಮಾರ್, ಎಇಇ**

**285 ಮಂದಿಗೆ ಹಣ ಸಂದಾಯ**

**ಯುವನಿಧಿಯಲ್ಲಿ ಸೋಮವಾರಪೇಟೆ ತಾಲ್ಲೂಕಿನಲ್ಲಿ 385 ಮಂದಿ ನೋಂದಾಯಿಸಿದ್ದು, 285 ಮಂದಿಗೆ ಹಣ ಸಂದಾಯವಾಗುತ್ತಿದೆ. 2023ರಲ್ಲಿ ಪದವಿ ಮತ್ತು ಡಿಪ್ಲೊಮಾ ಪಡೆದವರು ಯೋಜನೆಗೆ ಅರ್ಹರು' ಎಂದು ಸಂಬಂಧಪಟ್ಟ ಅಧಿಕಾರಿ ಮಾಹಿತಿ ನೀಡಿದರು.**

**ನವೆಂಬರ್ ಅಂತ್ಯಕ್ಕೆ ಗೃಹಲಕ್ಷ್ಮಿ ಯೋಜನೆಯಲ್ಲಿ ತಾಲ್ಲೂಕಿನಲ್ಲಿ 25,232 ಫಲಾನುಭವಿಗಳ ನೋಂದಣಿಯಾಗಿದ್ದು, 24,802 ಫಲಾನುಭವಿಗಳ ಖಾತೆಗೆ ಹಣ ಜಮೆಯಾಗುವ ಮೂಲಕ ಶೇ 97.06ರಷ್ಟು ಸಾಧನೆಯಾಗಿದೆ. ಇನ್ನೆರಡು ತಿಂಗಳಲ್ಲಿ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಲಾಗುವುದು**

**–ಸಾವಿತ್ರಮ್ಮ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿ**

## ಮೊಟ್ಟೆಗೆ ಕಾಸು: ಶಿಕ್ಷಕರ ಬೇಸರದ ನುಡಿ

**• ಉದಯವಾಹಿನಿ, ಚಿಕ್ಕಬಳ್ಳಾಪುರ**

ಮೊಟ್ಟೆ ಬೆಲೆ ನಮ್ಮ ಕೈ ಸುಡುತ್ತಿದೆ. ಸರ್ಕಾರ ನೀಡುತ್ತಿರುವ ದರ ಮತ್ತು ಸಗಟು ಮಾರುಕಟ್ಟೆಯಲ್ಲಿನ ಮೊಟ್ಟೆ ದರದ ನಡುವೆ ವ್ಯತ್ಯಾಸವಿದೆ. ಹೆಚ್ಚುವರಿ ಹಣವನ್ನು ನಾವು ಭರಿಸಬೇಕಾಗಿದೆ.

ಈ ಬಗ್ಗೆ ಮೇಲಧಿಕಾರಿಗಳ ಗಮನಕ್ಕೂ ತಂದಿದ್ದೇವೆ. ಯಾವಾಗ ಸಮಸ್ಯೆ ಪರಿಹಾರ ಆಗುತ್ತದೆಯೊ'– ಇದು ಚಿಕ್ಕಬಳ್ಳಾಪುರ ತಾಲ್ಲೂಕಿನ ಸರ್ಕಾರಿ ಪ್ರಾಥಮಿಕ ಶಾಲೆಯ ಶಿಕ್ಷಕರೊಬ್ಬರ ಬೇಸರದ ನುಡಿ. ರಾಜ್ಯ ಸರ್ಕಾರವು ಒಂದರಿಂದ 10ನೇ ತರಗತಿವರೆಗಿನ ಸರ್ಕಾರಿ ಶಾಲೆ ಮತ್ತು ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೆ ಬೇಯಿಸಿದ ಮೊಟ್ಟೆ, ಶೇಂಗಾ ಚಿಕ್ಕಿ ಮತ್ತು ಬಾಳೆಹಣ್ಣು ನೀಡುತ್ತಿದೆ. ಈ ಹಿಂದೆ ವಾರದಲ್ಲಿ ಎರಡು ದಿನ ಮಾತ್ರ ಮೊಟ್ಟೆ ನೀಡಲಾಗುತ್ತಿತ್ತು.

ಅಜೀಂ ಪ್ರೇಂಜೀ ಫೌಂಡೇಶನ್ ಸರ್ಕಾರದ ಜೊತೆ ಕೈ ಜೋಡಿಸಿದ ನಂತರ ವಾರದ ನಾಲ್ಕು ದಿನ ಫೌಂಡೇಶನ್ ಮತ್ತು ಎರಡು ದಿನ ರಾಜ್ಯ ಸರ್ಕಾರವು ಈ ಮೊತ್ತ ಭರಿಸುತ್ತಿದೆ. ಈ ಮೂಲಕ ವಾರದ ಆರು ದಿನಗಳೂ ಸಹ ವಿದ್ಯಾರ್ಥಿಗಳಿಗೆ ಮೊಟ್ಟೆ ಭಾಗ್ಯ ದೊರೆತಿದೆ.

ಸರ್ಕಾರ ಪ್ರತಿ ಮೊಟ್ಟೆಗೆ 6 ನೀಡುತ್ತದೆ. ಮೊಟ್ಟೆ ಖರೀದಿಗೆ 5.20 ಮೊಟ್ಟೆ ಸುಲಿಯಲು 30 ಪೈಸೆ ಮತ್ತು ಬೇಯಿಸಲು ಗ್ಯಾಸ್ ವೆಚ್ಚ ಎಂದು 50 ಪೈಸೆ ಹಂಚಿಕೆ ಮಾಡಲಾಗುತ್ತದೆ. ಆದರೆ ಈಗ ಸಗಟು ಮಾರುಕಟ್ಟೆಯಲ್ಲಿಯೇ ಒಂದು ಮೊಟ್ಟೆ ದರ 6ಕ್ಕೆ ತಲುಪಿದೆ. ಸರ್ಕಾರ ನೀಡುತ್ತಿರುವ 5.20 ಬೆಲೆಗೆ ಮೊಟ್ಟೆ ದೊರೆಯುವುದು ದುರ್ಲಭವಾಗಿದೆ. ಕೆಲವು ಶಾಲೆಗಳ ಶಿಕ್ಷಕರು ಸ್ಥಳೀಯವಾಗಿಯೇ ಮೊಟ್ಟೆ ಖರೀದಿಸುತ್ತಿದ್ದರು.

**ಪೋಷಕರ ಕೆಂಗಣ್ಣಿಗೆ ಗುರಿ**

**ಕೋಳಿ ಮೊಟ್ಟೆ ವಿತರಣೆಯು ತಲೆ ಬಿಸಿ ಮಾಡಿದೆ. ಮೊಟ್ಟೆ ವಿತರಣೆಯಲ್ಲಿ ಲೋಪಗಳಾದರೆ ಅಧಿಕಾರಿಗಳು ಮತ್ತು ಪೋಷಕರ ಕೆಂಗಣ್ಣಿಗೆ ಗುರಿ ಆಗಬೇಕು. ಆದರೆ ತಮ್ಮ ಸಮಸ್ಯೆ ಪರಿಹರಿಸುವವರು ಯಾರು ಎನ್ನುವ ಪ್ರಶ್ನೆಯನ್ನು ಜಿಲ್ಲೆಯ ಶಿಕ್ಷಕರು ಮುಂದಿಡುವರು.**

## ಮುಡಾ ಹಗರಣಕ್ಕೆ ಮತ್ತೊಂದು ಟ್ವಿಸ್ಟ್: ಸಿಎಂ ಪತ್ನಿ ಪಾರ್ವತಿ ಸೇರಿ 12 ಜನರ ವಿರುದ್ಧ ಕೇಸ್ ದಾಖಲು

**• ಉದಯವಾಹಿನಿ, ಮೈಸೂರು**

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಇಲ್ಲಿಯವರೆಗು ಸಾಕಷ್ಟು ತನಿಖೆಯ ಪ್ರಗತಿ ಕಂಡಿದೆ. ಸಿಎಂ ಸಿದ್ದರಾಮಯ್ಯ ಲೋಕಾಯುಕ್ತ ವಿಚಾರಣೆಗೆ ಹಾಜರಾಗಿದ್ದು ಹಾಗೂ ಇಡಿ ಅಧಿಕಾರಿಗಳು ಕೂಡ ಸಿದ್ದರಾಮಯ್ಯ ಅವರಿಗೆ ನೋಟಿಸ್ ನೀಡಿದ್ದು ಎಲ್ಲವೂ ಆದ ಬಳಿಕ ಕೇಸ್ ಇನ್ನು ಕೋರ್ಟ್‌ನಲ್ಲಿ ಇದೆ. ಇದರ ಮಧ್ಯ ಇದೀಗ ಪ್ರಕರಣಕ್ಕೆ ಮತ್ತೊಂದು ಟ್ವಿಸ್ಟ್ ಸಿಕ್ಕಿದ್ದು ಭೂಮಾಲಿಕ ದೇವರಾಜಯ್ಯ ಅಣ್ಣನ ಮಗಳು ಸಿಎಂ ಸಿದ್ದರಾಮಯ್ಯ, ಪತ್ನಿ ಪಾರ್ವತಿ ಹಾಗೂ ಭಾಮೈದ ಮಲ್ಲಿಕಾರ್ಜುನ ಸ್ವಾಮಿ ವಿರುದ್ಧ ಕೋರ್ಟ್‌ನಲ್ಲಿ ದಾವೆ ಹೂಡಿದ್ದಾರೆ.

ಹೌದು ಸಿಎಂ, ಪತ್ನಿ ಪಾರ್ವತಿ ಬಾಮೈದ ಸೇರಿ 12 ಜನರ ವಿರುದ್ಧ ಮೈಸೂರಿನ ಜೆಎಂಎಫ್‌ಸಿ ಕೋರ್ಟ್‌ನಲ್ಲಿ ದಾವೆ ಹೂಡಿದ್ದಾರೆ. ಭೂಮಿ ಮಾರಿದ ದೇವರಾಜಯ್ಯ ಸಂಬಂಧಿಕರಿಂದ ಭೂಮಿ ಪಡೆದುಕೊಂಡು, ಸಿಎಂ ಬಾಮೈದ ಮಲ್ಲಿಕಾರ್ಜುನ್‌ಗೆ ಭೂಮಿ ಮಾರಿದ್ದ. ದೇವರಾಜು ಮೋಸ ಮಾಡಿದ್ದಾರೆ ಎಂದು ದೇವರಾಜ್ ಸಂಬಂಧಿಕರು ಆರೋಪಿಸಿದ್ದಾರೆ. ದೇವರಾಜು ಆರೋಪಿಸಿ ಸಂಬಂಧಿಕರು ಇದೀಗ ದಾವೇ ಹೂಡಿದ್ದಾರೆ.

ದೇವರಾಜು ಅಣ್ಣನ ಮೈಲಾರಯ್ಯನ ಮಗಳು ಜಮುನಾ ಎನ್ನುವವರು ಇದೀಗ ದಾವೆ ಹೂಡಿದ್ದಾರೆ. ನನ್ನ ಚಿಕ್ಕಪ್ಪ ದೇವರಾಜು ಭೂಮಿ ಮಾರಿರುವುದು ಯಾವುದೇ ಕಾರಣಕ್ಕೂ ನನಗೆ ಇಲ್ಲಿಯವರೆಗೂ ಗೊತ್ತಿರಲಿಲ್ಲ ಸಿಎಂ ಕುಟುಂಬಕ್ಕೆ ಭೂಮಿ ಮಾರಿ ಇರುವುದು ನನಗೆ ಗೊತ್ತೇ ಇರಲಿಲ್ಲ ಮಾಧ್ಯಮಗಳ ಮೂಲಕ ಮಾರಾಟವಾಗಿರುವುದು. ಗೊತ್ತಾಗಿದೆ.

ಕುಟುಂಬದ ಪ್ರಕಾರ ಭೂಮಿ ನನ್ನ ತಂದೆ ಹೆಸರಿಗೆ ಬರಬೇಕು ಎಂದರು.



ಉದಯವಾಹಿನಿ ಚಿತ್ರ

**ಸಿಎಂ ಕುಟುಂಬಕ್ಕೆ ಭೂಮಿ ಮಾರಿ**

**ಆದರೆ ಇವರೆಲ್ಲ ನನ್ನ ಗಮನಕ್ಕೆ ತರದೆ ಭೂಮಿ ಮಾರಾಟ ಮಾಡಿದ್ದಾರೆ. ಭೂಮಿ ಮಾರಾಟ ಮಾಡಿದಾಗ ನಾವೆಲ್ಲ ಚಿಕ್ಕವರು. ಇದಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಯನ್ನು ಕೋರ್ಟಿಗೆ ಕೊಟ್ಟಿದ್ದೇನೆ. ಸಿಎಂ ಕುಟುಂಬ ಈ ಭೂಮಿ ಖರೀದಿಸಿದರೆ ಅದಕ್ಕೂ ನನಗೂ ಸಂಬಂಧವಿಲ್ಲ. ನ್ಯಾಯಯುತವಾಗಿ ಭೂಮಿ ನಮಗೆ ಬರಬೇಕು ಎಂದು ದೇವರಾಜು ಅಣ್ಣ ಮೈಲಾರಯ್ಯನ ಮಗಳು ಜಮುನಾ ಹೇಳಿಕೆ ನೀಡಿದರು.**

## ಡಿ. 1ರಿಂದ ಭತ್ತ, ರಾಗಿ ಖರೀದಿ ನೋಂದಣಿ

**• ಉದಯವಾಹಿನಿ, ರಾಮನಗರ**

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ (ಎಂಎಸ್‌ಪಿ) ರೈತರಿಂದ ಭತ್ತ ಹಾಗೂ ರಾಗಿ ಖರೀದಿಸಲು ಡಿ. 1ರಿಂದ 31ರವರೆಗೆ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ. ಈ ಸಲ ಹಾರೋಹಳ್ಳಿ ತಾಲ್ಲೂಕಿನಲ್ಲೂ ನೂತನವಾಗಿ ಭತ್ತ ಮತ್ತು ರಾಗಿ ಖರೀದಿ ನೋಂದಣಿ ಮತ್ತು ಖರೀದಿ ಕೇಂದ್ರ ತೆರೆಯಲಾಗುವುದು' ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಹೇಳಿದರು.

ಬೆಂಗಳೂರು ಗ್ರಾಮಾಂತರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, 'ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತವರು ಬೆಂಬಲ ಬೆಲೆಯಡಿ ರೈತರಿಂದ ರಾಗಿ ಮತ್ತು ಭತ್ತ ಖರೀದಿಸುವ ಅಧಿಕೃತ ಏಜೆನ್ಸಿಯಾಗಿದೆ. ನೋಂದಾಯಿತ ರೈತರಿಂದ 2025ರ ಜ. 1ರಿಂದ ಮಾರ್ಚ್ 31ರವರೆಗೆ ಆಹಾರ ಧಾನ್ಯ ಖರೀದಿಸಲಾಗುವುದು' ಎಂದರು. ರೈತರಿಂದ ರಾಗಿ ಮತ್ತು ಭತ್ತ ಖರೀದಿಸಲು ತೆರೆಯಲಾಗಿರುವ ಪ್ರತಿ ಖರೀದಿ ಕೇಂದ್ರಕ್ಕೆ ಕೃಷಿ ಇಲಾಖೆ ವತಿಯಿಂದ ಗ್ರೇಡರ್‌ಗಳನ್ನು ನೇಮಿಸಬೇಕು. ರೈತರು ನೋಂದಣಿ ಮಾಡಿಸುವ ಮುನ್ನ ಅಧಿಕಾರಿಗಳು ರೈತರ ದಾಖಲಾತಿಗಳನ್ನು ಖಾತರಿಪಡಿಸಿಕೊಂಡು ನೋಂದಣಿ ಮಾಡಿಸಿಕೊಳ್ಳಬೇಕು. ರೈತರಿಂದ ರಾಗಿ, ಭತ್ತ ಖರೀದಿಸುವ ಸಂದರ್ಭದಲ್ಲಿ ಯಾವುದೇ ತೊಂದರೆಯಾಗದಂತೆ ಎಚ್ಚರ ವಹಿಸಬೇಕು' ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಉದಯವಾಹಿನಿ ಚಿತ್ರ

**ರೈತರ ಬೆಳೆಗೆ ಸೂಕ್ತ ಬೆಲೆ**

**ತರು ತಮ್ಮ ಬೆಳೆ ಮಾರಾಟ ಮಾಡಲು ಯಾವುದೇ ಮಧ್ಯವರ್ತಿಗಳ ಸಹಾಯ ಪಡೆದು ವಂಚನೆಗೊಳಗಾಗಬಾರದು. ರೈತರ ಬೆಳೆಗೆ ಸೂಕ್ತ ಬೆಲೆ ನೀಡುವ ಉದ್ದೇಶದಿಂದ ಸರ್ಕಾರ ಎಂಎಸ್‌ಪಿ ಯೋಜನೆಯನ್ನು ಜಾರಿಗೆ ತಂದಿದೆ. ಹಾಗಾಗಿ, ಮಧ್ಯವರ್ತಿಗಳನ್ನು ಸಂಪರ್ಕಿಸದೆ ನೇರವಾಗಿ ಖರೀದಿ ಕೇಂದ್ರಗಳಲ್ಲಿ ನೋಂದಣಿ ಮಾಡಿಕೊಂಡು, ರಾಗಿ ಹಾಗೂ ಭತ್ತವನ್ನು ಮಾರಾಟ ಮಾಡಬೇಕು' ಎಂದು ಸಲಹೆ ನೀಡಿದರು.**

## ಪ್ರೇಕ್ಷಕರ ಮನಗೆದ್ದ ಪರಸಂಗದ ಗೆಂಡೆತಿಮ್ಮ

**• ಉದಯವಾಹಿನಿ, ನಾಗಮಂಗಲ**

ರಾಜ್ಯಮಟ್ಟದ ನಾಗರಂಗ ನಾಟಕೋತ್ಸವದಲ್ಲಿ ಪ್ರದರ್ಶನಗೊಂಡ 'ಪರಸಂಗದ ಗೆಂಡೆ ತಿಮ್ಮ' ನಾಟಕವು ಕಥೆ, ಬಣ್ಣ ಬಣ್ಣದ ದೀಪಾಲಂಕಾರ ಮತ್ತು ಪಾತ್ರಗಳ ಅಭಿನಯದ ಮೂಲಕ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದ ಕಲಾಶಾರದೆ ಲೀಲಾವತಿ ವೇದಿಕೆಯಲ್ಲಿ ಕನ್ನಡ ಸಂಘದಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಮತ್ತು ರಾಜ್ಯಮಟ್ಟದ ನಾಗರಂಗ ನಾಟಕೋತ್ಸವದ ಎರಡನೇ ದಿನವಾದ ಮಂಗಳವಾರ ಕೆ.ಎಸ್.ಡಿ.ಎಲ್.ಚಂದ್ರು, ನಿರ್ದೇಶನದಲ್ಲಿ ಬೆಂಗಳೂರಿನ ರೂಪಾಂತರ ತಂಡದಿಂದ ನಾಟಕ ಪ್ರದರ್ಶನಗೊಂಡಿತು.

ನಾಟಕದಲ್ಲಿ ಕೆಂಪಕ್ಕ, ವೆಂಕಟಣ್ಣ, ಊರಿನ ಗೌಡ, ಕೆಂಚ, ಕಾಳ, ರತ್ನ, ಮರಕ್ಕೆ ಸೇರಿದಂತೆ ವಿವಿಧ ಪಾತ್ರಗಳು ಗಮನ ಸೆಳೆದವು. ನಾಟಕದಲ್ಲಿ ನಾಗರಿಕತೆಯ ಪ್ರತಿನಿಧಿಯಾದ ತಿಮ್ಮನ ಹೆಂಡತಿ, ಹಳ್ಳಿ ಮುಗ್ಧನಾದ ಸಂಚಾರಿ ವ್ಯಾಪಾರಿ ತಿಮ್ಮನು ಹಳ್ಳಿ–ಹಳ್ಳಿಗಳಿಗೆ ತೆರಳಿ ಆಧುನಿಕ ಸರಕುಗಳನ್ನು ತಲುಪಿಸುತ್ತಾ, ಗ್ರಾಮಗಳಲ್ಲಿನ ಸೌಹಾರ್ದ ಜೀವನಕ್ಕೆ ಆಧುನಿಕತೆಯ ಪ್ರವೇಶದಿಂದ ಆದ ಧಕ್ಕೆಯೇ ನಾಟಕದ ವಸ್ತುವಾಗಿದೆ. ಈ ರಾಷ್ಟ್ರೀಯ 6. ವಿದೇಶ 5. ಮನೋರಂಜನೆ ತಿಮ್ಮಣ್ಣನ ಪಾತ್ರಧಾರಿಯ ಹಾವಭಾವ, ಸಂಭಾಷಣೆ, ನಟನೆಯು ನೋಡುಗರ ಗಮನ ಸೆಳೆಯಿತು. ಅಲ್ಲದೇ ನಾಟಕದುದ್ದಕ್ಕೂ ಬರುತ್ತಿದ್ದ ತಿಮ್ಮನ ಪಾತ್ರದ ಪರಸಂಗದ ಪದಗಳು ಪ್ರೇಕ್ಷಕರ ಚಪ್ಪಾಳೆ ಪಡೆದುಕೊಂಡವು. ಅಲ್ಲದೇ ತಿಮ್ಮನ ಮದುವೆ ಸನ್ನಿವೇಶದಲ್ಲಿ ಪಾತ್ರಧಾರಿಗಳ ಸೋಬಾನೆ ಪದವು ಕೇಳುಗರಿಗೆ ಹಿತಾನುಭವವನ್ನು ನೀಡಿದವು.



ಉದಯವಾಹಿನಿ ಚಿತ್ರ

**ಕನ್ನಡ ಸಂಘದ ವತಿಯಿಂದ ಸ್ಮರಣಿಕೆ**

**ನಾಟಕದ ಪಾತ್ರಗಳು ಸಂದರ್ಭಕ್ಕೆ ತಕ್ಕಂತೆ ಹಾಸ್ಯ ಸನ್ನಿವೇಶವನ್ನು ಸೃಷ್ಟಿಸುವುದು ನೋಡುಗರನ್ನು ನಗೆಗಡಲಲ್ಲಿ ತೇಲುವಂತೆ ಮಾಡಿದವು. ಮತ್ತಷ್ಟು (65) ನಾಟಕ ಪ್ರದರ್ಶನದ ನಂತರ ಪ್ರದರ್ಶನ ನೀಡಿದ ಬೆಂಗಳೂರಿನ ರೂಪಾಂತರ ತಂಡಕ್ಕೆ ಕನ್ನಡ ಸಂಘದ ವತಿಯಿಂದ ಸ್ಮರಣಿಕೆಯನ್ನು ನೀಡಿ ಗೌರವಿಸಲಾಯಿತು.**

## ಆರ್‌ಟಿಒ ಕಚೇರಿ ಮೇಲೆ ಲೋಕಾಯುಕ್ತ ದಾಳಿ: ದಾಖಲೆ ಪರಿಶೀಲನೆ

**• ಉದಯವಾಹಿನಿ, ತುಮಕೂರು**

ನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಮಧ್ಯಾಹ್ನ 12.30 ಗಂಟೆಯಿಂದ ದಾಖಲೆ ಪರಿಶೀಲನೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಹನ್ನೆರಡು ಜನ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಕಚೇರಿ ಒಳಗಡೆ ಇದ್ದ ಸಾರ್ವಜನಿಕರು ಮತ್ತು ಬೈಕ್‌ಗಳನ್ನು ತಪಾಸಣೆ ನಡೆಸಿ ಹೊರಗಡೆ ಬಿಡುತ್ತಿದ್ದಾರೆ.

## ಪೊಲೀಸ್ ಠಾಣೆಯಲ್ಲಿ ರೌಡಿಗಳಿಗೆ ಸನ್ಮಾನ: ವರದಿ ಸಲ್ಲಿಸುವಂತೆ ಎಸ್‌ಪಿ ಸೂಚನೆ

**• ಉದಯವಾಹಿನಿ, ರಾಮನಗರ**

ನಗರದ ಟೌನ್ ಪೊಲೀಸ್ ಠಾಣೆಯಲ್ಲಿ ಕಳೆದ ತಿಂಗಳು ಆಯುಧ ಪೂಜೆ ಮತ್ತು ವಿಜಯದಶಮಿ ಪ್ರಯುಕ್ತ ಹಮ್ಮಿಕೊಂಡಿದ್ದ ಪೂಜೆಯಲ್ಲಿ ರೌಡಿಗಳಾದ ನಗರಸಭೆ ಸದಸ್ಯ ಅಜ್ಮತ್ ಉಲ್ಲಾ ಮತ್ತು ಅಮ್ಮದ್‌ಗೆ ಠಾಣೆ ಸಬ್ ಇನ್‌ಸ್ಪೆಕ್ಟರ್ ಆಕಾಶ್, ಸನ್ಮಾನ ಮಾಡಿದ ಫೋಟೊ ವಾಟ್ಸ್‌ಆ್ಯಪ್ ಗ್ರೂಪ್‌ಗಳಲ್ಲಿ ಹರಿದಾಡುತ್ತಿದೆ.

ಘಟನೆಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಿ ವರದಿ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ್ ರೆಡ್ಡಿ, ರಾಮನಗರ ಡಿವೈಎಸ್ಪಿ ದಿನಕರ ಶೆಟ್ಟಿ ಅವರಿಗೆ ಸೂಚಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಬೀದರ್ ಸ್ವಾಭಿಮಾನಿ ದಲಿತ ಸಂಘಟನೆಗಳ ಒಕ್ಕೂಟವು ಘಟನೆ ಕುರಿತು ಗೃಹ ಸಚಿವರು ಹಾಗೂ ರಾಜ್ಯಪಾಲರಿಗೆ ದೂರು ಕೊಟ್ಟಿತ್ತು ಅದರ ಬೆನ್ನಲ್ಲೇ ವರದಿ ಸಲ್ಲಿಸುವಂತೆ ಎಸ್‌ಪಿ ಸೂಚನೆ ನೀಡಿದ್ದಾರೆ.

**ವರದಿ ಬಳಿಕ ಕ್ರಮ:** ಪೂಜಾ ಕಾರ್ಯಕ್ರಮದಲ್ಲಿ ರೌಡಿಗಳನ್ನು ಠಾಣೆಗೆ ಕರೆಯಿಸಿ ಸನ್ಮಾನ ಮಾಡಿರುವ ಘಟನೆ ಕುರಿತು ವಿಚಾರಿಸಿ ವರದಿ ನೀಡುವಂತೆ ಡಿವೈಎಸ್ಪಿ ಅವರಿಗೆ ಸೂಚಿಸಿರುವೆ. ವರದಿ ಬಂದ ಬಳಿಕ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು' ಎಂದು ಎಸ್‌ಪಿ ಕಾರ್ತಿಕ್ ರೆಡ್ಡಿ, ತಿಳಿಸಿದರು.

ರೌಡಿಸಂ ಸೇರಿದಂತೆ ಕಾನೂನು ವಿರೋಧಿ ಚಟುವಟಿಕೆಗಳಲ್ಲಿ ನಿರತರಾಗಿರುವವರನ್ನು ಮಟ್ಟಹಾಕಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಬೇಕಿದ್ದ ಪೊಲೀಸರೇ ರೌಡಿಗಳನ್ನು ಠಾಣೆಗೆ ಕರೆದು ಸನ್ಮಾನಿಸಿರುವುದು ಬೇಲಿಯೇ ಎದ್ದು ಹೊಲ ಮೇಯ್ದಂತೆ ಘಟನೆಗೆ ಕಾರಣರಾಗಿರುವ ಅಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು' ಎಂದು ಸ್ವಾಭಿಮಾನಿ ದಲಿತ ಸಂಘಟನೆಗಳ ಒಕ್ಕೂಟದ ಕೊತ್ತಿಪುರ ಗೋವಿಂದರಾಜು ಆಗ್ರಹಿಸಿದ್ದಾರೆ.



ಉದಯವಾಹಿನಿ ಚಿತ್ರ

**ವರದಿ ಬಳಿಕ ಕ್ರಮ**

## ಬಸ್–ಕಾರು ನಡುವೆ ಡಿಕ್ಕಿ: ಮೂವರ ಸಾವು

**• ಉದಯವಾಹಿನಿ, ರಾಮನಗರ**

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ಹೈವೇಯ ಸಂಘಬಸವನದೊಡ್ಡಿ ಗ್ರಾಮದ ಬಳಿ ರಾತ್ರಿ, ಕೆಎಸ್ ಆರ್‌ಟಿಸಿ ಬಸ್ ಮತ್ತು ಕಾರಿನ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತ ದಲ್ಲಿ ದಂಪತಿ ಸೇರಿ ಮೂರು ಮಂದಿ ಸಾವಿಗೀಡಾಗಿದ್ದಾರೆ. ಲಿಯಾಖತ್(50), ಆಸ್ಮಾ(38)ನೂರ್, ಅಹ್ಮದ್(48)ಮೃತರು. ಇವರು ಬೆಂಗಳೂರಿನ ಶಿವಾಜಿನಗರ ನಿವಾಸಿಗಳು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಬೆಂಗಳೂರಿನಿಂದ ಮೈಸೂರು ಕಡೆಗೆ ಹೋಗುತ್ತಿದ್ದ ಕಾರು ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್ ಹಾರಿ ಬಂದು ಬೆಂಗ ಳೂರು ಕಡೆಗೆ ತೆರಳುತ್ತಿದ್ದ ಕೆಎಸ್ ಆರ್‌ಟಿಸಿ ಬಸ್ಸಿಗೆ ಡಿಕ್ಕಿ ಹೊಡೆದಿದೆ. ಕಾರಿನಲ್ಲಿದ್ದ ಮೂರು ಮಂದಿ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ. ಬೆಂಗಳೂರಿನ ಶಿವಾಜಿ ನಗರ ನಿವಾಸಿಯಾಗಿರುವ ಲಿಯಾಖತ್ ಮತ್ತು ಆಸ್ಮಾ ದಂಪತಿಗಳು ಮೈಸೂರಿನ ತಮ್ಮ ಮಗಳ ಮನೆಗೆ ಸ್ನೇಹಿತ ನೂರ್ ಅಹ್ಮದ್ ಕಾರಿನಲ್ಲಿ ಹೊರಟಿದ್ದಾರೆ.

ನೂರ್ ಅಹ್ಮದ್ ಕಾರು ಚಾಲನೆ ಮಾಡುತ್ತಿದ್ದರು. ಸಂಘ ಬಸವನದೊಡ್ಡಿ ಸಮೀಪ 10 ಗಂಟೆಯ ಸುಮಾರಿಗೆ ಈ ಅಪಘಾತ ಸಂಭವಿಸಿದೆ. ಸ್ಥಳಕ್ಕೆ ರಾಮನಗರ ಸಂಚಾರ ಪೊಲೀಸರು ಆಗಮಿಸಿ ಕಾರಿನಲ್ಲಿದ್ದ ಮೃತ ಶವಗಳನ್ನು ಹೊರತೆಗೆದು ಜಿಲ್ಲಾಸ್ಪತ್ರೆಗೆ ರವಾನಿಸಿದ್ದಾರೆ.



ಉದಯವಾಹಿನಿ ಚಿತ್ರ

# ಶಿಥಿಲಾವಸ್ಥೆಯಲ್ಲಿ ತಂಗುದಾಣಗಳು: ಆತಂಕದಲ್ಲಿ ಪ್ರಯಾಣಿಕರು

**ತಂಗುದಾಣದಲ್ಲಿ ಬಸ್ ಪ್ರಯಾಣಕ್ಕಾಗಿ ಕಾಯುವ ಪ್ರಯಾಣಿಕರು ಅಪಾಯದ ಅಂಜಿಕೆಯಲ್ಲಿಯೇ ನಿಲ್ಲುವಂತಾಗಿದೆ**

**• ಉದಯವಾಹಿನಿ, ಬಂಗಾರಪೇಟೆ**

ಸರ್ಕಾರವು ಹಲವಾರು ವರ್ಷಗಳ ಹಿಂದೆ ಪ್ರತಿಯೊಂದು ಗೇಟ್‌ಗಳಲ್ಲಿ ಪ್ರಯಾಣಿಕರು ಗಾಳಿ, ಮಳೆ, ಬಿಸಿಲಿನಿಂದ ರಕ್ಷಿಸಿ ಕೊಳ್ಳಲು ಅನುಕೂಲವಾಗುವಂತೆ ತಂಗುದಾಣಗಳನ್ನು ನಿರ್ಮಿಸಿತ್ತು. ಸುಮಾರು 20ರಿಂದ 25ವರ್ಷಕ್ಕೂ ಮುಂಚೆ ನಿರ್ಮಿಸಿದ ಸಾರ್ವಜನಿಕ ತಂಗುದಾಣಗಳು ಇದೀಗ ಶಿಥಿಲಾವಸ್ಥೆ ತಲುಪಿದ್ದು ಮಳೆಗಾಲದಲ್ಲಿ ಕುಸಿದು ಬೀಳುವ ಅಪಾಯ ಎದುರಿಸುತ್ತಿವೆ.

ಬೆಂಗಳೂರು ಗ್ರಾಮಾಂತರ ತಾಲ್ಲೂಕಿನಾದ್ಯಂತ ಶಾಸಕ ಮತ್ತು ಸಂಸದರ ಅನುದಾನದಲ್ಲಿ ನಿರ್ಮಿಸಲಾದ ತಂಗುದಾಣಗಳಲ್ಲಿ ಕೇವಲ ತುಂಬಾ ಹಳೆಯದಾಗಿವೆ, ಮೇಲ್ಚಾವಣಿ, ಬೀಮ್‌ಗೆ ಅಳವಡಿಸಿದ ಕಬ್ಬಿಣದ ಸರಳುಗಳು ತುಕ್ಕು ಹಿಡಿದು ಸಿಮೆಂಟ್ ತುಂಡುಗಳು ಬೀಳುತ್ತಿವೆ. ತಂಗುದಾಣದಲ್ಲಿ ಬಸ್ ಪ್ರಯಾಣಕ್ಕಾಗಿ ಕಾಯುವ ಪ್ರಯಾಣಿಕರು ಅಪಾಯದ ಅಂಜಿಕೆಯಲ್ಲಿಯೇ ನಿಲ್ಲುವಂತಾಗಿದೆ.

ಕಾಮಸಮುದ್ರ, ಮುಖ್ಯ ರಸ್ತೆಯಲ್ಲಿರುವ ಕಂತೇಪುರಮಠ ಸಾರ್ವಜನಿಕ ತಂಗುದಾಣ ಇಪ್ಪತ್ತು ವರ್ಷಗಳ ಹಿಂದೆ ನಿರ್ಮಾಣ ಮಾಡಿದ್ದು. ಇದೀಗ ಶಿಥಿಲಗೊಂಡಿದೆ. ಕಬ್ಬಿಣ ಸರಳುಗಳು ಸವೆದು ಸಿಮೆಂಟ್ ತುಂಡುಗಳು ನೆಲಕ್ಕಚ್ಚುತ್ತಿವೆ.

ಸಕ್ಕನಹಳ್ಳಿ ತಂಗುದಾಣವೂ ಸಹ ಮಳೆ ಬಂದರೆ ಸಾಕು, ಪ್ರಯಾಣಿಕರ ತಲೆಯ ಮೇಲೆಯೇ ನೀರು ಸೋರುತ್ತದೆ. ರಸ್ತೆಯಲ್ಲಿ ಸಂಚರಿಸುವ ದ್ವಿಚಕ್ರ ವಾಹನ ಸವಾರರು ಮಳೆ ಬಂದರೆ ವಾಹನವನ್ನು ನಿಲ್ಲಿಸಿ ತಂಗುದಾಣದಲ್ಲಿ ಸ್ವಲ್ಪ ಸಮಯ ಆಶ್ರಯ ಪಡೆಯಲು ಬರುತ್ತಾರೆ. ಇಲ್ಲಿ ನೋಡಿದರೆ ಬಿಸಿಲಿನಿಂದಲೂ, ಮಳೆಯಿಂದಲೂ ರಕ್ಷಣೆ ಇಲ್ಲ. ಗುಂಡಾರ್ಲಹಳ್ಳಿ ತಂಗುದಾಣದ್ದೂ ಅದೇ ಸ್ಥಿತಿ. ದೋಣಿಮಡುಗು ಗ್ರಾಮ ಪಂಚಾಯಿತಿಯ ಗುಂಡಾರ್ಲಹಳ್ಳಿ ಕ್ರಾಸ್ ಬಳಿ 25 ವರ್ಷಗಳಿಗೂ ಮೊದಲು ನಿರ್ಮಿಸಿದ ತಂಗುದಾಣವೂ ಶಿಥಿಲಗೊಂಡಿದೆ. ಗಿಡಗಂಟಿಗಳು ಬೆಳೆದು ಹಾವುಗಳ ಆಶ್ರಯತಾಣವಾಗಿದೆ.

ಗ್ರಾಮಗಳ ಪ್ರಯಾಣಿಕರಿಗಾಗಿ ನಿರ್ಮಿಸಿರುವ ತಂಗುದಾಣ ಸಹ ಶಿಥಿಲಾವ್ಯವಸ್ಥೆ ತಲುಪಿದ್ದು, ಪುಂಡಪೋಕರಿಗಳ ಅನೈತಿಕ ಚಟು ವಟಿಕೆ ತಾಣವಾಗಿದೆ.

ರಾತ್ರಿ ಸಮಯದಲ್ಲಿ ಗೇಟ್‌ನಲ್ಲಿ ವಿದ್ಯುದೀಪ ಇಲ್ಲದ ಕಾರಣ ಈ ಗ್ರಾಮಗಳಿಗೆ ತೆರಳಲು ಪ್ರಯಾಣಿಕರು ತೊಂದರೆ ಅನುಭವಿಸಬೇಕಾಗಿದೆ ಎಂದು ಗ್ರಾಮದ ಬೂದಿಕೋಟೆ ರಮೇಶ ಬಿ ಅಳಲು ತೋಡಿಕೊಂಡಿದ್ದಾರೆ

ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಗೇಟ್‌ನಲ್ಲಿ ನಿರ್ಮಿಸಲಾಗಿರುವ ತಂಗುದಾಣಗಳು ಶಿಥಿಲಾವಸ್ಥೆ ತಲುಪಿದ್ದು ತಂಗುದಾಣದಲ್ಲಿ ಗಿಡಗಂಟಿಗಳು ಬೆಳೆದಿವೆ. ಗೋಡೆಗಳಲ್ಲಿನ ಸಿಮೆಂಟ್ ಕಿತ್ತು ಬಂದು ಬೀಳುವ ಸ್ಥಿತಿಯನ್ನು ತಲುಪಿದೆ. ಮತ್ತೊಂದು ತಂಗುದಾಣದಲ್ಲಿ ಕೆಲವರು ಮಧ್ಯದ ಬಾಟಲಿಗಳ ಚೂರುಗಳನ್ನು ಬಿಸಾಕಿದ್ದಾರೆ.

**ಮಳೆಗಾಲದಲ್ಲಿ ಕುಸಿದು ಬೀಳುವ ಅಪಾಯ**



ಉದಯವಾಹಿನಿ ಚಿತ್ರ

**ರಾತ್ರಿ ಸಮಯದಲ್ಲಿ ಪುಂಡಪೋಕರಿಗಳು ಇದೇ ತಂಗುದಾಣದಲ್ಲಿ ಕುಳಿತು ಮದ್ಯಪಾನ ಮಾಡಿ ಮದ್ಯದ ಬಾಟಲಿ, ತಿಂಡಿ ತಿನಿಸುಗಳ ಪೊಟ್ಟಣಗಳ ಪ್ಲಾಸ್ಟಿಕ್ ಕವರ್‌ಗಳನ್ನು ಇಲ್ಲೇ ಬಿಸಾಡುವುದರಿಂದ ನಿಲ್ದಾಣಗಳ ಅವಸ್ಥೆ ಹೇಳತೀರದು. ಕುಳಿತುಕೊಳ್ಳಲು ಹಾಕಲಾದ ಕಲ್ಲಿನ ಚಪ್ಪಡಿಗಳನ್ನು ಮುರಿದು ಹಾಕಿರುವುದರಿಂದ ಬಸ್ಸು ಬರುವತನಕ ಕುಳಿತು ವಿಶ್ರಮಿಸಿಕೊಳ್ಳಲೂ ಅವಕಾಶ ಇಲ್ಲದಂತಾಗಿದೆ ಎನ್ನುತ್ತಾರೆ ಬನಹಳ್ಳಿ ಮಂಜುನಾಥ.**

**ಪ್ರಯಾಣಿಕರ ಜೀವಕ್ಕೆ ಅಪಾಯ**

**ಇದರಿಂದ ಜನರು ತಂಗುದಾಣದ ಬಳಿ ಹೋಗಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಭಗೀರಥ ಆಗ್ರಹಿಸಿದರು. ಶಿಥಿಲಾವ್ಯವಸ್ಥೆಯಲ್ಲಿರುವ ತಂಗುದಾಣಗಳಿಂದ ಪ್ರಯಾಣಿಕರ ಜೀವಕ್ಕೆ ಅಪಾಯವಿದೆ. ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಹೊಸ ತಂಗುದಾಣಗಳನ್ನು ನಿರ್ಮಾಣ ಮಾಡಬೇಕು ಎಂಬುದು ಕಂತೇಪುರಮಠ ಶಿವಕುಮಾರ ಒತ್ತಾಯವಾಗಿದೆ. ರವಿಬಂಗಾರಪೇಟೆ, ಲೋಕೋಪಯೋಗಿ ಇಲಾಖೆ ಇಂಜನಿಯರ್. ಶಿಥಿಲಾವ್ಯವಸ್ಥೆಯಲ್ಲಿರುವ ತಂಗುದಾಣಗಳನ್ನು ನೆಲೆಸಮ ಮಾಡಿ, ನೂತನ ತಂಗುದಾಣ ನಿರ್ಮಾಣಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಲು ಕ್ರಮ ವಹಿಸಲಾಗುವುದು.**

**ಸಾರ್ವಜನಿಕರ ಜೀವದೊಂದಿಗೆ ಚೆಲ್ಲಾಟವಾಡದೆ ಜೀವಾಪಾಯ ಅಥವಾ ಇತರ ಹಾನಿ ಸಂಭವಿಸುವುದಕ್ಕೂ ಮೊದಲು ಶಿಥಿಲಾವಸ್ಥೆಯ ಕಟ್ಟಡಗಳನ್ನು ತೆರವುಗೊಳಿಸಿ ನೂತನ ಕಟ್ಟಡಗಳನ್ನು ನಿರ್ಮಿಸಲು ಸಂಬಂಧಿಸಿದವರು ತಯಾರಾಗಬೇಕಾಗಿದೆ**

**–ಕೊತ್ತೂರು ಪ್ರಭಾಕರ್**

## ಮಿನಿ ನ್ಯೂಸ್

### ಕದ್ದ ಚಿನ್ನ ಮನೆ ಮುಂದೆ ಇಟ್ಟು ಹೋದ ಕಳ್ಳರು

**• ಉದಯವಾಹಿನಿ ಮಂಡ್ಯ**

ಕದ್ದ ಚಿನ್ನಾಭರಣಗಳನ್ನು ಕಳ್ಳರು ವಾಪಸ್ ಮನೆಯ ಜಗಲಿಯಲ್ಲಿಟ್ಟು ಹೋಗಿರುವ ಘಟನೆ ತಾಲ್ಲೂಕಿನ ರಾಗಿಮುದ್ದನಹಳ್ಳಿ ಗ್ರಾಮದಲ್ಲಿ ನಡೆದಿದೆ. 3 ದಿನಗಳ ಹಿಂದೆ ಗ್ರಾಮದ ಸಿದ್ದೇಗೌಡ ಅವರ ಕುಟುಂಬದವರು ಪೂಜೆಗೆಂದು ಹೊರಗೆ ಹೋಗಿದ್ದ ವೇಳೆ ಮನೆಯ ಹೆಂಚುಗಳನ್ನು ತೆಗೆದು ಒಳನುಗ್ಗಿದ್ದ ಕಳ್ಳರು ಕಪಾಟನ್ನು ಒಡೆದು ಚಿನ್ನದ ಸರ, 15 ಗ್ರಾಂನ 3 ಜೊತೆ ಓಲೆ ಸೇರಿದಂತೆ ಒಟ್ಟು 75 ಗ್ರಾಂ ಚಿನ್ನಾಭರಣಗಳನ್ನು ಕದ್ದಿದ್ದರು. ಸಿದ್ದೇಗೌಡ ಮಂಡ್ಯ ಗ್ರಾಮಾಂತರ ಠಾಣೆ ದೂರು ನೀಡಿದ್ದರು, 2 ದಿನಗಳ ಅನಂತರ ಕಳ್ಳರು ಅವುಗಳನ್ನು ಮನೆಯ ಮುಂದಿನ ಜಗಲಿ ಮೇಲೆ ಇಟ್ಟು ಹೋಗಿದ್ದಾರೆ.

### ಭೀಕರ ಅಪಘಾತ: ಬಸ್ ಚಕ್ರದ ಕೆಳಗೆ ಬೈಕ್ ಸಿಲುಕಿ ದಂಪತಿ ಸಾವು

**• ಉದಯವಾಹಿನಿ ಚಿಂತಾಮಣಿ**

ಕೆ.ಎಸ್.ಆರ್.ಟಿ.ಸಿ. ಬಸ್ ಚಕ್ರದ ಕೆಳಗೆ ಬೈಕ್ ಸಿಲುಕಿ ದಂಪತಿ ಮೃತಪಟ್ಟ ಘಟನೆ ಶಿಡ್ಲಘಟ್ಟ ತಾಲ್ಲೂಕಿನಲ್ಲಿ ನಡೆದಿದೆ. ಬೊಮ್ಮಸಂದ್ರ ನಿವಾಸಿ ವೆಂಕಟೇಶ್ ಹಾಗೂ ಸರಸ್ವತಮ್ಮ ಮೃತ ದಂಪತಿಗಳು. ಚಿಂತಾಮಣಿ ತಾಲ್ಲೂಕಿನ ನಾರಾಯಣಳ್ಳಿ ಗ್ರಾಮಕ್ಕೆ ತೆರಳುವಾಗ ನಗರದ ಆದರ್ಶ ಟಾಕೀಸ್ ಬಳಿ ಬೆಳಗ್ಗೆ ಈ ಅಪಘಾತ ಸಂಭವಿಸಿದೆ. ಅಪಘಾತದ ಪರಿಣಾಮ ವೆಂಕಟೇಶ್ ಅವರ ತಲೆ ದೇಹದಿಂದ ಸಂಪೂರ್ಣ ಬೇರ್ಪಟ್ಟಿದೆ. ಕೆ.ಎಸ್. ಆರ್.ಟಿ.ಸಿ ಬಸ್ ಚಾಲಕನ ಅತಿವೇಗವೇ ಅಪಘಾತಕ್ಕೆ ಕಾರಣ ಎನ್ನಲಾಗಿದೆ.

### ಪಹಣಿಯಲ್ಲಿ ವಕ್ಫ್ ನಮೂದು: ಪ್ರತಿಭಟನೆ

**• ಉದಯವಾಹಿನಿ ತುಮಕೂರು**

ರೈತರ ಜಮೀನಿನ ಪಹಣಿಯಲ್ಲಿ ವಕ್ಸ್ ಹೆಸರು ನಮೂದಿಸುವುದನ್ನು ಕೈಬಿಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ನೇತೃತ್ವದಲ್ಲಿ ರೈತರು ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಬಗರ್‌ಹುಕುಂ ಸಾಗುವಳಿ ರೈತರಿಗೆ ತಕ್ಷಣವೇ ಜಮೀನು ಮಂಜೂರಾತಿ ಆದೇಶ ಪತ್ರ ನೀಡಬೇಕು. ಅತಿವೃಷ್ಟಿ, ಅನಾವೃಷ್ಟಿಯಿಂದ ಬೆಳೆ ಕಳೆದುಕೊಂಡ ರೈತರಿಗೆ ಪ್ರತಿ ಎಕರೆಗೆ 25 ಸಾವಿರ ಪರಿಹಾರ ನೀಡ ಬೇಕು. ಪಾವಗಡ ತಾಲ್ಲೂಕಿನಲ್ಲಿ ಸೋಲಾರ್ ಪಾರ್ಕ್ ನಿರ್ಮಾಣಕ್ಕೆ ಪಡೆದುಕೊಂಡ ಭೂಮಿಗೆ ಎಕರೆಗೆ 80 ಸಾವಿರದಿಂದ 1 ಲಕ್ಷ ಬಾಡಿಗೆ ನಿಗದಿಪಡಿಸಬೇಕು ಎಂದು ಒತ್ತಾಯಿಸಿದರು. ಎಲ್ಲಾ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಸಾಲ ಮನ್ನಾ ಮಾಡಬೇಕು. ಬಿಪಿಎಲ್ ಕಾರ್ಡ್ ರದ್ದುಪಡಿಸಬಾರದು. ಸಾಲ ವಸೂಲಿಗೆ ರಾಷ್ಟ್ರೀಕೃತ ಬ್ಯಾಂಕ್‌ಗಳು ರೈತರಿಗೆ ನೋಟಿಸ್ ನೀಡುವುದನ್ನು ತಡೆಯಬೇಕು. ಮಧುಗಿರಿ ತಾಲ್ಲೂಕಿನ ಬಿಜುವಾರ ಕೆರೆ ನೀರು ನುಗ್ಗಿ ಬೆಳೆ ಕಳೆದುಕೊಂಡವರಿಗೆ ಎಕರೆಗೆ 20 ಸಾವಿರ ಪರಿಹಾರ ನೀಡಬೇಕು. ಕೃಷಿ ಕಾಯ್ದೆಗೆ ತಿದ್ದುಪಡಿ ತರಬೇಕು. ಪಾವಗಡ ತಾಲ್ಲೂಕಿನಲ್ಲಿ ವೈದ್ಯರು, ನರ್ಸ್ ಹುದ್ದೆ ಭರ್ತಿ ಮಾಡಬೇಕು ಎಂದು ಮನವಿ ಮಾಡಿದರು.

**ರೈತರ ಜಮೀನಿನ ಪಹಣಿಯಲ್ಲಿ ನಮೂದಾಗಿರುವ ವಕ್ಫ್ ಹೆಸರನ್ನು ತಕ್ಷಣ ತೆಗೆಯಬೇಕು. ಇನ್ನು ಮುಂದೆ ಇಂತಹ ಅವಘಡಗಳಿಗೆ ಅವಕಾಶ ನೀಡಬಾರದು ಎಂದು ಆಗ್ರಹಿಸಿದರು.**

### ತುಂಬುಗರ್ಭಿಣಿ ಪತ್ನಿ ಸೇರಿ ಐವರ ಹತ್ಯೆ ಪ್ರಕರಣ: ಪರಾಧಿಗೆ ಮರಣದಂಡನೆ

**• ಉದಯವಾಹಿನಿ ಮೈಸೂರು**

ತುಂಬುಗರ್ಭಿಣಿ ಪತ್ನಿ ಸೇರಿದಂತೆ ಐವರನ್ನು ಬರ್ಬರವಾಗಿ ಹತ್ಯೆಗೈದಿದ್ದ ಅಪರಾಧಿಗೆ ಮರಣದಂಡನೆ ವಿಧಿಸಿ ಮೈಸೂರಿನ 5ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ. 35 ವರ್ಷದ ಮಣಿಕಂಠಸ್ವಾಮಿ ಶಿಕ್ಷೆಗೊಳಗಾದ ಅಪರಾಧಿ. ಮೈಸೂರಿನ ಹೆಚ್.ಡಿ.ಕೋಟೆ ತಾಲ್ಲೂಕಿನ ಚಾಮೇಗೌಡನ ಹುಂಡಿ ಗ್ರಾಮದಲ್ಲಿ 2021ರ ಏಪ್ರಿಲ್ 28ರಂದು ನಡೆದಿದ್ದ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೋರ್ಟ್ ಇದೀಗ ತೀರ್ಪು ಪ್ರಕಟಿಸಿದೆ. ಅಪರಾಧಿ ಮಣಿಕಂಠಸ್ವಾಮಿಗೆ ಗಲ್ಲು ಶಿಕ್ಷೆ ವಿಧಿಸಿ ಕೋರ್ಟ್ ಆದೇಶ ನೀಡಿದೆ. ಮಣಿಕಂಠಸ್ವಾಮಿ ತನ್ನ ಪತ್ನಿ ಮೇಲಿನ ಅನುಮಾನಕ್ಕೆ ಈ ಕೊಲೆ ಮಾಡಿದ್ದ. 9 ತಿಂಗಳ ತುಂಬುಗರ್ಭಿಣಿ ಪತ್ನಿ ಗಂಗೆ, ತಾಯಿ ಕೆಂಪಮ್ಮ, ಒಂದುವರೆ ವರ್ಷದ ಮಗ ಹಾಗೂ ನಾಲ್ಕು ವರ್ಷದ ಮತ್ತೋರ್ವ ಮಗ ಸೇರಿ ಐವರನ್ನು ಭೀಕರವಾಗಿ ಹತ್ಯೆ ಮಾಡಿದ್ದ. ಆರೋಪಿಯ ಅಪರಾಧ ಸಾಭೀತಾದ ಹಿನ್ನಲೆಯಲ್ಲಿ ಇದೀಗ ನ್ಯಾಯಾಲಯ ಅಪರಾಧಿಗೆ ಮರಣದಂಡನೆ ಶಿಕ್ಷೆ ವಿಧಿಸಿ ತೀರ್ಪು ಪ್ರಕಟಿಸಿದೆ.

### ಜೈಲಿಗೆ ಕಳುಹಿಸುವ ತಾಕತ್ತು ಇದೆ: ಪ್ರದೀಪ್ ಈಶ್ವರ್ ವಿರುದ್ಧ ವೆಂಕಟಸ್ವಾಮಿ ಗರಂ

**• ಉದಯವಾಹಿನಿ ಚಿಕ್ಕಬಳ್ಳಾಪುರ**

'ಶಾಸಕನಾದ ತಕ್ಷಣ ದುರಹಂಕಾರ ಬರಬಾರದು. ಪರಿಶಿಷ್ಟರು ಮನಸ್ಸು ಮಾಡಿದರೆ ಜೈಲಿಗೆ ಕಳುಹಿಸುವ ತಾಕತ್ತು ಇದೆ' ಎಂದು ಸಮತಾ ಸೈನಿಕ ದಳದ ರಾಷ್ಟ್ರೀಯ ಅಧ್ಯಕ್ಷ ಎಂ. ವೆಂಕಟಸ್ವಾಮಿ, ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಕೆಂಡಾಮಂಡಲರಾದರು.

ನಗರದಲ್ಲಿ ನಡೆದ ಸಮತಾ ಸೈನಿಕ ದಳದ ಶತಮಾ ನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಮ್ಮ ಸಂಘಟನೆಯ ಮುಖಂಡರ ಬಗ್ಗೆ ಚಿಕ್ಕಬಳ್ಳಾಪುರದ ಹೊಸ ಶಾಸಕರು ಕೇವಲವಾಗಿ ಮಾತನಾಡಿದ್ದಾರೆ. ರೋಲ್‌ಕಾಲ್ ಎನ್ನುವ ಅವರ ಹೇಳಿಕೆಯನ್ನು ಖಂಡಿಸುತ್ತೇವೆ ಎಂದರು.



ಶಾಸಕರು ಓಬವ್ವ ಜಯಂತಿಗೆ ಬರಲಿಲ್ಲ ಎನ್ನುವ ಬೇಸರವನ್ನು ಸಂಘಟನೆಯ ವೆಂಕಟರಮಣಪ್ಪ ವ್ಯಕ್ತಪಡಿಸಿದ್ದರು. ಆದರೆ ಶಾಸಕರು ದುರಹಂಕಾರದ ಮಾತುಗಳನ್ನು ಆಡಿದ್ದಾರೆ.

ವೆಂಕಟರಮಣಪ್ಪ ಮನಸ್ಸು ಮಾಡಿದರೆ ಇವರನ್ನು ಜೈಲಿಗೆ ಕಳುಹಿಸುವ ತಾಕತ್ತು ಇದೆ. ಇನ್ನೊಮ್ಮೆ ದಲಿತ ಜನಾಂಗ ಮತ್ತು ನಮ್ಮ ಸಂಘಟನೆಯ ಮುಖಂಡರ ಬಗ್ಗೆ ಲಘುವಾಗಿ ಮಾತನಾಡಿದರೆ ಜೈಲಿಗೆ ಕಳುಹಿಸಬೇಕಾಗುತ್ತದೆ' ಎಂದರು. ಈ ಬಗ್ಗೆ ಶಾಸಕರು ಕೂಡಲೇ ಕ್ಷಮೆ ಕೇಳಬೇಕು. ಕ್ಷಮೆ ಕೇಳದಿದ್ದರೆ ಹೋರಾಟದ ಸ್ವರೂಪ ಬದಲಾವಣೆ ಮಾಡಿಕೊಳ್ಳುತ್ತೇವೆ.

ಈ ಹಿಂದೆ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ದಲಿತ ಮುಖಂಡರನ್ನು ಅವಮಾನಿಸಿದಾಗ ಅವರನ್ನು ಜಿಲ್ಲೆಯಿಂದ ಹೊರಗೆ ಹಾಕುವ ಕೆಲಸ ಮಾಡಿದವು ಎಂದರು. ಚಿಕ್ಕಬಳ್ಳಾಪುರ ಈ ಹಿಂದೆ ಮೀಸಲು ಕ್ಷೇತ್ರವಾಗಿತ್ತು. ಇಲ್ಲಿ ಆರ್‌ಪಿಐಗೆ ತನ್ನದೇ ಆದ ಶಕ್ತಿ ಇದೆ. ಇದೇ ರೀತಿಯಲ್ಲಿ ದುರಹಂಕಾರ ಪ್ರದರ್ಶಿಸಿದರೆ ನಿನ್ನ ಮನೆಗೆ ಕಳುಹಿಸಬೇಕಾಗುತ್ತದೆ ಎಂದು ಏಕವಚನದಲ್ಲಿ ವಾಗ್ದಾಳಿ ನಡೆಸಿದರು.

ಅಂತರಾಳದಿಂದ.. EDITORIAL

# ಬಿಜೆಪಿಯ ಕೊರಳಿಗೆ ಉರುಳಾದ ವಕ್ಫ್

ರಾಜ್ಯದಲ್ಲಿ ನಡೆದ ಉಪಚುನಾವಣೆಯ ಫಲಿತಾಂಶ ಹೊರ ಬಿದ್ದ ಬೆನ್ನಿಗೇ ಬಿಜೆಪಿಯೊಳಗಿನ ಭಿನ್ನಮತ ಉಲ್ಬಣಗೊಂಡಿದೆ. ಮೂರೂ ಕ್ಷೇತ್ರಗಳಲ್ಲಿ ಬಿಜೆಪಿ ಹೀನಾಯ ಸೋಲನುಭವಿಸಿದ ಬೆನ್ನಿಗೇ, ಬಿಜೆಪಿಯೊಳಗಿರುವ ಭಿನ್ನಮತೀಯರು ಸೋಲಿನ ಸಂಪೂರ್ಣ ಹೊಣೆಯನ್ನು ಯಡಿಯೂರಪ್ಪ ಮತ್ತು ಅವರ ಪುತ್ರ ವಿಜಯೇಂದ್ರ ಅವರ ಕೊರಳಿಗೆ ಕಟ್ಟಿದ್ದಾರೆ. ಉಪಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು, ಸಿದ್ದರಾಮಯ್ಯ ವಿರುದ್ಧ ಬಿಜೆಪಿ ಭಾರೀ ಪ್ರತಿಭಟನೆಗಳನ್ನು ಹಮ್ಮಿಕೊಂಡಿತ್ತು. ಉಪಚುನಾವಣೆಯ ಹಿನ್ನೆಲೆಯಲ್ಲೇ ವಕ್ಸ್ ವಿವಾದವನ್ನು ಸೃಷ್ಟಿಸಿ ಅಂದೋಲನವನ್ನು ಆರಂಭಿಸಿತ್ತು. ಆದರೆ, ಬಿಜೆಪಿ ಎತ್ತಿದ ಯಾವ ವಿಷಯಗಳೂ ಚುನಾವಣೆಯಲ್ಲಿ ಫಲ ನೀಡಲಿಲ್ಲ. ವಿಪರ್ಯಾಸವೆಂದರೆ, ಬಿಜೆಪಿ ಸೃಷ್ಟಿಸಿದ ವಕ್ಸ್ ವಿವಾದ, ಇದೀಗ ಬಿಜೆಪಿಯ ಕೊರಳನ್ನೇ ಸುತ್ತಿಕೊಂಡಿದೆ. ವಕ್ಸ್ ವಿಚಾರದಲ್ಲಿ ಬಿಜೆಪಿ ಒಡೆದ ಮನೆಯಾಗಿದೆ. ಒಂದೆಡೆ ವಕ್ಸ್ ವಿಚಾರವನ್ನು ಮುಂದಿಟ್ಟು ಯಡಿಯೂರಪ್ಪ ನೇತೃತ್ವದ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವಾಗಲೇ, ಇತ್ತ ಯತ್ನಾಳ್ ನೇತೃತ್ವದಲ್ಲಿ ಪರ್ಯಾಯ ಹೋರಾಟವೊಂದು ಆರಂಭವಾಗಿದೆ. ಈ ಮೂಲಕ ರಾಜ್ಯದಲ್ಲಿ ಎರಡು ಬಿಜೆಪಿ ಸೃಷ್ಟಿಯಾಗಿದೆ. ಕಾರ್ಯಕರ್ತರು ಯಾವುದು ನಿಜವಾದ ಬಿಜೆಪಿ ಎನ್ನುವ ಗೊಂದಲದಲ್ಲಿದ್ದಾರೆ.

ಉಪಚುನಾವಣೆಯ ಫಲಿತಾಂಶದ ಬಳಿಕ ಬಿಜೆಪಿಯ ಒಂದು ಗುಂಪಿನ ವಕ್ಫ್ ವಿರೋಧಿ ಹೋರಾಟ, ನಿಧಾನಕ್ಕೆ ಯಡಿಯೂರಪ್ಪ ವಿರೋಧಿ ಹೋರಾಟವಾಗಿ ಪರಿವರ್ತನೆಯಾಗುತ್ತಿದೆ. ವಕ್ಫ್ ಅವರಿಗೆ ನೆಪ ಮಾತ್ರವಾಗಿದ್ದು, ಸದ್ಯಕ್ಕೆ ವಿಜಯೇಂದ್ರ ಅವರ ನಾಯಕತ್ವವನ್ನು ನಿರಾಕರಿಸುವುದು ಅವರ ಉದ್ದೇಶವಾಗಿದೆ. ಮುಡಾ ಹಗರಣವನ್ನು ಮುಂದಿಟ್ಟುಕೊಂಡು ಸಿದ್ದರಾಮಯ್ಯ ವಿರುದ್ಧ ಪಾದಯಾತ್ರೆ ಹಮ್ಮಿಕೊಂಡಾಗ ಅದಕ್ಕೆ ಯತ್ನಾಳ್ ನೇತೃತ್ವದ ಬಣ ಬಹಿರಂಗವಾಗಿಯೇ ಆಕ್ಷೇಪ ವ್ಯಕ್ತಪಡಿಸಿತ್ತು. ಇದಾದ ಬಳಿಕ ಉಪಚುನಾವಣೆಗೆ ಬಿರುಸಿನ ಪ್ರಚಾರ ನಡೆಯುತ್ತಿರುವಾಗಲೇ ಯತ್ನಾಳ್ ನೇತೃತ್ವದ ಗುಂಪು ವಕ್ಫ್ ವಿರುದ್ಧ ಪರ್ಯಾಯ ಪ್ರತಿಭಟನೆಯನ್ನು ನಡೆಸುವುದಾಗಿ ಎಚ್ಚರಿಕೆ ನೀಡಿತ್ತು. ಇದೀಗ ಈ ಪ್ರತಿಭಟನೆಯನ್ನು ನಿಲ್ಲಿಸಬೇಕು ಎಂದು ಯಡಿಯೂರಪ್ಪ ಅವರು ಕೇಂದ್ರ ವರಿಷ್ಠರಿಗೆ ಮನವಿ ಮಾಡಿದ್ದಾರೆ. ಬೀದರ್‌ನಿಂದ ಬೆಳಗಾವಿಯವರೆಗೆ ನಡೆಯುತ್ತಿರುವ ಜನಜಾಗೃತಿ ಹೋರಾಟಕ್ಕೆ ವರಿಷ್ಠರು ಹೇಗೆ ಸ್ಪಂದಿಸುತ್ತಾರೆ ಎನ್ನುವ ಆಧಾರದಲ್ಲಿ ರಾಜ್ಯದಲ್ಲಿ ಬಿಜೆಪಿಯ ಭವಿಷ್ಯ ನಿರ್ಧಾರವಾಗಲಿದೆ. ಒಂದು ವೇಳೆ, ಈ ಅಭಿಯಾನದ ವಿರುದ್ಧ ದಿಲ್ಲಿ ವರಿಷ್ಠರು ಮೌನ ಮುರಿಯದೇ ಇದ್ದರೆ, ಇದನ್ನು ಪರೋಕ್ಷವಾಗಿ ಬೆಂಬಲಿಸಿದಂತೆಯೇ ಸರಿ. ಅಷ್ಟೇ ಅಲ್ಲ, ಬಿಜೆಪಿಯ ರಾಜ್ಯಾಧ್ಯಕ್ಷರ ಮೇಲೆ ಯತ್ನಾಳ್ ಮಾಡಿರುವ ಎಲ್ಲಾ ಆರೋಪಗಳಿಗೂ ಸಮ್ಮತಿಯ ಮೊಹರು ಒತ್ತಿದಂತಾಗುತ್ತದೆ. ಒಂದು ವೇಳೆ ಈ ಅಭಿಯಾನವನ್ನು ತಡೆದರೆ ಯತ್ನಾಳ್ ಆಕ್ರೋಶಕ್ಕೆ ಇನ್ನಷ್ಟು ತುಪ್ಪ ಸುರಿದಂತಾಗುತ್ತದೆ. ಬಿಜೆಪಿ ಮತ್ತು ಸಂಘಪರಿವಾರದ ದ್ವೇಷ ರಾಜಕಾರಣವನ್ನು ಉತ್ತರ ಕರ್ನಾಟಕದಾದ್ಯಂತ ವಿಸ್ತರಿಸಲು ಯತ್ನಾಳಿನ ಅಗತ್ಯ ಬಿಜೆಪಿಗಿದೆ. ಅವರನ್ನು ಸುಲಭವಾಗಿ ಬಿಟ್ಟುಕೊಡುವ ಸ್ಥಿತಿಯಲ್ಲಿ ವರಿಷ್ಠರು ಇದ್ದಂತಿಲ್ಲ

> **ಚುನಾವಣೆಯಲ್ಲಿ ಎನ್‌ಡಿಎಯಿಂದ ಸ್ಪರ್ಧಿಸಿದ್ದ ಇಬ್ಬರು ಮಾಜಿ ಮುಖ್ಯಮಂತ್ರಿಗಳ ಸುಪುತ್ರರು ಸೋಲನುಭವಿಸಿರುವುದರಿಂದ, ಬಿಜೆಪಿ ತೀವ್ರ ಮುಜುಗರಕ್ಕೆ ಸಿಲುಕಿಕೊಂಡಿದೆ. ಚುನಾವಣೆಗೆ ಮುನ್ನ ಉಪಚುನಾವಣೆಯ ಫಲಿತಾಂಶವನ್ನು ಸಿದ್ದರಾಮಯ್ಯ ಅವರ ಸರಕಾರದ ವಿರುದ್ಧ ಹೊರ ಬೀಳಲಿರುವ ಜನಾದೇಶ ಎಂಬಂತೆ ಬಿಂಬಿಸಿದ್ದ ನಾಯಕರು, ಫಲಿತಾಂಶ ಹೊರ ಬಿದ್ದ ಬಳಿಕ 'ಇದೇನೂ ಜನಾದೇಶವಲ್ಲ ಎಂಬ ಹೇಳಿಕೆಯನ್ನು ನೀಡಿ, ಅಡಿಗೆ ಬಿದ್ದರೂ ಮೂಗು ಮಹಾಗಲಿಲ್ಲ ಎನ್ನುತ್ತಿದ್ದಾರೆ.**

ಕಾಂಗ್ರೆಸ್‌ನೊಳಗೆ ಸಿದ್ದರಾಮಯ್ಯ–ಡಿಕೆಶಿ ಬಣಗಳ ಬಗ್ಗೆ ಬಿಜೆಪಿ ನಾಯಕರು ಪದೇ ಪದೇ ಹೇಳಿಕೆಗಳನ್ನು ನೀಡುತ್ತಾ ಬಂದಿದ್ದಾರೆ. ಆರಂಭದಲ್ಲಿ ಲೋಕಸಭಾ ಚುನಾವಣೆಯ ಫಲಿತಾಂಶ ಹೊರಬಿದ್ದ ಬೆನ್ನಿಗೇ ಕಾಂಗ್ರೆಸ್‌ನಲ್ಲಿ ಬಿರುಕು ಕಾಣಿಸಿಕೊಳ್ಳುತ್ತದೆ ಎಂದು ಬಿಜೆಪಿ ನಾಯಕರು ಭವಿಷ್ಯ ನುಡಿದಿದ್ದರು. ಆದರೆ ಅಂತಹದು ಯಾವುದೂ ಸಂಭವಿಸಲಿಲ್ಲ. ಬದಲಿಗೆ, ಸಿದ್ದರಾಮಯ್ಯ ಮತ್ತು ಡಿಕೆಶಿ ಒಂದೇ ವೇದಿಕೆಯಲ್ಲಿ ಪದೇ ಪದೇ ಕಾಣಿಸಿಕೊಂಡರು ಮಾತ್ರವಲ್ಲ, ಪರಸ್ಪರರನ್ನು ಬೆಂಬಲಿಸಿ ಹೇಳಿಕೆಗಳನ್ನು ನೀಡತೊಡಗಿದರು. ಗ್ಯಾರಂಟಿ ಯೋಜನೆಯ ವಿರುದ್ಧ ಕಾಂಗ್ರೆಸ್ ನೊಳಗೆ ಅಪಸ್ವರ ಕೇಳಿ ಬಂದಾಗ, ವರಿಷ್ಠರು ತಕ್ಷಣವೇ ಮಧ್ಯ ಪ್ರವೇಶಿಸಿ ಸ್ಪಷ್ಟೀಕರಣ ನೀಡಿದರು. ಯಾರೂ ಅದರ ವಿರುದ್ಧ ಬಾಯಿ ತೆರೆಯದಂತೆ ಸೂಚನೆಗಳನ್ನು ನೀಡಿದರು. ಆದರೆ ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾದ ದಿನದಿಂದ, ಬಿಜೆಪಿಯೊಳಗೆ ಅವರ ವಿರುದ್ಧ ಮೂರನೆಯ ದರ್ಜೆಯ ಭಾಷೆಯಲ್ಲಿ ಯತ್ನಾಳ್ ಟೀಕೆಗಳನ್ನು ಮಾಡುತ್ತಾ ಬಂದಿದ್ದಾರೆ. ಆದರೆ ಈವರೆಗೆ ರಾಜ್ಯ ವರಿಷ್ಠರಾಗಲಿ, ದಿಲ್ಲಿಯ ವರಿಷ್ಠರಾಗಲಿ ಇದರ ವಿರುದ್ಧ ಯಾವುದೇ ಕ್ರಮವನ್ನು ತೆಗೆದುಕೊಂಡಿಲ್ಲ. ಉಪಚುನಾವಣೆ ನಡೆಯುತ್ತಿರುವ ಹೊತ್ತಿನಲ್ಲಿ ರಾಜ್ಯಾಧ್ಯಕ್ಷರ ವಿರುದ್ಧವೇ ಹಿರಿಯ ನಾಯಕರು ಹೇಳಿಕೆಗಳನ್ನು ನೀಡಿದರೆ ಅದು ಚುನಾವಣೆಯ ಮೇಲೆ ವ್ಯತಿರಿಕ್ತ ಪರಿಣಾಮಗಳನ್ನು ಬೀರುವುದು ಸಹಜವೇ ಆಗಿದೆ. ಮೂರು ಕ್ಷೇತ್ರಗಳಲ್ಲಿ ಹೀನಾಯ ಸೋಲಿಗೆ ಈ ಭಿನ್ನಮತದ ಕೊಡುಗೆಯೂ ಸಾಕಷ್ಟಿದೆ. ಉಪಚುನಾವಣೆ ಮುಗಿದ ಬೆನ್ನಿಗೇ ವರಿಷ್ಠರು ಯತ್ನಾಳ್ ವಿರುದ್ಧ ಕ್ರಮ ತೆಗೆದುಕೊಳ್ಳಬೇಕಾಗಿತ್ತು. ಯಡಿಯೂರಪ್ಪ ಅವರು ಪದೇ ಪದೇ ಇದನ್ನು ವರಿಷ್ಠರ ಗಮನಕ್ಕೆ ತಂದರೂ ಅವರು ಯಾವುದೇ ನಿರ್ಧಾರವನ್ನು ತೆಗೆದುಕೊಳ್ಳುತ್ತಿಲ್ಲ ಎನ್ನುವುದರ ಅರ್ಥವೇ. ಈ ಭಿನ್ನಮತದ ಹಿಂದೆ ದಿಲ್ಲಿಯ ಕೈವಾಡವಿದೆ ಎಂದಾಗಿದೆ. ಯಡಿಯೂರಪ್ಪ ಅವರನ್ನು ಮೂಲೆಗುಂಪು ಮಾಡುವ ಸಕಲ ಪ್ರಯತ್ನಗಳು ವಿಫಲವಾದ ಬಳಿಕ, ಅವರ ಕೈಗೆ ಮತ್ತೆ ಬಿಜೆಪಿಯ ಚುಕ್ಕಾಣಿಯನ್ನು ಒಲ್ಲದ ಮನಸ್ಸಿನಿಂದ ನೀಡಲಾಯಿತು. ಮಗನನ್ನು ರಾಜ್ಯಾಧ್ಯಕ್ಷನಾಗಿಸುವ ಮೂಲಕ ಪಕ್ಷದಲ್ಲಿ ತನ್ನ ಹಿಡಿತವನ್ನು ಅವರು ಮರುಸ್ಥಾಪಿಸಿದರು. ಹಲವು ಹಿರಿಯ ನಾಯಕರು ಬಿಜೆಪಿಯೊಳಗಿದ್ದೂ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ಮಾಡಿರುವುದು ಸಹಜವಾಗಿಯೇ ಬಹುತೇಕರನ್ನು ಕೆರಳಿಸಿದೆ. ರಾಜ್ಯ ಬಿಜೆಪಿಯನ್ನು ತನ್ನ ತೆಕ್ಕೆಗೆ ತೆಗೆದು ಕೊಳ್ಳಲು ವಿಫಲ ಪ್ರಯತ್ನ ನಡೆಸಿದ 'ಕೇಶವ ಕೃಪದ ಮಂದಿಗಂತೂ ಇದು ಹತಾಶೆಯನ್ನುಂಟು ಮಾಡಿತ್ತು. ಅದುದರಿಂದಲೇ, ಯಡಿಯೂರಪ್ಪ ವಿರುದ್ಧ ಕೆಲವು ಶೂದ್ರ ನಾಯಕರಿಂದ ಪದೇ ಪದೇ ಹೇಳಿಕೆಯನ್ನು ನೀಡಿಸುತ್ತಾ ಬಂತು. ಯಡಿಯೂರಪ್ಪ ವಿರುದ್ಧ ಯತ್ನಾಳ್ ಗುಂಪು ನಡೆಸುತ್ತಿರುವ ಎಲ್ಲಾ ಹುನ್ನಾರಗಳು ಆರೆಸ್ಸೆಸ್ ಮುಖಂಡರಿಗೆ ಪೂರಕವಾಗಿದೆ. ಪ್ರಹ್ಲಾದ್ ಜೋಶಿಯೂ ಸೇರಿದಂತೆ ಹಲವು ನಾಯಕರು ಯತ್ನಾಳ್ ಗುಂಪಿನ ವಿರುದ್ಧ ಕ್ರಮ ತೆಗೆದುಕೊಳ್ಳಲು ತಡೆಯಾಗಿ ನಿಂತಿದ್ದಾರೆ.

# ಪಿಂಚಣಿ, ತುಟ್ಟಿ ಭತ್ಯೆ ಹೆಚ್ಚಳದಲ್ಲಿ ಮಹತ್ವದ ಬದಲಾವಣೆ

## 8ನೇ ವೇತನ ಆಯೋಗದ ಮೇಲೆ ಸರ್ಕಾರಿ ನೌಕರರಿಗೆ ಯಾಕಿಷ್ಟು ನಿರೀಕ್ಷೆಗಳಿವೆ, ಕಾರಣಗಳು ವೇತನ– ಭತ್ಯೆ ಅಪ್ಡೇಟ್ಸ್

• ಉದಯವಾಹಿನಿ, ಬೆಂಗಳೂರು

8ನೇ ವೇತನ ಆಯೋಗದ ಮೇಲೆ ಕೇಂದ್ರ ಸರ್ಕಾರಿ ನೌಕರರು ಅಪಾರ ನಿರೀಕ್ಷೆಗಳೂ ಇಟ್ಟುಕೊಂಡು ಕೂತಿದ್ದಾರೆ. ಕೇಂದ್ರ ಬಜೆಟ್ ಮಂಡನೆಗೆ ಎರಡು ತಿಂಗಳು ಮಾತ್ರವೇ ಬಾಕಿ ಉಳಿದಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದಿಂದ ಎಂಟನೇ ವೇತನ ಆಯೋಗ ಘೋಷಣೆಗೆ ಕಾತರದಿಂದ ಕಾಯುತ್ತಿದ್ದಾರೆ.

ಇದು ಜಾರಿ ಆದರೆ ಸರ್ಕಾರಿ ನೌಕರರ ವೇತನದಲ್ಲಿ, ಪಿಂಚಣಿ ಮತ್ತು ತುಟ್ಟಿ ಭತ್ಯೆ ಹೆಚ್ಚಳದಲ್ಲಿ ಮಹತ್ವದ ಬದಲಾವಣೆಗಳು ಆಗಲಿವೆ. ಇದಕ್ಕೆ ಸಂಬಂಧಿಸಿದಂತೆ ಕೇಂದ್ರ ಬಜೆಟ್ ಮಂಡನೆ 2025 ಹೊತ್ತಿಗೆ ಶಿಫಾರಸು ಪರಿಗಣಿಸುವ ನಿರೀಕ್ಷೆಗಳು ದಟ್ಟವಾಗಿದೆ. ಕೇಂದ್ರ ಬಜೆಟ್‌ನಲ್ಲಿ 8ನೇ ವೇತನ ಆಯೋಗ ಜಾರಿ ಘೋಷಣೆ ಆದಲ್ಲಿ ಮುಂದಿನ ವರ್ಷದಿಂದಲೇ ಮಹತ್ವದ ಬದಲಾವಣೆಗಳು ಆಗಲಿವೆ.

ಸರ್ಕಾರ ಕೈಗೊಳ್ಳಲಿರುವ ನಿರ್ಧಾರದ ಮೇಲೆ ಒಂದು ಕೋಟಿಗೂ ಹೆಚ್ಚು ಸರ್ಕಾರಿ ನೌಕರರು, ಪಿಂಚಣಿದಾರರು ಮತ್ತವರ ಕುಟುಂಬ ಸದಸ್ಯರ ಆರ್ಥಿಕ ಸುಧಾರಣೆ ಅಡಗಿದೆ. ಈ ಕಾರಣದಿಂದ ನೌಕರರು ಎಂಟನೇ ವೇತನ ಆಯೋಗದ ಅಪ್ಡೇಟ್‌ಗಾಗಿ ಬಕಪಕ್ಷಿಗಳಂತೆ ಕಾಯುತ್ತಿದ್ದಾರೆ.



ಉದಯವಾಹಿನಿ ಚಿತ್ರ

> **8ನೇ ವೇತನ ಆಯೋಗ ಜಾರಿಯಾದರೆ ವೇತನ ಹಾಗೂ ಪಿಂಚಣಿಯಲ್ಲಿನ ಬದಲಾವಣೆಗಳ ಜೊತೆಗೆ ತುಟ್ಟಿ ಭತ್ಯೆ (ಡಿಎ) ಹಾಗೂ ಇತರ ಆರ್ಥಿಕ ಸೌಲಭ್ಯಗಳು ಪರಿಷ್ಕರಣೆಗೊಳ್ಳುವ ನಿರೀಕ್ಷೆ ಇದೆ. ನೌಕರರಿಗೆ ಹಣದುಬ್ಬರ ಎದುರಿಸಲು ತುಟ್ಟಿಭತ್ಯೆ ಪರಿಣಾಮಕಾರಿ ಅಂಶವಾಗಿದೆ. ಡಿಎ ಪ್ರತಿ ಆರು ತಿಂಗಳಿಗೊಮ್ಮೆಯಂತೆ ವರ್ಷಕ್ಕೆ ಎರಡು ಭಾರಿ ಹೆಚ್ಚಾಗಲಿದೆ.**

### ಹೀಗಾಗಿ ಎಂಟನೇ ವೇತನ ಆಯೋಗದ ಜಾರಿ


**ಕುರಿತು ಕೇಂದ್ರ ಸರ್ಕಾರ ಅಪೇಟ್ ನೀಡದಿದ್ದರೂ ನೌಕರರು ಕಾಯುತ್ತಿದ್ದಾರೆ. ಇದಕ್ಕೆ ಇನ್ನೊಂದು ಮುಖ್ಯ ಕಾರಣವೇನೆಂದರೆ ಪ್ರತಿ ಹತ್ತು ವರ್ಷಕ್ಕೊಮ್ಮೆ ಹೊಸ ಆಯೋಗ ಜಾರಿ ಆಗುತ್ತಿದೆ. ಹಾಲಿ 7ನೇ ವೇತನ ಆಯೋಗ ಕೊನೆಗೊಳ್ಳಲು ಒಂದು ವರ್ಷ ಬಾಕಿ ಇದೆ. 2026ರಂದು ಕೊನೆಗೊಳ್ಳುವ ಮೊದಲು 8ನೇ ವೇತನ ಆಯೋಗ ಪ್ರಕ್ರಿಯೆಗಳೂ ಸುಮಾರು ಒಂದೂವರೆ ವರ್ಷದಿಂದಲೇ ಆರಂಭವಾಗಬೇಕಿರುತ್ತದೆ. ಹೀಗಾಗಿ ನೌಕರರ ಚಿತ್ರ ಎಂಟನೇ ವೇತನ ಆಯೋಗದ ಜಾರಿಯ ಮೇಲಿದೆ.**

8ನೇ ವೇತನ ಆಯೋಗದಡಿ ಮೂಲ ವೇತನ ಹೆಚ್ಚಿಸಲು ಫಿಟ್‌ಮೆಟ್ ಅಂಶವನ್ನು ಗಮನಿಸುವ ಸರ್ಕಾರದ ಮುಂದೆ ಈ ಬಾರಿ 2.86ರ ಪಿಂಟ್ ಮೆಂಟ್ ಅಂಶ ಪರಿಗಣಿಸಲು ಪ್ರಸ್ತಾಪಿಸಲಾಗಿದೆ. ಈ ಬಗ್ಗೆ ಜಂಟಿ ಸಲಹಾ ಯಂತ್ರೋಪಕರಣಗಳ ರಾಷ್ಟ್ರೀಯ ಮಂಡಳಿ (ಓಅ–ಎಅಒ) ಶಿಫಾರಸು ಮಾಡಿದೆ. ಈ ಶಿಫಾರಸು ಸ್ವೀಕರಿಸಿದರೆ ಫಿಟ್ ಮೆಂಟ್ ಅಂಶ 2.86ಕ್ಕೆ ಏರಿಕೆ ಆಗಲಿದೆ. ಅದರಿಂದ ವೇತನ, ತುಟ್ಟಿಭತ್ಯೆ, ಇನ್ನಿತರ ಭತ್ಯೆ, ಸೌಲಭ್ಯಗಳು ಏರಿಕೆ ಆಗುವ ಸಾಧ್ಯತೆಗಳು ಇವೆ.

ನೌಕರರ ವೇತನ, ಪಿಂಚಣಿ ಹೆಚ್ಚಳಕ್ಕೆ ಮಾನದಂಡವಾಗಿರುವ ಈ ಪಿಟ್‌ಮೆಂಟ್ ಅಂಶವು 7ನೇ ವೇತನ ಆಯೋಗದಡಿ ಭತ್ಯೆ, ವೇತನ ಹೆಚ್ಚಿಸುವಾಗ 2.57ರಷ್ಟು ಪರಿಗಣಿಸಲಾಗಿತ್ತು. ಇದರಿಂದಾಗಿ ಕನಿಷ್ಠ ಮೂಲ ವೇತನ ರೂ.7,000 ರಿಂದ ರೂ 18,000 ವರೆಗೆ ಏರಿಕೆ ಕಂಡಿತ್ತು. ಹೀಗಾಗಿ ಮುಂದಿನ ವರ್ಷ 2. 86 ಫಿಟ್‌ಮೆಂಟ್ ಅಂಶ ಪರಿಗಣಿಸಿ ಹೆಚ್ಚಳಕ್ಕೆ ಸರ್ಕಾರಿ ನೌಕರರು ಬೇಡಿಕೆ ಇಟ್ಟಿದ್ದಾರೆ. ಇದು ಸಾಧ್ಯವಾದಲ್ಲಿ ಕನಿಷ್ಠ ಮೂಲ ವೇತನ 18,000 ರೂ.ದಿಂದ 51,480ಕ್ಕೆ ಹೆಚ್ಚಾಗಲಿದೆ.

# ಐಟಿ ಕೇಂದ್ರ ಸುತ್ತಮುತ್ತ ಬಾಡಿಗೆ ಮನೆಗಳಿಗೆ ಹೆಚ್ಚಾಯ್ತು ಡಿಮ್ಯಾಂಡ್, ಅಂಕಿ ಸಂಖ್ಯೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಸಿಲಿಕಾನ್ ಸಿಟಿ, ಐಟಿ ಕೇಂದ್ರವಾಗಿರುವ ಪ್ರತಿಷ್ಠಿತ ಬೆಂಗಳೂರಿನಲ್ಲಿ ಇಂದಿಗೂ ಸಹ ಹಲವು ಪ್ರದೇಶಗಳಲ್ಲಿ ಮನೆ ಬಾಡಿಗೆ ದರ ಗಗನಕ್ಕೇರುತ್ತಿದೆ. ಐಟಿ ಕೇಂದ್ರ, ಉದ್ಯೋಗ ಪ್ರದೇಶ, ಮೆಟ್ರೋ ಕಾರಿಡಾರ್ ಬಿಟ್ಟು ಉಳಿದೆಲ್ಲಡೆ ಮನೆ ಬಾಡಿಗೆ ಮಾಸಿಕ ಬೆಲೆ ಸ್ಥಿರವಾಗಿದೆ. ಆದರೆ ಬನಶಂಕರಿ, ಕೆ.ಆರ್,ಪುರಂ, ರಾಮಮೂರ್ತಿ ನಗರ ಸೇರಿದಂತೆ ವಿವಿಧ ಕಡೆಗಳಲ್ಲಿ ಶೇಕಡಾ 20ರಷ್ಟು ಮನೆ ಬಾಡಿಗೆ ಹೆಚ್ಚಳಗೊಂಡಿದೆ.

> **ವಿವಿಧ ಕಡೆಗಳಲ್ಲಿ ಶೇಕಡಾ 20ರಷ್ಟು ಮನೆ ಬಾಡಿಗೆ ಹೆಚ್ಚಳ**

ನೀವು ಈ ಪ್ರದೇಶಗಳಲ್ಲಿ ಮನೆ ಹುಡುಕುತ್ತಿದ್ದರೆ ನಿಮಗೆ ಈ ಲೇಖನ ಉಪಯೋಗಕ್ಕೆ ಬರ ಬಹುದು. ಬೆಂಗಳೂರಿನ ಐಟಿ ಕಂಪನಿಗಳು ಫುಲ್ ಟೈಮ್ ಕಚೇರಿ, ಹೈಬ್ರಿಡ್ ಮಾದರಿಯಲ್ಲಿ ಕೆಲಸ ನಡೆಸುತ್ತಿವೆ. ಹಲವಾರು ಕಂಪನಿಗಳು ವರ್ಕ್ ಫಂ ಹೋಂಗೆ ವಿದಾಯ ಹೇಳಿವೆ. ಇದರಿಂದಾಗಿ ಉದ್ಯೋಗಿಗಳು ತಮ್ಮ ಕಚೇರಿ ಸಮೀಪವೇ, ಸಾರಿಗೆ ಸುವ್ಯವಸ್ಥೆ ಇರುವ ಕಡೆಗಳ ಮನೆಗಳನ್ನು ಹುಡುಕುತ್ತಿದ್ದಾರೆ. ಇದರಿಂದ ನಿರ್ದಿಷ್ಟ ಭಾಗದ ಪ್ರದೇಶಗಳಲ್ಲಿ ಬಾಡಿಗೆ ಮನೆಗಳಿಗೆ ಬೇಡಿಕೆ ಮುಂದುವರಿದಿದೆ. ನಮ್ಮ ಮೆಟ್ರೋ ಮಾರ್ಗಗಳ ಅಕ್ಕಪಕ್ಕ (ವಿಶೇಷವಾಗಿ ನೇರಳೆ ಮಾರ್ಗ). ವಾಣಿಜ್ಯ ಕೇಂದ್ರಗಳು, ಐಟಿ ಕಾರಿ ಡಾರ್ ಸಮೀಪದ ಬಡಾವಣೆಗಳಲ್ಲಿ ಬಾಡಿಗೆ ಮನೆಗಳಿಗೆ ಡಿಮ್ಯಾಂಡ್ ಹೆಚ್ಚಿದೆ. ಎಚ್‌ಎಸ್‌ಆರ್ ಬಡಾವಣೆ, ಮಹಾದೇವಪುರ, ಎಲೆಕ್ಟ್ರಾನಿಕ್ ಸಿಟಿ, ಕೆ.ಆರ್.ಪುರಂ, ವೈಟ್ ಫಿಲ್ಡ್ ಹೀಗೆ ಕಂಪನಿಗಳು, ಮೆಟ್ರೋ ಇರುವ ಕಡೆಗಳಲ್ಲಿ ಮನೆ ಬಾಡಿಗೆ ಶೇಕಡಾ 20ರಷ್ಟು ಹೆಚ್ಚಾಗಿದೆ. ಉಳಿದ ಪ್ರದೇಶಗಳಲ್ಲಿ ಹಿಂದಿನಂತೆ ಬಾಡಿಗೆ ದರ ಸ್ಥಿರವಾಗಿದೆ. ಅಲ್ಲದೇ, ಮೆಟ್ರೋ, ಐಟಿ ಕಂಪನಿಗಳು ಇರುವ ಕಡೆಗೆ ಮೂಲ ಸೌಕರ್ಯಗಳು ಸುಧಾರಣೆಗೊಳ್ಳುತ್ತಿವೆ. ಸಾರಿಗೆ ತಡರಹಿ ಸೇವೆ ಲಭ್ಯವಿದೆ. ಇಂತಹ ಪ್ರದೇಶಗಳಲ್ಲಿ (ಬನಶಂಕರಿ) 2ಭುಇ ಫ್ಲ್ಯಾಟ್ ಮಾಸಿಕ ಬಾಡಿಗೆ ಬೆಲೆ 30,000 ರೂಪಾಯಿ ಇದೆ. ಇನ್ನೂ ಐಟಿ ಕೇಂದ್ರಗಳ ಹತ್ತಿರ ಇಂತದೇ ಫ್ಲಾಟ್, ಮನೆಗಳಿಗೆ 40,000 ರೂಪಾಯಿ ಇದೆ.

> **ಇಲ್ಲೆಲ್ಲ ಮನೆ ವಿಚಾರದಲ್ಲಿ ಹಣದುಬ್ಬರದ ವಾತಾವರಣ ಇದೆ. ಡಿಮ್ಯಾಂಡ್‌ಗೆ ತಕ್ಕಂತೆ ಹೊಸ ಮನೆಗಳೂ ನಿರ್ಮಾಣಗೊಳ್ಳುತ್ತಿವೆ. ಹೀಗಾಗಿ ಈ ಭಾಗದಲ್ಲಿ ಐಟಿ ನೌಕರರು ಹಾಗೂ ಅವರ ಹೊರತಾಗಿ ಬೇರೆ ಕಾರ್ಮಿಕ ವರ್ಗದವರು ಬಾಡಿಗೆ ಮನೆ ಮಾಡುವ ಮುನ್ನ ಆಲೋಚಿಸಬೇಕಿದೆ.**

## ಸಾಮಾಜಿಕ ಕಳಕಳಿ



ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ


• ಉದಯವಾಹಿನಿ, ವಿಶೇಷ

ನಗುತಿರಲು ಎಲ್ಲಾರೂ ಮನದಲ್ಲಿ
ಸಂತೋಷ
ಜಗದಲ್ಲಿ ಕಷ್ಟಗಳು ಸುಖಗಳಷ್ಟೇ
ಮುಗಿಲೆಳೆಗೆ ಭಾವವು ಅರೆಕ್ಷಣವು
ಭಾವಿಸಿರೆ
ಮಗನಾಗಿ ಬಾಳುತಲಿ ಲಕ್ಷ್ಮಿದೇವಿ....

**ಭಾವಾರ್ಥ** : ಯಾವುದೇ ಸಂದರ್ಭದಲ್ಲಿ ಮೇಲು ಕೀಳು ಎಂಬುದನ್ನು ಯಾರಿಗೂ ತೋರದಂತೆ ವರ್ತಿಸಬೇಕು.

### ದಿನಕ್ಕೊಂದು ಮುಕ್ತಕ –36

ಎಲ್ಲೆಡೆಯೂ ನಗುನಗುತ್ತ ಇರಬೇಕು. ಎಂತಹ ಸಮಸ್ಯೆಗಳು ಬಂದರೂ ಸಹ ಮನಸ್ಸಿಗೆ ಸಂತೋಷವಾಗುವಂತೆ



ವರ್ತಿಸಬೇಕು. ಜಗವೆಂದ ಮೇಲೆ ಜೀವನವೆಂದ ಮೇಲೆ ಕಷ್ಟ ಸುಖಗಳು ಒಂದೇ ನಾಣ್ಯದ ಎರಡು ಮುಖಗಳು. ಕೆಲಸಗಳನ್ನು ಮಾಡುವಾಗ ಯಾವುದೇ ಕೆಲಸವಾಗಲಿ, ಒಳ್ಳೆಯ ರೀತಿ ಮಾಡಬೇಕು. ಇತರರಿಗೆ ಕೆಡುಕನ್ನುಂಟು ಮಾಡುವಂತೆ ಮಾಡ ಬಾರದು.

ಮುಗಿಲೆತ್ತರಕ್ಕೆ ಏರುವ ರೀತಿಯಲ್ಲಿ ಭಾವನೆಗಳನ್ನು ಬೆಳೆಸಿಕೊಂಡಿರುತ್ತಾನೆ. ಆಗ ಆತ ಒಳ್ಳೆಯ ಮಗನಾಗಿ ಬಾಳುತ್ತಾನೆ. ಆತನ ಕೀರ್ತಿಯು ಬಹಳಷ್ಟು ಎತ್ತರಕ್ಕೆ ಬೆಳೆಯುತ್ತದೆ.

# ಕರ್ನಾಟಕದಲ್ಲಿ ಡಿ. 4ರ ತನಕ ಭರ್ಜರಿ ಮಳೆ ನಿರೀಕ್ಷೆ: IMD ಮುನ್ಸೂಚನೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಇನ್ನೇನು ಮಳೆ ಕಡಿಮೆ ಆಯಿತು, ಚಳಿ ಹೆಚ್ಚಾಗುತ್ತಿದೆ ಎನ್ನುವಷ್ಟರದಲ್ಲಿ ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರು ಕೇಂದ್ರವು ಮಹತ್ವದ ಮುನ್ಸೂಚನೆ ನೀಡಿದೆ. ಮರೆಯಾಗಿದ್ದ ಮಳೆ ಧಾರಾಕಾರವಾಗಿ ಸುರಿಯಲು ಸಜ್ಜಾಗಿದೆ.

ಸಮುದ್ರ ಮಟ್ಟದಲ್ಲಿ ಸೃಷ್ಟಿಯಾಗಿರುವ ವಾಯುಭಾರ ಕುಸಿತದಿಂದಾಗಿ ಮುಂದಿನ ಕೆಲವು ದಿವಸಗಳ ಕಾಲ ರಾಜ್ಯದಲ್ಲಿ ಭಾರೀ ಮಳೆ ಎಚ್ಚರಿಕೆ ಇದೆ ಎಂದು ತಿಳಿಸಿದೆ. ಹವಾಮಾನ ಇಲಾಖೆ ವರದಿ ಪ್ರಕಾರ, ನೈರುತ್ಯ ಬಂಗಾಳ ಕೊಲ್ಲಿಯಲ್ಲಿನ ವಾಯುಭಾರ ಕುಸಿತ ಸೃಷ್ಟಿಯಾಗಿದೆ. ಅದು ಮಂಗಳವಾರ ಬೆಳಗ್ಗೆ ಹೊತ್ತಿಗೆ ತೀವ್ರ ಸ್ವರೂಪ ಪಡೆದುಕೊಂಡಿದೆ. ಬೆಳಗ್ಗೆಯ 6 ಗಂಟೆಗಳಲ್ಲಿ ಪ್ರತಿ ಗಂಟೆಗೆ 12 ಕಿಮೀ ವೇಗದಲ್ಲಿ ಕೇಂದ್ರ ಸ್ಥಾನದಿಂದ ವಾಯುವ್ಯ ದಿಕ್ಕಿನತ್ತ ಚಲಿಸಿದೆ. ವಿಶೇಷವೆಂದರೆ ಈ ವಾಯುಭಾರ ಕುಸಿತ ಚಲಿಸುವಾಗಲೇ ತೀವ್ರಗೊಂಡಿದೆ ಎಂದು ಬೆಂಗಳೂರು ಹವಾಮಾನ ಕೇಂದ್ರದ ಮುಖ್ಯಸ್ಥರು ಮತ್ತು ವಿಜ್ಞಾನಿ ಡಾ.ಎನ್.ಪುವಿಯರಸನ್ ಮಾಹಿತಿ ನೀಡಿದ್ದಾರೆ.



ಉದಯವಾಹಿನಿ ಚಿತ್ರ

> **ಬೆಂಗಳೂರು ಕೇಂದ್ರವು ಮಹತ್ವದ ಮುನ್ಸೂಚನೆ**

ಇಂದಿನಿಂದ ಮುಂದಿನ 24 ಗಂಟೆಯಲ್ಲಿ ಮತ್ತಷ್ಟು ತೀವ್ರಗೊಳ್ಳಲಿರುವ ಈ ವಾಯುಭಾರ ಕುಸಿತವು ನವೆಂಬರ್ 27 ರಂದು ಸಂಜೆ ಹೊತ್ತಿಗೆ ಸ್ಪಷ್ಟ ಚಂಡಮಾರುತ ಪರಿಚಲನೆ ಆಗಿ ಬದಲಾಗಲಿದೆ.


ಆಗ ಗಾಳಿಯ ವೇಗವು ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ.

ಒಟ್ಟಾರೆ ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಹವಾಮಾನ ವೈಪರಿತ್ಯಗಳ ಪ್ರಭಾವದಿಂದಾಗಿ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಡಿಸೆಂಬರ್ 4ರವರೆಗೆ ಭರ್ಜರಿ ಮಳೆ ಆಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹಾಗಾದರೆ ಯಾವ ಜಿಲ್ಲೆಗಳಿಗೆ ಮಳ ಬರಲಿದೆ ಎಂಬ ಮಾಹಿತಿ ಇಲ್ಲಿದೆ.

### ಗರಿಷ್ಠ 28 ಮತ್ತು ಕನಿಷ್ಟ 19 ಡಿಗ್ರಿ ಸೆಲ್ಸಿಯಸ್ ದಾಖಲೆ

**ಮುಂದಿನ 24 ಗಂಟೆಗಳ ಕಾಲ ರಾಜ್ಯದಲ್ಲಿ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಕೆಲವು ಪ್ರದೇಶಗಳಲ್ಲಿ ಮಬ್ಬು ವಾತಾವರಣ ಕಂಡು ಬಂದು ಚಳಿಯ ವಾತಾವರಣ ನಿರ್ಮಾಣವಾಗುವ ಸಾಧ್ಯತೆ ಇದೆ. ಮುಂದಿನ 48 ಗಂಟೆಗಳ ಕಾಲ ಅಂದರೆ ಮುಂದಿನ ಎರಡು ದಿನ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ ಜೊತೆಗೆ ಚಳಿ ಉಂಟಾಗಲಿದ್ದು, ತಾಪಮಾನ ಗರಿಷ್ಠ 28 ಮತ್ತು ಕನಿಷ್ಟ 19 ಡಿಗ್ರಿ ಸೆಲ್ಸಿಯಸ್ ದಾಖಲಾಗುವ ನಿರೀಕ್ಷೆ ಇದೆ.**

## ರಾಮಾಯಣ



### ಗಂಗಾಮಹತ್ಯ

• ಹಿಂದಿನ ಸಂಚಿಕೆಯಿಂದ 27 ನೆಯ ಅಧ್ಯಾಯ

ಪವಿತ್ರವಾದ ಗಂಗಾಜಲದಲ್ಲಿ ಸ್ನಾನವನ್ನು ಮಾಡಿ ಪಿತೃತರ್ಪಣಗಳನ್ನು ಕೊಟ್ಟು ಅಪರಿಮಿತವಾದ ಪುಣ್ಯಫಲಗಳನ್ನು ಅನುಭವಿಸು. ನಿನಗೆ ಅನೇಕ ಶ್ರೇಯಸ್ಸಾಗಲಿ ನಾನು ಸ್ವರ್ಗಲೋಕಕ್ಕೆ ಹೋಗುತ್ತೇನೆ. ನೀನು ನಿನ್ನ ಪಟ್ಟಣಕ್ಕೆ ಹೋಗು' ಎಂದು ಹೇಳಿ ಭಗೀರಥನನ್ನು ಕಳುಹಿಸಿ ತನ್ನ ಲೋಕಕ್ಕೆ ಬಿಜಯಂಗೈದನು.

ಬಳಿಕ ಭಗೀರಥನು ಗಂಗೆಯಲ್ಲಿ ಸ್ನಾನವನ್ನು ಮಾಡಿ ತನ್ನ ಪಿತೃಪಿತಾಮಹಪ್ರಪಿತಾಮಹಾದಿಗಳಿಗೆ ತರ್ಪಣಾದಿಗಳನ್ನು ಕೊಟ್ಟು ಶುಚಿಯಾಗಿ, ರಥಾರೂಢನಾಗಿ ತನ್ನ ಪಟ್ಟಣವನ್ನು ಪ್ರವೇಶಿಸಿ ಸಮಸ್ತವಸ್ತುಗಳಿಂದ ಸಂಪನ್ನನಾಗಿ ರಾಜ್ಯವನ್ನು ಪರಿಪಾಲಿಸುತ್ತಿದ್ದನು. ಆತನ ರಾಜ್ಯದಲ್ಲಿದ್ದ ಪ್ರಜೆಗಳು ವ್ಯಾಧಿ ಶೋಕಾದಿಗಳಿಲ್ಲದೆ ಧನಧಾನ್ಯ ಸಂಪನ್ನರಾಗಿ ಸುಖದಲ್ಲಿದ್ದರು ರಘುನಾಥ, ಗಂಗೆಯ ಮಹಿಮೆಯನ್ನು ವಿಸ್ತಾರವಾಗಿ ನಿನಗೆ ಹೇಳಿದೆನು. ನಿನಗೆ ಅನೇಕ ಶ್ರೇಯಸ್ಸಾಗಲಿ ಸಂಧ್ಯಾಕಾಲವಾಯಿತು. ಈ ಪುಣ್ಯಕಥೆಯು ಧನಧಾನ್ಯಗಳನ್ನೂ ಕೀರ್ತಿಯನ್ನೂ ಆಯುಷ್ಯವನ್ನೂ ಮಕ್ಕಳನ್ನೂ ಸ್ವರ್ಗಫಲವನ್ನೂ ಕೊಡುವಂಥದು. ಆದ್ದರಿಂದ ಯಾವ ಪುಣ್ಯಾತ್ಮನು ಬ್ರಾಹ್ಮಣರ ಸಭೆಯಲ್ಲಿಯೂ ಭಕ್ತರಾದ ಇತರ ಜನರ ಸಮೂಹಗಳಲ್ಲಿಯೂ ಈ ಪುಣ್ಯಕಥೆಯನ್ನು ಕೇಳಿಸುವನೋ ಆತನ ಪಿತೃಗಳು ತೃಪ್ತರಾಗುವರು ಸಮಸ್ತದೇವತೆಗಳೂ ಸಂತುಷ್ಟರಾಗುವರು. ಈ ಪುಣ್ಯಕಥೆಯನ್ನು ಯಾವನು ಏಕಾಗ್ರಚಿತ್ತದಲ್ಲಿ ಕೇಳುವನೋ ಆ ಪುಣ್ಯಾತ್ಮನು ಸಮಸ್ತ ಇಷ್ಟಾರ್ಥವನ್ನೂ ಪಡೆಯುವನು. ಅದರಿಂದ ಸಮಸ್ತಪಾಪಗಳೂ ಕ್ಷಯವಾಗುವುವು. ಆಯುಷ್ಯವೂ ಕೀರ್ತಿಯೂ ದಿನದಿನಕ್ಕೆ ಹೆಚ್ಚುವುವು ಎಂದು ವಿಶ್ವಾಮಿತ್ರಮುನೀಶ್ವರನು ನಿರೂಪಿಸಿದನು.

### ಸುರಾಸುರರು ಸಮುದ್ರ ಮಥನ ಮಾಡಿದುದು

ಆಮೇಲೆ ರಘುನಾಧನು ಲಕ್ಷ್ಮಣಸಮೇತನಾಗಿ ವಿಶ್ವಾಮಿತ್ರಮುನೀಶ್ವರನ ವಾಕ್ಯವನ್ನು ಕೇಳಿ ಹರ್ಷದಿಂದ ಆಶ್ಚರ್ಯಪಡುತ್ತ ವಿಶ್ವಾಮಿತ್ರಮುನಿಗಳೆ, ಗಂಗೆಯು ಸ್ವರ್ಗಲೋಕದಿಂದ ಬಂದ ವೃತ್ತಾಂತವನ್ನೂ ನಮುದ್ರವು ಪರಿಪೂರ್ಣವಾದ ವೃತ್ತಾಂತವನ್ನೂ ನಿಮ್ಮಿಂದ ಕೇಳಿದೆನು. ಈ ಕಥಾ ವೃತ್ತಾಂತವನ್ನು ಕೇಳಿ ಸಂತೋಷವಾಯಿತು ಎಂದು ಹೇಳಿದನು. ಅಷ್ಟರಲ್ಲಿಯೇ ಸಾಯಂಕಾಲ ವಾಗಲು ಲಕ್ಷ್ಮಣಸಮೇತನಾಗಿ ಗಂಗಾಮಹತ್ತ್ವವನ್ನು ಅನುಸಂಧಾನಮಾಡುತ್ತ, ಆ ರಾತ್ರಿಯನ್ನು ಕಳೆದನು ಪ್ರಾತಃಕಾಲದಲ್ಲಿದ್ದು ಸ್ನಾನ ಸಂಧ್ಯಾವಂದನೆಗಳನ್ನು ತೀರಿಸಿಕೊಂಡು ವಿಶ್ವಾಮಿತ್ರ ಮುನಿಯನ್ನು ಕುರಿತು ಸ್ವಾಮಿ, ನೀವು ಹೇಳಿದ ಕಥೆಯನ್ನು ಧ್ಯಾನಮಾಡುತ್ತಿದ್ದ ನನಗೆ ರಾತ್ರಿಯು ಒಂದು ಕ್ಷಣವಾಗಿ ಕಳೆಯಿತು.

ಮುಂದುವರಿಯುವುದು...

# ಶ್ರೀ ಮೈಸೂರು ವೇದಾಂತ ಶಿವರಾಮ ಶಾಸ್ತ್ರಿ ಗುರುಭಕ್ತರ ಸಮಾವೇಶ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬೆಂಗಳೂರಿನಲ್ಲಿ ಶ್ರೀ ಶ್ರೀ ಶ್ರೀ ಮೈಸೂರು ವೇದಾಂತ ಶಿವರಾಮ ಶಾಸ್ತ್ರಿ ಟ್ರಸ್ಟ್ ವತಿಯಿಂದ ಶ್ರೀ ಮೈಸೂರು ವೇದಾಂತ ಶಿವರಾಮ ಶಾಸ್ತ್ರಿ ಗುರುಭಕ್ತರ ಸಮಾವೇಶವನ್ನು ಅಯೋಜಿಸಲಾಗಿತ್ತು. ಟ್ರಸ್ಟಿನ ಪ್ರಧಾನ ಕಾರ್ಯದರ್ಶಿ ಶ್ರೀ ಚಂದ್ರಮೌಳೇಶ್ವರ ಎಂ. ರವರು ಪ್ರಾಸ್ತಾವಿಕ ನುಡಿಯಲ್ಲಿ ಟ್ರಸ್ಟಿನ ಧ್ಯೇಯೋದ್ದೇಶ ಮತ್ತು ಗುರಿಗಳನ್ನು ವಿವರಿಸಿದರು. ಅವರು, ಸನಾತನ ಸಂಸ್ಕೃತಿಯ ಉಳಿವು ಮತ್ತು ಬೆಳವಣಿಗೆಗಾಗಿ ಗುರುಗಳ ತತ್ವಗಳನ್ನು ಅನುಸರಿಸಿ, ಟ್ರಸ್ಟಿನ ಆಶ್ರಯದಲ್ಲಿ ಸರ್ವತೋಮುಖ ಅಭಿವೃದ್ಧಿಯತ್ತ ಪ್ರಯಾಣಿಸುವ ಮಹತ್ವವನ್ನು ಪ್ರತಿಪಾದಿಸಿದರು.

ಹೆಸರಾಂತ ಲೇಖಕ ಮತ್ತು ವಾಗಿ ಡಾ. ಬಾಬು ಕೃಷ್ಣಮೂರ್ತಿ ಅವರು ಪ್ರಮುಖ ಅತಿಥಿಗಳಾಗಿ ಆಗಮಿಸಿ, ಶಿವರಾಮ ಶಾಸ್ತ್ರಿಗಳ ವ್ಯಕ್ತಿತ್ವ ಅವರ ತತ್ವಚಿಂತನೆಗಳ ಮಹತ್ವವನ್ನು ವಿವರಿಸಿದರು. ಅವರು, ವರ್ಣ ವ್ಯವಸ್ಥೆ ಎಂದರೆ ಜಾತಿ ವ್ಯವಸ್ಥೆ ಅಲ್ಲ, ಅದು ಕೆಲಸದ ಆಧಾರದ ಮೇಲೆ ಮಾಡಿರುವ ವ್ಯವಸ್ಥೆ ಎಂದು ಸಮಜಾಯಿಷಿ ನೀಡಿದರು. ಜಾತಿ, ಮತ, ಮತ್ತು ಅಂತಸ್ತುಗಳ ಹೊರತಾಗಿ ಬದುಕು ಸಾಗಿಸಲು ಮತ್ತು ಜ್ಞಾನ ಸಂಪಾದನೆ ಮೂಲಕ ಜೀವನವನ್ನು ಸಾರ್ಥಕಗೊಳಿಸಿಕೊಳ್ಳಲು ಪ್ರೇರಣೆ ನೀಡಿದರು.

> **ಗುರುಗಳ ತತ್ವಗಳನ್ನು ನಿತ್ಯ ಜೀವನದಲ್ಲಿ ಅನುಷ್ಠಾನ**

ಶ್ರೀ ಎ.ಎಸ್.ಕೆ. ವಾಶಿಷ್ಠ ಅವರು, ಜ್ಞಾನವೇ ಮಾನವ ಜೀವನದ ಸಾರ್ಥಕತೆಯನ್ನು ತಂದುಕೊಡುತ್ತದೆ ಎಂಬ ವಿಷಯವನ್ನು ವಿವರಿಸಿದರು. ಅವರು, ರೈತಾಪಿ ವರ್ಗದವರಿಗೆ ವೇದಾಂತ ಜ್ಞಾನ ನೀಡಲು ಶಿವರಾಮ ಶಾಸ್ತ್ರಿಗಳ ಉಪಕ್ರಮಗಳನ್ನು ಮೆಚ್ಚಿ, ಅವರ ತತ್ವಗಳನ್ನು ಅಳವಡಿಸಿಕೊಂಡು ನಿಜವಾದ ಗೌರವ ತೋರುವ ಮಹತ್ವವನ್ನು ಹೇಳಿದರು. ಟ್ರಸ್ಟಿನ ಉದ್ದೇಶದಂತೆ, ಗುರುಗಳ ತತ್ವಗಳನ್ನು ನಿತ್ಯ ಜೀವನದಲ್ಲಿ ಅನುಷ್ಠಾನಗೊಳಿಸುತ್ತಿರುವ ವ್ಯಕ್ತಿಗಳನ್ನು ಗುರುತಿಸಿ ಸನ್ಮಾನಿಸಲಾಯಿತು. ಈ ಬಾರಿ, ಮಂಡ್ಯ ಜಿಲ್ಲೆಯ ನರಗಲು ಗ್ರಾಮದ ಶ್ರೀ ಸಿ. ರಮೇಶ್ ಮತ್ತು ತುಂಬಕೆರೆ ಗ್ರಾಮದ ಶ್ರೀಮತಿ ಬೋರಮ್ಮನವರಿಗೆ ಅಭಿನಂದನಾ ಪತ್ರ ನೀಡಿ ಸನ್ಮಾನಿಸಿ ಗೌರವಿಸಲಾಯಿತು. ಟ್ರಸ್ಟಿನ ಜಂಟಿ ಕಾರ್ಯದರ್ಶಿಗಳಾದ ಶ್ರೀ ರಾಮಚಂದ್ರ, ಖಜಾಂಚಿಗಳಾದ ಶ್ರೀ ಎಸ್.ಎನ್. ರಾಮು ಮತ್ತು ಮಂಜುನಾಥ್ ಎಂ.ಡಿ. ನಿರ್ದೇಶಕರಾದ ಶ್ರೀ ಎಲ್ಲೇಗೌಡ, ನವೀನ್ ಕುಮಾರ್ ಎನ್.ಡಿ. ಮತ್ತು ತಿರುಮಲ ಶೆಟ್ಟಿ ಇವರುಗಳ ಸಕ್ರಿಯ ತೊಡಗಿಸಿಕೊಳ್ಳುವಿಕೆಯಿಂದ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಿತು. ಹಾಗೂ ಟ್ರಸ್ಟ್‌ನ ಎಲ್ಲಾ ಸದಸ್ಯರ ಸಹಕಾರದಿಂದ ಸಮಾವೇಶವು ಸಾರ್ಥಕ ಹಾಗೂ ಪ್ರೇರಣಾದಾಯಕವಾಗಿತ್ತು.

> **ಟ್ರಸ್ಟಿನ ಅಧ್ಯಕ್ಷರು ಮತ್ತು ವೇದಾಂತ ಶಿವರಾಮ ಶಾಸ್ತ್ರಿಗಳ ಪ್ರಪೌತ್ರರಾದ ಶ್ರೀ ವೇದಾಂತ ಶೇಷಾದ್ರಿ ಶಾಸ್ತ್ರಿಗಳು, ಬದುಕು ದೇವರು ಕೊಟ್ಟ ವರದಾನ. ಜೀವಿತಾವಧಿಯಲ್ಲಿ ಸಾಧನೆ ಮಾಡಲು ಆಹಂಕರವನ್ನು ತ್ಯಜಿಸಬೇಕು ಮತ್ತು ಜ್ಞಾನೋದಯದ ಕಡೆಗೆ ಪ್ರಯತ್ನಿಸಬೇಕು ಎಂದು ತಿಳಿಸಿದರು. ಸಮಾವೇಶದಲ್ಲಿ, ವಿವಿಧ ನಗರಗಳಿಂದ ಆಗಮಿಸಿದ 750ಕ್ಕೂ ಹೆಚ್ಚು ಗುರುಭಕ್ತರು ವೇದಾಂತ ಶಿವರಾಮ ಶಾಸ್ತ್ರಿಗಳ ತತ್ವಪದಗಳನ್ನು ಹಾಡುವುದರ ಮೂಲಕ ಕಾರ್ಯಕ್ರಮಕ್ಕೆ ಮೆರಗು ನೀಡಿದರು.**

# ಜಾಲಿ ಜಾಲಿ.. ಫುಲ್ ಜಾಲಿ ಬೆಂಗಳೂರಲ್ಲಿ ಇನ್ನೇಲೆ ಪ್ರಾಬ್ಲಮ್ ಖಾಲಿ ಖಾಲಿ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸುವ ಉದ್ದೇಶದಿಂದ ಬಿಬಿಎಂಪಿಯು ಮಹತ್ವದ ಹಾಗೂ ಸ್ಮಾರ್ಟ್ ಮಾರ್ಗವೊಂದನ್ನು ಕಂಡುಕೊಂಡಿದೆ. ಬೆಂಗಳೂರಿನಲ್ಲಿ ಇತ್ತೀಚಿನ ದಿನಗಳಲ್ಲಿ ರಸ್ತೆಗುಂಡಿ, ಕಸ ಸ್ವಚ್ಛತೆ ಸೇರಿದಂತೆ ಹಲವು ವಿಷಯದಲ್ಲಿ ಸಮಸ್ಯೆ ಎದುರಾಗಿದೆ. ಇದೀಗ ಬಿಬಿಎಂಪಿಯು ಬೆಂಗಳೂರಿನಲ್ಲಿ ಜನರ ಸಮಸ್ಯೆಗಳನ್ನು ವಾರ್ಡ್‌ವಾರು ಪರಿಹರಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯನ್ನು ಇರಿಸಿದೆ. ಬೆಂಗಳೂರಲ್ಲಿ ಪಾಲಿಕೆಯ ಚುನಾವಣೆ ನಡೆದು 5 ವರ್ಷ ಸಮೀಪಿಸುತ್ತಿದೆ. ಪಾಲಿಕೆಯಲ್ಲಿ ಅಧಿಕಾರಿಗಳೇ ಆಡಳಿತ ನಡೆಸುತ್ತಿದ್ದಾರೆ. ಇದರಿಂದ ಜನರ ಸಮಸ್ಯೆಗಳು ಸಕಾಲದಲ್ಲಿ ಪರಿಹಾರವಾಗುತ್ತಿಲ್ಲ ಎನ್ನುವ ಆರೋಪ ಇದೆ. ಇದೀಗ ಬೆಂಗಳೂರಿನಲ್ಲಿ ಸಾರ್ವಜನಿಕರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ವಾರ್ಡ್‌ಗಳಿಗೆ ನೋಡಲ್ ಅಧಿಕಾರಿಗಳ ನಿಯೋಜನ ಮಾಡುವಂತೆ ಬಿಬಿಎಂಪಿಯ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಆದೇಶ ಹೊರಡಿಸಿದ್ದಾರೆ. ಬಿಬಿಎಂಪಿಯ ಎಲ್ಲಾ ವಾರ್ಡ್ ಗಳಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಬಗೆಹರಿಸುವ ಉದ್ದೇಶದಿಂದ ವಾರ್ಡ್‌ಗೆ ಒಬ್ಬ ಅಧಿಕಾರಿಯನ್ನು ನೋಡಲ್ ಅಧಿಕಾರಿಯಾಗಿ ನೇಮಿಸಿ, ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಸುತ್ತೋಲೆ ಹೊರಡಿಸಿದ್ದಾರೆ. ಬೆಂಗಳೂರಿನ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಬೇಕು, ಬೆಂಗಳೂರಿನಲ್ಲಿ ವಾರ್ಡ್‌ರು ಯಾವುದೇ ಸಮಸ್ಯೆಗಳು ಎದುರಾಗಬಾರದು ಎಂದು ಉಪ ಮುಖ್ಯಮಂತ್ರಿ , ಬೆಂಗಳೂರು ನಗರಾಭಿವೃದ್ಧಿ ಸಚಿವರ ಡಿಕೆಶಿ ಅವರು ಆರ್ಡರ್ ಮಾಡಿದ ಹಿನ್ನೆಲೆಯಲ್ಲಿ ಬಿಬಿಎಂಪಿ ಆಯುಕ್ತರು ಈ ಕ್ರಮ ತೆಗೆದುಕೊಂಡಿದ್ದಾರೆ. ಡಿಕೆಶಿ ಅವರ ಸೂಚನೆಯ ಮೇರೆಗೆ ಎಲ್ಲಾ ವಲಯಗಳಲ್ಲಿಯೂ ಪ್ರತಿ ವಾರ್ಡ್‌ಗೆ ಒಬ್ಬ ಅಧಿಕಾರಿಯನ್ನು ಮೇಲುಸ್ತುವಾರಿ ಮಾಡುವ ಉದ್ದೇಶದಿಂದ ನೋಡಲ್ ಅಧಿಕಾರಿಯನ್ನಾಗಿ ನೇಮಿಸಿರುವುದಾಗಿ ಬಿಬಿಎಂಪಿಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಇನ್ನು ಬಿಬಿಎಂಪಿಯಿಂದ ಈಗ ನೇಮಕ ಮಾಡಲಾಗಿರುವ ಅಧಿಕಾರಿಗಳು ಅವರಿಗೆ ನಿಯೋಜಿಸಿರುವ ವಾರ್ಡ್‌ಗಳಲ್ಲಿ ಕಡ್ಡಾಯವಾಗಿ ಪ್ರತಿ ಬೆಳಿಗ್ಗೆಯಿಂದ ಸಂಜೆಯವರೆಗೆ ಕಚೇರಿಯ ಅವಧಿಯಲ್ಲಿ ಹಾಜರಿರಬೇಕು ಎಂದು ಸೂಚನೆ ನೀಡಲಾಗಿದೆ. ಅಲ್ಲದೇ ಸಾರ್ವಜನಿಕ ರೊಂದಿಗೆ ಸಭೆಗಳನ್ನು ನಡೆಸಬೇಕು. ಸಾರ್ವಜನಿಕರ ದೂರು, ಸಮಸ್ಯೆಗಳನ್ನು ಕೇಳಬೇಕು. ಅಲ್ಲದೇ ಇನ್ನುಳಿದ ವಾರ್ಡ್ ಮಟ್ಟದ ಅಧಿಕಾರಿಗಳೊಂದಿಗೆ ಸೇರಿ ಆ ವಾರ್ಡ್‌ಲ್ಲಿ ಯಾವುದೇ ಸಮಸ್ಯೆ ಇದ್ದರೂ ಪರಿಹರಿಸಬೇಕು ಎಂದು ಸೂಚನೆ ನೀಡಲಾಗಿದೆ. ವಾರ್ಡ್ ಮಟ್ಟದಲ್ಲಿ ಬಗೆಹರಿಸಲಾಗದ ಸಮಸ್ಯೆಗಳನ್ನು ವಲಯ ಮಟ್ಟದಲ್ಲಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಮೇಲಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಬೇಕು.

> **ಇನ್ನು ಬೆಂಗಳೂರಿನಲ್ಲಿ ಎಲ್ಲಾ ವಾರ್ಡ್ ಗಳಲ್ಲಿಯೂ ಪ್ರತಿ ಬುಧವಾರ ನಡೆಯುವ ಸಾರ್ವಜನಿಕ ಸಭೆ ನಡೆಸುವ ಬಗ್ಗೆ ಆಯಾ ವಾರ್ಡ್ ಸಾರ್ವಜನಿಕರಿಗೆ ಅಗತ್ಯ ಮಾಹಿತಿ ನೀಡಬೇಕು. ಅಲ್ಲದೇ ಜಲಮಂಡಳಿ, ಬೆಸ್ಕಾಂ ಸೇರಿದಂತೆ ಇತರೆ ಇಲಾಖೆಗಳಿಗೆ ಸಂಬಂಧಿಸಿದ ಸಮಸ್ಯೆಗಳು ಇದ್ದರೆ, ಆಯಾ ಇಲಾಖೆಯ ಸಂಬಂಧಪಟ್ಟ ಅಧಿಕಾರಗಳೊಂದಿಗೆ ಸಮನ್ವಯ ಸಾಧಿಸಿ, ಸಮಸ್ಯೆಯನ್ನು ವಾರ್ಡ್ ಹಂತದಲ್ಲಿಯೇ ಪರಿಹರಿಸಲು ನೋಡಲ್ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಲಾಗಿದೆ.**



# ಬೌದ್ಧ ಬಿಕ್ಕುವಾಗಿ ಭಿಕ್ಷಾಟನೆ ಮಾಡುವ ಜೀವನ ಆಯ್ದುಕೊಂಡ ಸಿರಿಪಾನ್ಯೋ

## ತಂದೆಯ 40,000 ಕೋಟಿ ರೂ ಸಂಪತ್ತು ತ್ಯಜಿಸಿ ಸನ್ಯಾಸಿಯಾದ: ಉದ್ಯಮ ದಿಗ್ಗಜನ ಪುತ್ರನ ಕೌತುಕಮಯ ಜೀವನ



**ಮತ್ತಷ್ಟು ಸಂಪಾದಿಸುವ ಆಸೆ**

**ಕೌಲಾಲಂಪುರ:** ಹಣ ಎಂದರೆ ಹೆಣವೂ ಬಾಯಿ ಬಿಡುತ್ತದೆ ಎಂಬ ಮಾತಿದೆ. ಸಂಪತ್ತಿನ ಸಂಪಾದನೆಯೇ ಬಹುಪಾಲು ಜನರ ಜೀವನದ ಗುರಿ. ಹೆಚ್ಚಿನವರಿಗೆ ಅದು ಜೀವನದ ಹೋರಾಟವೂ ಹೌದು. ಇನ್ನು ಕೆಲವರಿಗೆ ಮುಟ್ಟಿದ್ದೆಲ್ಲ ಚಿನ್ನ. ಕೋಟಿಗಟ್ಟಲೆ ಸಂಪತ್ತು ಇದ್ದವರಿಗೆ ಮತ್ತಷ್ಟು ಸಂಪಾದಿಸುವ ಆಸೆ. ಇದಕ್ಕೆ ಮಿತಿ ಇಲ್ಲ. ಆದರೆ ಈ ಐಭೋಗ್ಯವೂ ಕೆಲವರಲ್ಲಿ ವೈರಾಗ್ಯ ಮೂಡಿಸಬಹುದು.

ಜೀವಮಾನವಿಡೀ ದುಡಿ ದಿದ್ದನ್ನು ದಾನ ಮಾಡಿದ ಮಹಾನುಭಾವರೂ ನಮ್ಮ ನಡುವೆ ಇದ್ದಾರೆ. ಇದು ಹಲವು ತಲೆಮಾರುಗಳಿಗೆ ಸಾಲುವಷ್ಟು ಸಂಪತ್ತು ಕೊಳೆಯುತ್ತಾ ಬಿದ್ದಿದ್ದರೂ, ಇದ್ಯಾವುದೂ ಬೇಡ ಎಂದು ಕಾವಿ ಧರಿಸಿದ ಯುವಕನ ಕಥೆ.

ಮಲೇಷ್ಯಾದ ಟೆಲಿಕಾಮ್ ಉದ್ಯಮದ ದಿಗ್ಗಜ ಆನಂದ್ ಕೃಷ್ಣನ್ ಅವರ ಮಗ ವೆನ್ ಅಜಾನ್ ಸಿರಿಪಾನ್ಯೋ, ಕೇವಲ 18ರ ಪ್ರಾಯದಲ್ಲಿಯೇ ತಮ್ಮ ಐಷಾರಾಮಿ ಹಾಗೂ ವೈಭೋಗದ ಜೀವನ ತ್ಯಜಿಸಿದವರು. ತಂದೆ ಸಂಪಾದಿಸಿದ ಸಂಪತ್ತು ತಮಗೆ ಬೇಡ ಎಂದು ಅವರು ಸನ್ಯಾಸತ್ವದ ದೀಕ್ಷೆ ಪಡೆದವರು.

ಎಕೆ ಎಂದೇ ಖ್ಯಾತರಾದ ಆನಂದ್ ಕೃಷ್ಣನ್, ಮಲೇಷ್ಯಾದ ಮೂರನೇ ಅತಿ ಸಿರಿವಂತ ವ್ಯಕ್ತಿ. ಅವರ ಒಟ್ಟಾರೆ ಸಂಪತ್ತಿನ ಮೌಲ್ಯ 40 ಸಾವಿರ ಕೋಟಿಗೂ ಅಧಿಕ ಎಂದು ಸೌತ್ ಚೀನಾ ಪೋಸ್ಟ್ ವರದಿ ತಿಳಿಸಿದೆ. ದೂರಸಂಪರ್ಕ ವಲಯದ ಪ್ರಮುಖ ಉದ್ಯಮಿಗಳಲ್ಲಿ ಆನಂದ್ ಕೃಷ್ಣನ್ ಒಬ್ಬರು. ದೂರಸಂವಹನ, ಉಪಗ್ರಹ, ಮಾಧ್ಯಮ, ತೈಲ, ಅನಿಲ ಮತ್ತು ರಿಯಲ್ ಎಸ್ಟೇಟ್ ಕ್ಷೇತ್ರಗಳುದ್ದಕ್ಕೂ ಅವರ ಉದ್ಯಮ ಸಾಮ್ರಾಜ್ಯ ಆವರಿಸಿದೆ. ಈ ಹಿಂದೆ ದೂರಸಂಪರ್ಕ ಕ್ಷೇತ್ರದಲ್ಲಿ ಸಂಚಲನ ಮೂಡಿಸಿ, ಬಳಿಕ ಪೈಪೋಟಿಯಲ್ಲಿ ನಿಲ್ಲಲು ಸಾಧ್ಯವಾಗದೆ ಮರೆಯಾದ ಏರ್‌ಸೆಲ್ ಮೊಬೈಲ್ ಸೇವೆ ಆನಂದ್ ಕೃಷ್ಣನ್ ಅವರ ಕೂಸು. ಒಂದು ಕಾಲದಲ್ಲಿ ಈ ಕಂಪೆನಿ ಚೆನ್ನೈ ಸೂಪರ್ ಕಿಂಗ್ಸ್ ಕ್ರಿಕೆಟ್ ತಂಡದ ಪ್ರಾಯೋಜಕತ್ವ ವಹಿಸಿಕೊಂಡಿತ್ತು.

**ತಾಯಿ ರಾಜಮನೆತನ ಮೂಲದವರು:** ತಂದೆ ಪ್ರಖ್ಯಾತ ಉದ್ಯಮಿಯಾದರೆ, ತಾಯಿ ಸುಪ್ರಿಂದಾ ಚಕ್ರಬನ್ ಥಾಯಿ ರಾಜಮನೆತನದ ಮೂಲದವರು. ಆನಂದ್ ಕೃಷ್ಣನ್ ಅವರು ಬೌದ್ಧ ಧರ್ಮದ ಅನುಯಾಯಿ. ಜತೆಗೆ ಸಾಮಾಜಿಕ ಕಾರ್ಯಗಳಲ್ಲಿಯೂ ತೊಡಗಿಸಿಕೊಂಡವರು. ಇದರ ಪ್ರಭಾವಕ್ಕೆ ಒಳಗಾದ ಅವರ ಏಕೈಕ ಪುತ್ರ ವೆನ್ ಅಜಾನ್ ಸಿರಿಪಾನ್ಯೋ ವಿಭಿನ್ನ ದಾರಿ ಹಿಡಿದರು.

ಸಿರಿಪಾನ್ಯೋ ಅವರು 18 ವರ್ಷದವರಿದ್ದಾಗ ತಮ್ಮ ತಾಯಿಯ ಕುಟುಂಬದವರನ್ನು ಭೇಟಿ ಮಾಡಲು ಥಾಯ್ಲೆಂಡ್‌ಗೆ ತೆರಳಿದ್ದರು. ವಿಶ್ರಾಂತಿ ತಾಣ ಒಂದರಲ್ಲಿ ಮೋಜಿಗಾಗಿ ತಾತ್ಕಾಲಿಕ ದೀಕ್ಷೆ ಪಡೆದುಕೊಂಡರು. ಆದರೆ ಆ ಅನುಭವ ಅವರ ಮನಸ್ಸಿನಲ್ಲಿ ಯಾರೂ ನಿರೀಕ್ಷಿಸದ ಬದಲಾವಣೆ ಮೂಡಿಸಿತು. ಇದರಿಂದ ಕಾಯಂ ಸನ್ಯಾಸತ್ವ ಬದುಕನ್ನು ಆಯ್ದುಕೊಂಡರು. ಎರಡು ದಶಕಗಳ ಬಳಿಕ ಅವರು ಈಗ ಅರಣ್ಯ ಭಿಕ್ಕುವಿನ ಗೌರವ ಪಡೆದಿದ್ದಾರೆ. ಜತೆಗೆ ಥಾಯ್ಲೆಂಡ್- ಮ್ಯಾನ್ಮಾರ್ ಗಡಿಯಲ್ಲಿರುವ ಡಿಟಾವೊ ಡುಮ್ ಮಾನೆಸ್ಟರಿಯ ಮುಖ್ಯಸ್ಥರೂ ಆಗಿದ್ದಾರೆ.

### ಎಂಟು ಭಾಷೆಗಳಲ್ಲಿ ಪ್ರವೀಣ

**ಸಿರಿಪಾನ್ಯೋ ಅವರಿಗೆ ಇಂಗ್ಲಿಷ್, ತಮಿಳು ಮತ್ತು ಥಾಯ್ ಸೇರಿದಂತೆ ಎಂಟು ಭಾಷೆಗಳು ಸುಲಲಿತ. ಸನ್ಯಾಸಿಯಾಗಿ ಜೀವನ ನಡೆಸುತ್ತಿದ್ದರೂ, ಅಗತ್ಯಬಿದ್ದ ಸಂದರ್ಭಗಳಲ್ಲಿ ಅವರು ಆಗಾಗ್ಗೆ ತಮ್ಮ ಹಿಂದಿನ ಜೀವನಶೈಲಿಗೆ ಮರಳುತ್ತಾರಂತೆ. ಬೌದ್ಧ ಧರ್ಮದ ತತ್ವಗಳಲ್ಲಿ ಕೌಟುಂಬಿಕ ಪ್ರೀತಿ, ಬಾಂಧವ್ಯಕ್ಕೆ ಒತ್ತು ನೀಡಲಾಗಿದೆ. ಹೀಗಾಗಿ ಅವರು ತಂದೆಯ ಭೇಟಿಗಾಗಿ ಸಮಯ ನೀಡುತ್ತಾರೆ. ಇತ್ತ ಭಿಕ್ಷಾಟನೆಯ ಜೀವನ ನಡೆಸುವ ಅವರು, ಐಷಾರಾಮಿ ಸೌಲಭ್ಯಗಳನ್ನೂ ಈ ಸಂದರ್ಭದಲ್ಲಿ ಬಳಸುತ್ತಾರೆ. ಇಟಲಿಯಲ್ಲಿದ್ದ ತಂದೆಯನ್ನು ಭೇಟಿ ಮಾಡಲು ಅವರು ಖಾಸಗಿ ಜೆಟ್‌ನಲ್ಲಿ ತೆರಳಿದ್ದು ಇದಕ್ಕೆ ಉದಾಹರಣೆ. ಅವರ ಆಧ್ಯಾತ್ಮಿಕ ಚಟುವಟಿಕೆಗಳಿಗೆ ಅನುಕೂಲವಾಗಲಿ ಎಂದು ತಂದೆ ಆನಂದ್ ಕೃಷ್ಣನ್ ಅವರು ಪೆನಾಂಗ್ ಹಿಲ್‌ನಲ್ಲಿ ಜಾಗವೊಂದನ್ನು ಖರೀದಿಸಿದ್ದರು. ತಂದೆಯ ಭವ್ಯ ಸಂಪತ್ತಿಗೆ ಬೆನ್ನು ತೋರಿಸಿರುವ ಸಿರಿಪಾನ್ಯೋ, ಸನ್ಯಾಸತ್ವ ಸ್ವೀಕರಿಸಿದರೂ ಕೌಟುಂಬಿಕ ಒಡನಾಟವನ್ನು ಬಿಡದೆ ಸಾಗಿರುವುದು ಸಾಕಷ್ಟು ಕುತೂಹಲ ಮೂಡಿಸಿದೆ.**

# ನ್ಯಾಶನಲ್ ಇನ್‌ಸ್ಟಿಟ್ಯೂಟ್ ಆಫ್ ಹೆಲ್ತ್‌ನ ನಿರ್ದೇಶಕರಾದ ಜೇ ಭಟ್ಟಾಚಾರ್ಯ

**ವಾಷಿಂಗ್ಟನ್:** ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ದೇಶದ ಉನ್ನತ ಆರೋಗ್ಯ ಸಂಶೋಧನೆ ಮತ್ತು ಧನಸಹಾಯ ಸಂಸ್ಥೆಗಳಾದ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಹೆಲ್ತ್‌ನ ನಿರ್ದೇಶಕರಾಗಿ ಭಾರತೀಯ-ಅಮೆರಿಕನ್ ವಿಜ್ಞಾನಿ ಜೇ ಭಟ್ಟಾಚಾರ್ಯ ಅವರನ್ನು ಆಯ್ಕೆ ಮಾಡಿದ್ದಾರೆ. ಇದರೊಂದಿಗೆ, ಭಟ್ಟಾಚಾರ್ಯ ಅವರು ಉನ್ನತ ಆಡಳಿತಾತಕ ಸ್ಥಾನಕ್ಕೆ ಟ್ರಂಪ್ ಅವರಿಂದ ನಾಮನಿರ್ದೇಶನಗೊಂಡ ಮೊದಲ ಭಾರತೀಯ-ಅಮೆರಿಕನ್ ಆಗಿದ್ದಾರೆ.

ಇದಕ್ಕೂ ಮೊದಲು, ಟೆಸ್ಲಾ ಮಾಲೀಕ ಎಲೋನ್ ಮಸ್ಕ್ ಜೊತೆಗೆ ಹೊಸದಾಗಿ ರಚಿಸಲಾದ ಸರ್ಕಾರದ ದಕ್ಷತೆಯ ಇಲಾಖೆಯನ್ನು ಮುನ್ನಡೆಸಲು ಟ್ರಂಪ್ ಭಾರತೀಯ-ಅಮೆರಿಕನ್ ವಿವೇಕ್ ರಾಮಸ್ವಾಮಿ ಅವರನ್ನು ಆಯ್ಕೆ ಮಾಡಿದ್ದರು. ಆದಾಗ್ಯೂ, ಇದು ಸ್ವಯಂಪ್ರೇರಿತ ಸ್ಥಾನವಾಗಿದೆ, ಅಮೆರಿಕ ಸೆನೆಟ್‌ನಿಂದ ದಢೀಕರಣದ ಅಗತ್ಯವಿಲ್ಲ. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಹೆಲ್ತ್‌ನ ನಿರ್ದೇಶಕರಾಗಿ ಸೇವೆ ಸಲ್ಲಿಸಲು ಎಮ್‌ಡಿ, ಪಿಎಚ್‌ಡಿ ಜೇ ಭಟ್ಟಾಚಾರ್ಯ ಅವರನ್ನು ನಾಮನಿರ್ದೇಶನ ಮಾಡಲು ನಾನು ರೋಮಾಂಚನಗೊಂಡಿದ್ದೇನೆ. ಡಾ. ಭಟ್ಟಾಚಾರ್ಯ ಅವರು ರಾಬರ್ಟ್ ಎಫ್. ಕೆನಡಿ ಜೂನಿಯರ್ ಅವರ ಸಹಕಾರದೊಂದಿಗೆ ರಾಷ್ಟ್ರದ ವೈದ್ಯಕೀಯ ಸಂಶೋಧನೆಯನ್ನು ನಿರ್ದೇಶಿಸಲು ಮತ್ತು ಪ್ರಮುಖ ಆವಿಷ್ಕಾರಗಳನ್ನು ಮಾಡಲು ಕೆಲಸ ಮಾಡುತ್ತಾರೆ. ಆರೋಗ್ಯ ಸುಧಾರಿಸುತ್ತದೆ ಮತ್ತು ಜೀವಗಳನ್ನು ಉಳಿಸುತ್ತದೆ ಎಂದು ಟ್ರಂಪ್ ಘೋಷಿಸಿದ್ದಾರೆ.



ಒಟ್ಟಿಗೆ, ಜೇ ಮತ್ತು ಕೆನಡಿ ಜೂನಿಯರ್ ಅವರು ಫೆಐಖ ಅನ್ನು ವೈದ್ಯಕೀಯ ಸಂಶೋಧನೆಯ ಗೋಲ್ಡ್ ಸ್ಟ್ಯಾಂಡರ್ಡ್‌ಗೆ ಮರುಸ್ಥಾಪಿಸುತ್ತಾರೆ, ಏಕೆಂದರೆ ಅವರು ನಮ ದೀರ್ಘಕಾಲದ ಅನಾರೋಗ್ಯ ಮತ್ತು ಕಾಯಿಲೆಯ ಬಿಕ್ಕಟ್ಟು ಸೇರಿದಂತೆ ಅಮೆರಿಕಾದ ಅತಿ ದೊಡ್ಡ ಆರೋಗ್ಯ ಸವಾಲುಗಳ ಮೂಲ ಕಾರಣಗಳು, ಪರಿಹಾರಗಳನ್ನು ಪರಿಶೀಲಿಸುತ್ತಾರೆ. ಅವರು ಒಟ್ಟಾಗಿ ಕೆಲಸ ಮಾಡುತ್ತಾರೆ ಎಂದಿದ್ದಾರೆ. ಅವರು ಸ್ಟ್ಯಾನ್‌ಫೋರ್ಡ್‌ನ ಜನಸಂಖ್ಯಾಶಾಸ್ತ್ರ ಮತ್ತು ಆರೋಗ್ಯ, ವಯಸ್ಸಾದ ಅರ್ಥಶಾಸ್ತ್ರದ ಕೇಂದ್ರವನ್ನು ನಿರ್ದೇಶಿಸುತ್ತಾರೆ.

ಅವರ ಸಂಶೋಧನೆಯು ದುರ್ಬಲ ಜನಸಂಖ್ಯೆಯ ಆರೋಗ್ಯ ಮತ್ತು ಯೋಗಕ್ಷೇಮದ ಮೇಲೆ ಕೇಂದ್ರೀಕರಿಸುತ್ತದೆ, ಸರ್ಕಾರಿ ಕಾರ್ಯಕ್ರಮಗಳು, ಬಯೋಮೆಡಿಕಲ್ ನಾವೀನ್ಯತೆ ಮತ್ತು ಅರ್ಥಶಾಸ್ತ್ರದ ಪಾತ್ರವನ್ನು ಒತ್ತಿಹೇಳುತ್ತದೆ.

**ಭಟ್ಟಾಚಾರ್ಯ ಅವರು ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾನಿಲಯದಲ್ಲಿ ಆರೋಗ್ಯ ನೀತಿಯ ಪ್ರಾಧ್ಯಾಪಕರಾಗಿದ್ದಾರೆ, ನ್ಯಾಷನಲ್ ಬ್ಯೂರೋ ಆಫ್ ಎಕನಾಮಿಕ್ಸ್ ರಿಸರ್ಚ್ ನಲ್ಲಿ ಸಂಶೋಧನಾ ಸಹವರ್ತಿಯಾಗಿದ್ದಾರೆ ಮತ್ತು ಸ್ಟ್ಯಾನ್‌ಫೋರ್ಡ್ ಇನ್‌ಸ್ಟಿಟ್ಯೂಟ್ ಫಾರ್ ಎಕನಾಮಿಕ್ ಪಾಲಿಸಿ ರಿಸರ್ಚ್, ಸ್ಟ್ಯಾನ್‌ಫೋರ್ಡ್ ಫ್ರೀಮನ್ ಸ್ಪೋಗ್ಲಿ ಇನ್‌ಸ್ಟಿಟ್ಯೂಟ್ ಮತ್ತು ಹೂವರ್ ಸಂಸ್ಥೆಯಲ್ಲಿ ಸೌಜನ್ಯದಿಂದ ಹಿರಿಯ ಸಹವರ್ತಿಯಾಗಿದ್ದಾರೆ**

**-ಡೊನಾಲ್ಡ್ ಟ್ರಂಪ್, ಅಧ್ಯಕ್ಷ**

# ಹದ್ದುಮೀರಿದ ಜಿಹಾದಿಗಳ ಹಿಂಸಾಚಾರ, ವಕೀಲರೊಬ್ಬರ ಹತ್ಯೆ



**ಡಾಕಾ:** ಬಾಂಗ್ಲಾದೇಶದಲ್ಲಿ ಹಿಂದೂ ಸಮುದಾಯದ ಮೇಲಿನ ದಾಳಿಗಳು ಮತ್ತಷ್ಟು ತೀವ್ರಗೊಂಡಿದ್ದು, ಹಿಂಸಾತಕ ಕೃತ್ಯದಲ್ಲಿ ವಕೀಲರೊಬ್ಬರ ಹತ್ಯೆಯಾಗಿದೆ. ಬಾಂಗ್ಲಾದೇಶದಲ್ಲಿ ಇಸ್ಕಾನ್ ಸಂಸ್ಥಾಪಕರಲ್ಲಿ ಒಬ್ಬರಾಗಿರುವ ಚಿನಯ್ ಕೃಷ್ಣದಾಸ್ ಬ್ರಹಚಾರಿ ಅವರನ್ನು ಸ್ಥಳೀಯ ಪೊಲೀಸರು ಬಲವಂತವಾಗಿ ಬಂಧಿಸಿದ ಬಳಿಕ ಹಿಂಸಾಚಾರ ಭುಗಿಲೆದ್ದಿದೆ. ಸನಾತನ ಜಾಗರಣ ಮಂಚ್, ಪುಂಡರೀಕ್ ಧಾಮದ ಪ್ರಾಂಶುಪಾಲರಾಗಿರುವ ಚಿನಯ್ ಕೃಷ್ಣದಾಸ್ ಇತ್ತೀಚೆಗೆ ಸಾರ್ವಜನಿಕ ಸಮಾವೇಶದಲ್ಲಿ ಮಾತನಾಡುವಾಗ ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ಹಿಂಸಾಚಾರ ಹೆಚ್ಚಾಗುತ್ತಿದೆ.

ಈ ಕಾರಣಕ್ಕೆ ಚಿನಯ್ ಕೃಷ್ಣದಾಸ್ ವಿರುದ್ಧ ಪ್ರಕರಣ ದಾಖಲಿಸಿ ಬಂಧಿಸುವ ತಯಾರಿ ನಡೆದಿತ್ತು. ಈ ಕಾರಣಕ್ಕೆ ಅವರು ಭಾರತದತ್ತ ಪ್ರಯಾಣಿಸಲು ಮುಂದಾಗಿದ್ದರು. ವಿಮಾನನಿಲ್ದಾಣದಲ್ಲಿ ಚಿನಯ್ ಕೃಷ್ಣದಾಸ್ ಅವರನ್ನು ಪೊಲೀಸರು ವಶಕ್ಕೆ ಪಡೆದು ಕರೆದೊಯ್ಯುವಾಗ ಪ್ರತಿಭಟನೆಗಳು ತೀವ್ರಗೊಂಡವು. ಪ್ರತಿಭಟನೆ ಹತ್ತಿಕ್ಕಲು ಪೊಲೀಸರು ಲಾಠಿಚಾರ್ಜ್ ನಡೆಸಿ ಅಶ್ರುವಾಯು ಶೆಲ್‌ಗಳನ್ನು ಸಿಡಿಸಲಾಯಿತು. ಇಂತಹ ಕೃತ್ಯದಲ್ಲಿ ಸೈಫೂಲ್ಲಾ ಆಲಿಫ್ ಎಂಬ ವಕೀಲರ ಸಂಘ ಸದಸ್ಯ ಮೃತಪಟ್ಟಿದ್ದಾರೆ. ಸಹಾಯಕ ಪಬ್ಲಿಕ್ ಪ್ರಾಸಿಕ್ಯೂಟರ್ ಆಗಿ ಕೆಲಸ ಮಾಡುತ್ತಿದ್ದ ಆಲಿಫ್ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು ಎನ್ನಲಾಗಿದೆ.

**ಅದನ್ನು ತಡೆಯುವಲ್ಲಿ ಮೊಹಮದ್ ಯೂನಸ್ ಅವರ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ್ದರು. ಶೇಖ್ ಹಸೀನಾ ಅವರು ಅಧಿಕಾರದಿಂದ ನಿರ್ಗಮಿಸಿದ ಬಳಿಕ ಬಾಂಗ್ಲಾದೇಶದಲ್ಲಿ ಹಿಂಸಾಚಾರಗಳು ಮಿತಿಮೀರಿವೆ. ಹಿಂದೂಗಳನ್ನು ಹೊರಹಾಕಿ ಬಾಂಗ್ಲಾದಲ್ಲಿ ಶಾಂತಿ ಮೂಡಿಸಬಹುದು ಎಂದು ಭಾವಿಸಿದರೆ ಅದು ತಪ್ಪು ಕಲ್ಪನೆ. ಪ್ರಜಾಪ್ರಭುತ್ವವೇ ಇಲ್ಲದಂತಾಗುತ್ತದೆ. ಅಫ್ಘಾನಿಸ್ತಾನ, ಸಿರಿಯಾ ದೇಶಕ್ಕೆ ಆದ ಗತಿಯೇ ಬಾಂಗ್ಲಾದೇಶ ದೇಶಕ್ಕೂ ಎದುರಾಗಲಿದೆ ಎಂದು ಹೇಳಿದರು.**

# ಭಾರತ ತನ್ನದೇ ಆದ ಪ್ರಾಣಶಕ್ತಿ ಹೊಂದಿದೆ; ಭಾಗವತ್



**ನವದೆಹಲಿ:** ಭಾರತವು ತನ್ನದೇ ಆದ ಪ್ರಾಣ ಶಕ್ತಿಯನ್ನು ಹೊಂದಿದೆ ಆದರೆ 500 ವರ್ಷಗಳ ಸಂಸ್ಕಾರ ಅವರ ಪ್ರಜ್ಞೆಯಲ್ಲಿ ಆಳವಾಗಿ ಹುದುಗಿರುವುದರಿಂದ ಅದು ಅನೇಕರಿಗೆ ಗೋಚರಿಸುವುದಿಲ್ಲ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ.

ಭಾರತವು ನಮ ಕಣ್ಣುಗಳ ಮುಂದೆ ಪ್ರಾಣ ಶಕ್ತಿ ಹೊಂದಿದೆ ಆದರೆ ಅದು ಗೋಚರಿಸುವುದಿಲ್ಲ ಏಕೆಂದರೆ 500 ವರ್ಷಗಳ ಸಂಸ್ಕಾರ ನಮಲ್ಲಿ ಆಳವಾಗಿ ಹುದುಗಿದೆ, ಎಂದು ಅವರು ಭಾರತೀಯ ಆಧ್ಯಾತಿಕ ಅಭ್ಯಾಸಗಳನ್ನು ಅನುಸರಿಸಲು ಜನರನ್ನು ಉತ್ತೇಜಿಸಿದರು. ಭಾರತದ ಪ್ರಾಣ ಶಕ್ತಿ ಸಾಮಾನ್ಯ ಮನುಷ್ಯರಲ್ಲಿ ಮತ್ತು ಸಣ್ಣ ವಿಷಯಗಳಲ್ಲಿ ಕಾಣಿಸಿಕೊಳ್ಳುತ್ತದೆ.

ಇದು ಜನವರಿ 22 ರಂದು ಆಶ್ಚರ್ಯಕರವಾಗಿ ಕಾಣಿಸಿಕೊಂಡಿತು ಎಂದು ಅವರು ಈ ವರ್ಷದ ಜನವರಿ 22 ರಂದು ನಡೆದ ಅಯೋಧ್ಯೆಯ ರಾಮ ಮಂದಿರದ ಪ್ರತಿಷ್ಠಾಪನೆಯ ಬಗ್ಗೆ ಮುಸುಕಿನ ಉಲ್ಲೇಖದಲ್ಲಿ ಹೇಳಿದರು. ಆರ್‌ಎಸ್‌ಎಸ್‌ನ ಹಿರಿಯ ಕಾರ್ಯಕರ್ತ ಮುಕುಲ್ ಕಾನಿಟ್ಕರ್ ಅವರು ಬರೆದಿರುವ ಬನಾಯೀಂ ಜೀವನ ಪ್ರಣ್ವಾನ್ ಪುಸ್ತಕವನ್ನು ಬಿಡುಗಡೆ ಮಾಡಲು ದೆಹಲಿ ವಿಶ್ವವಿದ್ಯಾಲಯದ ಆವರಣದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

**ಇಲ್ಲಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಪ್ರಾಣ ಶಕ್ತಿ (ಜೀವ ಶಕ್ತಿ) ವಿಶ್ವದ ಯಾವುದೇ ಭಾಗದಲ್ಲಿ ಬಿಕ್ಕಟ್ಟು ಉಂಟಾದರೆ, ದೇಶವು ಅಂತಹ ಪರಿಸ್ಥಿತಿಯನ್ನು ಎದುರಿಸುತ್ತಿದೆ ಎಂದು ಪರಿಗಣಿಸದೆ ತನ್ನ ಸಹಾಯವನ್ನು ನೀಡಲು ಧಾವಿಸುವಂತೆ ಮಾಡುತ್ತದೆ ಎಂದು ಹೇಳಿದರು.**

# ಹಿಜ್ಬುಲ್ಲಾ ಜೊತೆ ಕದನ ವಿರಾಮಕ್ಕೆ ಪ್ರಧಾನಿ ನೆತನ್ಯಾಹು ಸಮ್ಮತಿ



**ಜೆರುಸಲೇಂ:** ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಕದನ ವಿರಾಮಕ್ಕೆ ಸಮ್ಮತಿ ಸೂಚಿಸಿದ್ದಾರೆ. ಲೆಬನಾನ್‌ನ ಹಿಜ್ಬುಲ್ಲಾ ಜೊತೆ ಕದನ ವಿರಾಮ ಘೋಷಿಸುವಂತೆ ಅಮೆರಿಕ ಮಾಡಿಕೊಂಡಿರುವ ಮನವಿಗೆ ನಮ್ಮ ಸಂಪುಟ ಒಪ್ಪಿಗೆ ಸೂಚಿಸಿದೆ ಎಂದು ನೆತನ್ಯಾಹು ತಿಳಿಸಿದ್ದಾರೆ.


ಇದು ಗಾಜಾ ಪಟ್ಟಿಯಲ್ಲಿ ನಡೆಯುತ್ತಿರುವ ಯುದ್ಧಕ್ಕೆ ಸಂಬಂಧಿಸಿದ ಸುಮಾರು 14 ತಿಂಗಳ ಹೋರಾಟಕ್ಕೆ ಅಂತ್ಯ ಹಾಡಲು ವೇದಿಕೆಯನ್ನು ಸಿದ್ಧಪಡಿಸಿದಂತಾಗಿದೆ. ಕ್ಯಾಬಿನೆಟ್ ಸಭೆಗೆ ಮುಂಚಿನ ಗಂಟೆಗಳಲ್ಲಿ, ಬೈರುತ್, ಅದರ ದಕ್ಷಿಣ ಉಪನಗರಗಳಲ್ಲಿ ಇಸ್ರೇಲ್ ತನ್ನ ಅತ್ಯಂತ ತೀವ್ರವಾದ ದಾಳಿಗಳನ್ನು ನಡೆಸಿತು ಮತ್ತು ದಾಖಲೆ ಸಂಖ್ಯೆಯ ಸ್ಥಳಾಂತರಿಸುವ ಎಚ್ಚರಿಕೆಗಳನ್ನು ನೀಡಿತು.

ಯಾವುದೇ ಕದನ ವಿರಾಮ ಹಿಡಿತಕ್ಕೆ ಬರುವ ಮುನ್ನ ಅಂತಿಮ ಗಂಟೆಗಳಲ್ಲಿ ಹಿಜ್ಬುಲ್ಲಾವನ್ನು ಹೊಡೆದು ರುಳಿಸುವ ಗುರಿಯೊಂದಿಗೆ ಇಸ್ರೇಲ್ ನಡೆಸಿದ ಈ ದಾಳಿಯಲ್ಲಿ 23ಕ್ಕೂಹೆಚ್ಚು ಮಂದಿ ಸಾವನ್ನಪ್ಪಿದ್ದರು. ಕದನ ವಿರಾಮವು ಅಕ್ಟೋಬರ್ 7, 2023 ರಂದು ಇಸ್ರೇಲ್‌ನ ಮೇಲೆ ಹಮಾಸ್‌ನ ದಾಳಿಯಿಂದ ಪ್ರಚೋದಿಸಲ್ಪಟ್ಟ ಪ್ರಾದೇಶಿಕ ಅಶಾಂತಿಯನ್ನು ಕೊನೆಗೊಳಿಸುವ ಮೊದಲ ಪ್ರಮುಖ ಹೆಜ್ಜೆಯಾಗಿದೆ.

ಇನ್ನೂ, ಲೆಬನಾನ್‌ನಲ್ಲಿನ ಹೋರಾಟದ ಯಾವುದೇ ನಿಲುಗಡೆಯು ಇಸ್ರೇಲ್, ಇರಾನ್ ನಡುವಿನ ಯುದ್ಧದ ಸಾಧ್ಯತೆಯನ್ನು ಕಡಿಮೆ ಮಾಡುತ್ತದೆ ಎಂದು ನಿರೀಕ್ಷಿಸಲಾಗಿದೆ, ಇದು ಹಿಜ್ಬುಲ್ಲಾ ಮತ್ತು ಹಮಾಸ್ ಎರಡನ್ನೂ ಬೆಂಬಲಿಸುತ್ತದೆ ಮತ್ತು ಈ ವರ್ಷದ ಆರಂಭದಲ್ಲಿ ಎರಡು ಸಂದರ್ಭಗಳಲ್ಲಿ ಇಸ್ರೇಲ್‌ನೊಂದಿಗೆ ನೇರ ಗುಂಡಿನ ವಿನಿಮಯ ಮಾಡಿಕೊಂಡಿತು. ಹಿಜ್ಬುಲ್ಲಾ ಕದನ ವಿರಾಮವನ್ನು ಮುರಿದರೆ ಅದು ಶಕ್ತಿಯಿಂದ ದಾಳಿ ಮಾಡುವುದಾಗಿ ಇಸ್ರೇಲ್ ಹೇಳುತ್ತದೆ. ದೂರದರ್ಶನದ ಹೇಳಿಕೆಯಲ್ಲಿ, ನೆತನ್ಯಾಹು ಅವರು ಮಂಗಳವಾರದ ನಂತರ ಕ್ಯಾಬಿನೆಟ್ ಮಂತ್ರಿಗಳಿಗೆ ಕದನ ವಿರಾಮದ ಪ್ರಸ್ತಾಪ ವನ್ನು ಮಂಡಿಸುವುದಾಗಿ ಹೇಳಿದರು.

**ಆದರೆ ಇದು ಗಾಜಾದಲ್ಲಿನ ವಿನಾಶಕಾರಿ ಯುದ್ಧವನ್ನು ಪರಿಹರಿಸುವುದಿಲ್ಲ. ಯುಎಸ್ ಅಧ್ಯಕ್ಷರಾಗಿ ಚುನಾಯಿತ ಡೊನಾಲ್ಡ್ ಟ್ರಂಪ್ ಮಧ್ಯ ಪ್ರಾಚ್ಯದಲ್ಲಿ ಶಾಂತಿಯನ್ನು ತರುವುದಾಗಿ ಪ್ರತಿಜ್ಞೆ ಮಾಡಿದ್ದಾರೆ, ಆದರೆ ಅವರು ಅಥವಾ ನೆತನ್ಯಾಹು ಅವರು ಪ್ಯಾಲೆಸ್ಟೀನಿಯನ್ ಪ್ರದೇಶಕ್ಕೆ ಯುದ್ಧಾ ನಂತರದ ಪರಿಹಾರವನ್ನು ಪ್ರಸ್ತಾಪಿಸಲಿಲ್ಲ, ಅಲ್ಲಿ ಹಮಾಸ್ ಇನ್ನೂ ಡಜನ್‌ಗಟ್ಟಲೆ ಒತ್ತೆಯಾಳುಗಳನ್ನು ಹಿಡಿದಿಟ್ಟುಕೊಂಡಿದೆ ಮತ್ತು ಸಂಘರ್ಷವು ಹೆಚ್ಚು ಅಸ್ಥಿರವಾಗಿದೆ.**

# ಭಯೋತ್ಪಾದಕರ ಜಾಡು ಬೇಧಿಸಿದ ಪೊಲೀಸರು



**ಜಮ್ಮು:** ಭಯೋತ್ಪಾದನಾ ಜಾಲಗಳ ಮೇಲೆ ಗಮನಾರ್ಹವಾದ ನಿಗ್ರಹದಲ್ಲಿ, ಜಮ್ಮು ಮತ್ತು ಕಾಶ್ಮೀರ ಪೊಲೀಸರು ಜಮ್ಮು ಪ್ರದೇಶದಾದ್ಯಂತ ಸರಣಿ ಶೋಧ ಮತ್ತು ದಾಳಿಗಳನ್ನು ನಡೆಸಿದರು, ಹಲವಾರು ಭಯೋತ್ಪಾದಕ ಶಂಕಿತರು ಮತ್ತು ನೆಲದ ಕೆಲಸಗಾರರನ್ನು ಬಂಧಿಸಿದ್ದಾರೆ ಮತ್ತು ಶಸ್ತಾಸ್ತ್ರಗಳು , ನಗದು, ಎಲೆಕ್ಟ್ರಾನಿಕ್ ಸಾಧನಗಳು ಮತ್ತು ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ಲಾಜಿಸ್ಟಿಕ್ಸ್ ನಿರ್ವಹಣೆ, ನೇಮಕಾತಿ, ಮತ್ತು ಶಸಾ?ತ್ರಸ್ತ್ರ, ಮದ್ದುಗುಂಡುಗಳು ಮತ್ತು ನಿಧಿಗಳ ಚಲನೆಯನ್ನು ಸುಗಮಗೊಳಿಸುವುದು ಸೇರಿದಂತೆ ಭಯೋತ್ಪಾದಕ ಸಂಘಟನೆಗಳಿಗೆ ಬೆಂಬಲವನ್ನು ನೀಡುವಲ್ಲಿ ಒಳಗೊಂಡಿರುವ ಓವರ್ ಗ್ರೌಂಡ್ ವರ್ಕರ್ಸ್ ಮತ್ತು ಇತರ ಭಯೋತ್ಪಾದಕ ಶಂಕಿತರನ್ನು ಗುರುತಿಸಲು, ಟ್ರ್ಯಾಕ್ ಮಾಡಲು ಮತ್ತು ಬಂಧಿಸಲು ಉದ್ದೇಶಿಸಿರುವ ದಾಳಿಗಳನ್ನು ನಡೆಸಲಾಯಿತು. ನಿರ್ದಿಷ್ಟ ಗುಪ್ತಚರ ಒಳಹರಿವಿನ ಆಧಾರದ ಮೇಲೆ ವಸತಿ ಮನೆಗಳು ಮತ್ತು ಅಡಗುತಾಣಗಳು ಸೇರಿದಂತೆ ಅನೇಕ ಸ್ಥಳಗಳಲ್ಲಿ ದಾಳಿ ನಡೆಸಲಾಗಿದೆ ಅಧಿಕತ ಹೇಳಿಕೆ ತಿಳಿಸಿದೆ. ಇವು 2013 ರಲ್ಲಿ ಥಾನಮಂಡಿ ಪೊಲೀಸ್ ಠಾಣೆಯಲ್ಲಿ ಮತ್ತು ಈ ವರ್ಷ ರಾಜೌರಿ ಪೊಲೀಸ್ ಠಾಣೆಯಲ್ಲಿ ದಾಖಲಾದ ಎರಡು ಪ್ರತ್ಯೇಕ ಪ್ರಕರಣಗಳ ತನಿಖೆಯ ಭಾಗವಾಗಿದೆ. ಜೈಶ್-ಎ-ಮೊಹಮದ್ (ಜೆಇಎಂ) ಮತ್ತು ಲಷ್ಕರ್-ಎ-ತೊಬಾ (ಎಲ್‌ಇಟಿ) ನಂತಹ ನಿಷೇಧಿತ ಭಯೋತ್ಪಾದಕ ಸಂಘಟನೆಗಳೊಂದಿಗೆ ಸಂಬಂಧ ಹೊಂದಿರುವ ಗಡಿ ಜಿಲ್ಲೆಯಲ್ಲಿ ಸಕ್ರಿಯ ವಾಗಿರುವ ಭಯೋತ್ಪಾದಕ ಜಾಲಕ್ಕೆ ಸಂಬಂಧಿಸಿದ ಪ್ರಕರಣಗಳು ಭಯೋತ್ಪಾದನೆ ಸಂಬಂಧಿತ ಚಟುವಟಿಕೆಗಳನ್ನು ಪ್ರಾರಂಭಿಸಲು, ಸಂಘಟಿಸಲು ಮತ್ತು ಕಾರ್ಯಗತಗೊಳಿಸುವುದನ್ನು ತಡೆಗಟ್ಟುವ ಉದ್ದೇಶದಿಂದ ಈ ದಾಳಿ ನಡೆದಿದೆ.

ಉಧಂಪುರದಲ್ಲಿ, ರಾಯ್ ಚಕ್, ಚಕಾ, ಕಡ್ವಾ, ಮೋಹಾರ್, ಕುಂಡ್, ಖೇಡ್, ಪೊನಾರಾ, ಲೌಧ್ರಾ ಮತ್ತು ಸಂಗ್ ಸೇರಿದಂತೆ ಬಸಂತ್‌ಗಢ ಪ್ರದೇಶದ 25 ಸ್ಥಳಗಳಲ್ಲಿ ಪೊಲೀಸರು ವ್ಯಾಪಕ ಶೋಧ ನಡೆಸಿದರು. ಪುನಿ, ಗುಲಾಬ್‌ಗಢ, ಅರ್ನಾಸ್, ಪನಾಸ್ಸಾ ಸೇರಿದಂತೆ ರಿಯಾಸಿ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಹತ್ತು ರೀತಿಯ ಶೋಧ ದಾಳಿಗಳನ್ನು ನಡೆಸಲಾಯಿತು.

**ರಜೌರಿ ಜಿಲ್ಲೆಯಲ್ಲಿ, ಥಾನಮಂಡಿ, ದರ್ಹಾಲ್, ಕಲಕೋಟೆ, ಮಂಜಕೋಟೆ, ಧರ್ಮಸಾಲ್ ಪ್ರದೇಶಗಳಲ್ಲಿ ಒಂಬತ್ತು ಸ್ಥಳಗಳಲ್ಲಿ ಹುಡುಕಾಟ ನಡೆಸಲಾಗಿದ್ದು, ಸುರನ್‌ಕೋಟೆ, ಮಂಡಿ, ಪೂಂಚ್, ಮೆಂಧರ್ ಮತ್ತು ಗುರ್ಸಾಯಿ ಸೇರಿದಂತೆ ಪೂಂಚ್ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ 12 ರೀತಿಯ ಶೋಧ ದಾಳಿಗಳನ್ನು ನಡೆಸಲಾಗಿದೆ.**

# ಲಕ್ನೋ-ಆಗ್ರಾ ಎಕ್ಸ್‌ಪ್ರೆಸ್‌ವೇನಲ್ಲಿ ಭೀಕರ ರಸ್ತೆ ಅಪಘಾತ



**ಐವರು ವೈದ್ಯರ ಸಾವು**

**ಕನೌಜ್:** ಲಕ್ನೋ-ಆಗ್ರಾ ಎಕ್ಸ್‌ಪ್ರೆಸ್‌ವೇಯಲ್ಲಿ ಬುಧವಾರ ಮುಂಜಾನೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಐವರು ವೈದ್ಯರು, ಪ್ರಯೋಗಾಲಯ ತಂತ್ರಜ್ಞರು ಸಾವನ್ನಪ್ಪಿದ್ದಾರೆ. ಮೃತಪಟ್ಟ ಎಲ್ಲರೂ ಸೈಫೈನಲ್ಲಿರುವ ಉತ್ತರ ಪ್ರದೇಶ ವೈದ್ಯಕೀಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಸಂಯೋಜಿತರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಅತಿವೇಗದ ಎಸ್‌ಯುವಿ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಈ ಘಟನೆ ನಡೆದಿದೆ. ಆಗ ವಾಹನಕ್ಕೆ ಟ್ರಕ್ ಡಿಕ್ಕಿ ಹೊಡೆದಿದೆ. ಮುಂಜಾನೆ 3 ಗಂಟೆ ಸುಮಾರಿಗೆ ಎಸ್‌ಯುವಿ ಪಲ್ಟಿಯಾಗಿ ಮೀಡಿಯನ್ ಡಿವೈಡರ್‌ಗೆ ಡಿಕ್ಕಿ ಹೊಡೆದು ಈ ಘಟನೆ ಸಂಭವಿಸಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಅಮಿತ್ ಕುಮಾರ್ ಆನಂದ್ ಹೇಳಿದ್ದಾರೆ. ವಾಹನವು ತರುವಾಯ ಮುಂಬರುವ ಲೇನ್‌ಗೆ ದಾಟಿತು, ಅಲ್ಲಿ ಅದು ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮವಾಗಿ, ನಾಲ್ವರು ವೈದ್ಯರು ಮತ್ತು ಒಬ್ಬ ಲ್ಯಾಬ್ ಟೆಕ್ನಿಷಿಯನ್ ಸ್ಥಳದಲ್ಲೇ ಸಾವನ್ನಪ್ಪಿದರು. ಒಬ್ಬ ಹೆಚ್ಚುವರಿ ವ್ಯಕ್ತಿ, ಪಿಜಿ ವಿದ್ಯಾರ್ಥಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ಭೀಮರಾವ್ ಅಂಬೇಡ್ಕರ್ ವೈದ್ಯಕೀಯ ಕಾಲೇಜಿಗೆ ದಾಖಲಿಸಿದೆ ಎಂದು ಅಧಿಕಾರಿ ಹೇಳಿದರು. ಮತರನ್ನು ಆಗ್ರಾ ಮೂಲದ ಡಾ. ಅನಿರುದ್ಧ್ ವರ್ಮಾ (29), ಡಾ. ಸಂತೋಷ್ ಕುಮಾರ್ ಮೌರ್ಯ, ಡಾ. ಅರುಣ್ ಕುಮಾರ್, ಬರೇಲಿಯ ಡಾ. ನರ್ದೀಪ್ ಹಾಗೂ ಪ್ರಯೋಗಾಲಯ ತಂತ್ರಜ್ಞ ರಾಕೇಶ್ ಕುಮಾರ್ ಎಂದು ಗುರುತಿಸಲಾಗಿದೆ.


ವೈದ್ಯರು ಮತ್ತು ತಂತ್ರಜ್ಞರ ಗುಂಪು ಲಕ್ನೋದಲ್ಲಿ ಮದುವೆಯಲ್ಲಿ ಭಾಗವಹಿಸಿದ ನಂತರ ಸೈಫೈಗೆ ಮರಳುತ್ತಿದ್ದರು ಎಂದು ವರದಿಯಾಗಿದೆ.ಗಾಯಾಳು ಮೊರಾದಾಬಾದ್ ಮೂಲದ ಜೈವೀರ್ ಸಿಂಗ್ (39) ಅವರನ್ನು ತಿವಾರ್ ವೈದ್ಯಕೀಯ ಕಾಲೇಜಿಗೆ ದಾಖಲಿಸಲಾಗಿದೆ ಎಂದು ಸರ್ಕಲ್ ಅಧಿಕಾರಿ ಡಾ.ಪ್ರಿಯಾಂಕಾ ಬಾಜ್‌ಪೇಯ್ ತಿಳಿಸಿದ್ದಾರೆ. ಪೊಲೀಸರು ಮತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ.

# ಬಾಂಗ್ಲಾದಲ್ಲಿ ಹಿಂದೂ ಸ್ವಾಮೀಜಿ ಚಿನ್ಮಯ್ ಪ್ರಭು ಬಂಧನ

## ಕೇಸರಿಧ್ವಜ ಹಾರಿಸಿದ್ದ ಚಿನ್ಮಯ್ ಪ್ರಭು ವಿರುದ್ಧ ಬಾಂಗ್ಲಾದೇಶ ಮಧ್ಯಂತರ ಸರಕಾರ ದೇಶದ್ರೋಹ ಸೇರಿದಂತೆ 18 ಪ್ರಕರಣ ದಾಖಲು

**ಢಾಕಾ:** ಬಾಂಗ್ಲಾದೇಶದಲ್ಲಿಹಿಂದೂಗಳ ಮೇಲೆ ನಡೆಯುತ್ತಿರುವ ದೌರ್ಜನ್ಯ ಖಂಡಿಸಿ ಹೋರಾಟ ನಡೆಸಿದ್ದ ಹಿಂದೂ ಧಾರ್ಮಿಕ ಮುಖಂಡ ಹಾಗೂ ಇಸ್ಕಾನ್ ಸದಸ್ಯ ಚಿನ್ಮಯ್ ಕೃಷ್ಣದಾಸ್ ಪ್ರಭು ಬ್ರಹ್ಮಚಾರಿ ಸ್ವಾಮೀಜಿಯನ್ನು ದೇಶದ್ರೋಹ ಆರೋಪದ ಮೇಲೆ ಢಾಕಾ ಪೊಲೀಸರು ಬಂಧಿಸಿದ್ದಾರೆ.

ಬಾಂಗ್ಲಾದೇಶ ತೊರೆದು ಭಾರತಕ್ಕೆ ಬರಲು ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದ ಚಿನ್ಮಯ್ ಪ್ರಭು ಅವರನ್ನು ಯೂನಸ್ ಸರಕಾರದ ಸೂಚನೆ ಮೇರೆಗೆ ನಿಲ್ದಾಣದ ಭದ್ರತಾ ಸಿಬ್ಬಂದಿ ವಶಕ್ಕೆ ತೆಗೆದುಕೊಂಡರು. ಬಳಿಕ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಸ್ವಾಮೀಜಿಯನ್ನು ಅಜ್ಞಾತ ಸ್ಥಳಕ್ಕೆ ಕರೆದೊಯ್ದಿರುವ ಪೊಲೀಸರು ವಿಚಾರಣೆ ನಡೆಸಿದ್ದಾರೆ. ಆನಂತರ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದ್ದು, ಅಲ್ಲಿ ಅವರಿಗೆ ಜಾಮೀನು ನಿರಾಕರಣೆಯಾಗಿದೆ.



ಮಾಜಿ ಪ್ರಧಾನಿ ಶೇಖ್ ಹಸೀನಾ ಪದಚ್ಯುತಿ ಬಳಿಕ ದೇಶದಲ್ಲಿಹಿಂದೂಗಳ ಮೇಲೆ ನಡೆದಿದ್ದ ದೌರ್ಜನ್ಯ ವಿರೋಧಿಸಿ ಚಿನ್ಮಯ್ ಪ್ರಭು ನೇತೃತ್ವದಲ್ಲಿಹೋರಾಟ ನಡೆದಿತ್ತು. ರಂಗ್‌ಪುರದಲ್ಲಿ ನ.22 ರಂದು ಚಿನ್ಮಯ್ ಪ್ರಭು ನೇತೃತ್ವದಲ್ಲಿ ಪ್ರತಿಭಟನಾ ರ್‍ಯಾಲಿ ನಡೆಸಿದ್ದ ಹಿಂದೂ ಸಮುದಾಯ ಮುಖಂಡರು, ಬಾಂಗ್ಲಾದೇಶದಲ್ಲಿ ಭಾಗವಧ್ವಜ ಹಾರಿಸಿದ್ದರು. ಕೇಸರಿಧ್ವಜ ಹಾರಿಸಿದ್ದ ಚಿನ್ಮಯ್ ಪ್ರಭು ವಿರುದ್ಧ ಬಾಂಗ್ಲಾದೇಶ ಮಧ್ಯಂತರ ಸರಕಾರ ದೇಶದ್ರೋಹ ಸೇರಿದಂತೆ 18 ಪ್ರಕರಣ ದಾಖಲಿಸಿದೆ. ಬಾಂಗ್ಲಾದೇಶದಲ್ಲಿಹಿಂದೂ ಧಾರ್ಮಿಕ ಮುಖಂಡ ಚಿನ್ಮಯ್ ಬಂಧನದ ಮಾಹಿತಿಯನ್ನು ಕೇಂದ್ರ ಸರಕಾರ ಖಚಿತಪಡಿಸಿದೆ.

ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರಕಾರ ದೇಶದ್ರೋಹದ ಆಪಾದನೆ ಮೇಲೆ ಚಿನ್ಮಯ್ ಕೃಷ್ಣದಾಸ್ ಪ್ರಭು ಅವರನ್ನು ಬಂಧಿಸಿದೆ, ಎಂದು ವಾರ್ತಾ ಹಾಗೂ ಪ್ರಸಾರ ಸಚಿವಾಲಯದ ಹಿರಿಯ ಸಲಹೆಗಾರ್ತಿ ಕಾಂಚನ್ ಗುಪ್ತಾ ಮಾಹಿತಿ ನೀಡಿದ್ದಾರೆ.

**ಜಾಮೀನು ನಿರಾಕರಣೆ:** ಬಂಧನದ ನಂತರ ಸ್ವಾಮೀಜಿ ಯವರನ್ನು ಚಿತ್ತಗಾಂಗ್ ಜಿಲ್ಲೆಯ ನ್ಯಾಯಾಲಯದ ಮುಂದೆ ಅವರನ್ನು ಹಾಜರುಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಸ್ವಾಮೀಜಿ ಪರ ವಕೀಲರು, ಸ್ವಾಮೀಜಿಯವರ ಜಾಮೀನಿಗಾಗಿ ನ್ಯಾಯಾಧೀಶರಿಗೆ ಅರ್ಜಿ ಸಲ್ಲಿಸಿದ್ದರು. ಆದರೆ, ಅವರ ಅರ್ಜಿಯನ್ನು ನ್ಯಾಯಾಧೀಶರು ತಿರಸ್ಕರಿಸಿದ್ದಾರೆ.

### ಸ್ವಾಮೀಜಿ ಬಂಧನದ ನಂತರ ಉಗ್ರ ಹೋರಾಟ

**ಸ್ವಾಮೀಜಿಯವರ ಬಂಧನವಾಗುತ್ತಲೇ ಹಿಂದೂಗಳ ಮೇಲಿನ ದೌರ್ಜನ್ಯ ಖಂಡಿಸಿ ನಡೆಸಲಾಗುತ್ತಿದ್ದ ಹೋರಾಟ ಉಗ್ರ ಸ್ವರೂಪ ಪಡೆದುಕೊಂಡಿದೆ. ಢಾಕಾ ಹಾಗೂ ಮತ್ತಿತರ ಕಡೆಗಳಲ್ಲಿ ಭಾರೀ ಪ್ರತಿಭಟನೆಗಳು ನಡೆಯುತ್ತಿವೆ. ಕೆಲವು ಕಡೆ ಪ್ರತಿಭಟನೆಗಳು ಹಿಂಸಾಚಾರಕ್ಕೂ ತಿರುಗಿದ್ದು ಅದರಲ್ಲಿ ಏಳು ಮಂದಿ ಗಾಯಗೊಂಡಿದ್ದಾರೆ. ಈ ಎಲ್ಲಾ ಘಟನೆಗಳ ಬೆನ್ನಲ್ಲೇ, ಬಾಂಗ್ಲಾದೇಶದಲ್ಲಿರುವ ಇಸ್ಕಾನ್ ಘಟಕವು, ಸ್ವಾಮೀಜಿಯವರ ಬಂಧನ ವಿಚಾರದಲ್ಲಿ ಭಾರತ ಸರ್ಕಾರ ಮಧ್ಯಪ್ರವೇಶಿಸಬೇಕೆಂದು ಆಗ್ರಹಿಸಿದೆ.**

**ಬಾಂಗ್ಲಾದೇಶದಲ್ಲಿ ಇಸ್ಕಾನ್ ಸ್ವಾಮೀಜಿ ಚಿನ್ಮಯ್ ಪ್ರಭು ಅವರನ್ನು ಅಲ್ಲಿನ ಆಡಳಿತ ಬಂಧಿಸಿದೆ. ಬಾಂಗ್ಲಾದೇಶದಲ್ಲಿ ಇತ್ತೀಚೆಗೆ ಹಿಂದೂಗಳ ಮೇಲೆ ಹೆಚ್ಚುತ್ತಿರುವ ದೌರ್ಜನ್ಯಗಳ ವಿರುದ್ಧ ಸಿಡಿದೆದ್ದಿದ್ದ ಸ್ವಾಮೀಜಿ ಅಲ್ಲಿ ಬೀದಿಗಿಳಿದು ಹೋರಾಟ ಮಾಡಿದ್ದರು. ರಂಗ್‌ಪುರದಲ್ಲಿ ನ.22 ರಂದು ಚಿನ್ಮಯ್ ಪ್ರಭು ನೇತೃತ್ವದಲ್ಲಿಪ್ರತಿಭಟನಾ ರ್‍ಯಾಲಿಯಲ್ಲಿ ಭಾಗವಧ್ವಜ ಹಾರಿಸಲಾಗಿತ್ತು.**

## ಮಿನಿ ನ್ಯೂಸ್

### ಕಾವೇರಿ ಮುಖಜ ಭೂಮಿಯಲ್ಲಿ ರಾತ್ರಿಯಿಡೀ ಭಾರಿ ಮಳೆ

**ಚೆನ್ನೈ:** ತಮಿಳುನಾಡಿನ ಕಾವೇರಿ ನದಿ ಮುಖಜ ಭೂಮಿಯಲ್ಲಿ ರಾತ್ರಿಯಿಡೀ ಮಳೆ ಮುಂದುವರಿದಿದ್ದು, ಬೆಳೆದು ನಿಂತಿರುವ ಭತ್ತದ ಬೆಳೆಗಳ ಮೇಲೆ ಪರಿಣಾಮ ಬೀರುತ್ತಿದೆ. ಕಡಲೂರು ಮತ್ತು ಮೈಲಾಡುತುರೈ ಜಿಲ್ಲೆಗಳಲ್ಲಿ ಕೆಲವೆಡೆ ಭಾರಿ ಮತ್ತು ಅತಿ ಹೆಚ್ಚು ಮತ್ತು ಅತಿ ಹೆಚ್ಚು ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಬುಧವಾರ ತಿಳಿಸಿದೆ. ತಿರುವರೂರು, ತಿರುತುರೈಪೂಂಡಿ, ಮುತ್ತುಪೆಟ್ಟೈ, ಮೈಲ್ದುತುರೈ, ವೇದಾರಣ್ಯಂ ಸೇರಿದಂತೆ ಹಲವಾರು ಸ್ಥಳಗಳಲ್ಲಿ ಮಳೆಯಿಂದ ಭಾಗಶಃ ಮತ್ತು ಸಂಪೂರ್ಣವಾಗಿ ಬೆಳೆಗಳು ಮುಳುಗಡೆಯಾಗಿದ್ದು, ರೈತರ ಸ್ಥೂಲ ಅಂದಾಜಿನ ಪ್ರಕಾರ ಕನಿಷ್ಠ 2,000 ಎಕರೆಗೂ ಹೆಚ್ಚು ಬೆಳೆ ಹಾನಿಯಾಗಿದೆ.

ಮಳೆಯ ಹಿನ್ನೆಲೆಯಲ್ಲಿ ನವೆಂಬರ್ 27 ರಂದು ತಿರುವರೂರ್, ಕಡಲೂರು, ನಾಗಪಟ್ಟಣಂ ಮತ್ತು ಮೈಲಾಡುತುರೈ ಜಿಲ್ಲೆಗಳು ಸೇರಿದಂತೆ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಚೆನ್ನೈ, ಚೆಂಗಲ್‌ಪೇಟ್, ಅರಿಯಲೂರು, ಕಾಂಚೀಪುರಂನಲ್ಲಿ ಶಾಲೆಗಳಿಗೆ ಮಾತ್ರ ರಜೆ ಘೋಷಿಸಲಾಗಿದೆ. ಬುಧವಾರ ಬೆಳಿಗಿನ ಪ್ರಾದೇಶಿಕ ಹವಾಮಾನ ಕೇಂದ್ರದ ನವೀಕರಣದ ಪ್ರಕಾರ, ನೈಋತ್ಯ ಬಂಗಾಳ ಕೊಲ್ಲಿಯ ಮೇಲಿನ ಆಳವಾದ ಖಿನ್ನತೆಯು ಗಂಟೆಗೆ 10 ಕಿಮೀ ವೇಗದಲ್ಲಿ ಸುಮಾರು ಉತ್ತರದ ಕಡೆಗೆ ಚಲಿಸಿತು ಮತ್ತು ನಾಗಪಟ್ಟಣಂನ ಆಗ್ನೇಯಕ್ಕೆ 470 ಕಿಮೀ ಮತ್ತು ಚೆನ್ನೈನಿಂದ 670 ಕಿಮೀ ದಕ್ಷಿಣ-ಆಗ್ನೇಯಕ್ಕೆ ಕೇಂದ್ರೀಕತವಾಗಿದೆ. ಆಳವಾದ ಖಿನ್ನತೆಯು ಬುಧವಾರ ಚಂಡಮಾರುತವಾಗಿ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆಯಿದೆ ಮತ್ತು ಕೆಲವು ಸ್ಥಳಗಳಲ್ಲಿ ಭಾರೀ ಮಳೆಯಿಂದ ಅತಿ ಹೆಚ್ಚು ಮಳೆಯಾಗುವ ಸಾಧ್ಯತೆಯಿದೆ ಮತ್ತು ಕಡಲೂರು ಮತ್ತು ಮೈಲಾಡುತುರೈ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಅತ್ಯಂತ ಭಾರೀ ಮಳೆಯಾಗುವ ಸಾಧ್ಯತೆಯಿದೆ.

### ಇವಿಎಂ ಮೇಲೆ ಅನುಮಾನ ವ್ಯಕ್ತಪಡಿಸಿದ ಮಹಾ ವಿಕಾಸ್ ಅಘಾಡಿ

**ಮುಂಬೈ:** ಇತ್ತೀಚಿನ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಸೋಲು ಕಂಡಿರುವ ಮಹಾ ವಿಕಾಸ್ ಅಘಾಡಿ ಅಭ್ಯರ್ಥಿಗಳು ತಮ್ಮ ವಿಭಾಗಗಳಲ್ಲಿರುವ ಇವಿಎಂ-ವೋಟರ್ ವೆರಿಫೈಬಲ್ ಪೇಪರ್ ಆಡಿಟ್ ಟ್ರೇಲ್ಸ್ ಘಟಕಗಳ ಪರಿಶೀಲನೆ ನಡೆಸಲು ನಿರ್ಧರಿಸಿದ್ದಾರೆ ಎಂದು ವಿರೋಧ ಪಕ್ಷದ ನಾಯಕರೊಬ್ಬರು ತಿಳಿಸಿದ್ದಾರೆ. ಪಕ್ಷದ ಮುಖ್ಯಸ್ಥ ಉದ್ಧವ್ ಠಾಕ್ರೆ ಅವರೊಂದಿಗಿನ ಸಂವಾದದ ಸಂದರ್ಭದಲ್ಲಿ ವಿರೋಧ ಪಕ್ಷದ ಶಿವಸೇನೆಯ ಹಲವು ಸೋತ ಅಭ್ಯರ್ಥಿಗಳು ವಿದ್ಯುನ್ಮಾನ ಮತಯಂತ್ರಗಳ ಕಾರ್ಯನಿರ್ವಹಣೆಯತ್ತ ಆತಂಕ ವ್ಯಕ್ತಪಡಿಸಿದ್ದಾರೆ. ಮುಂಬೈನ ತಮ ನಿವಾಸದಲ್ಲಿ ನಡೆದ ಸಭೆಯಲ್ಲಿ ಠಾಕ್ರೆ ಅವರು ತಮ ಪಕ್ಷದ ನೀರಸ ಪ್ರದರ್ಶನದ ಬಗ್ಗೆ ಅವಲೋಕಿಸಿದರು. ಕಳೆದ ವಾರ ನಡೆದ ಚುನಾವಣಾ ತೀರ್ಪು ಶಿವಸೇನೆ, ಬಿಜೆಪಿ ಮತ್ತು ಎನ್‌ಸಿಪಿ ಒಳಗೊಂಡಿರುವ ಮಹಾಯುತಿ ಒಕ್ಕೂಟವು ಬಹತ್ ಜನಾದೇಶದೊಂದಿಗೆ ಅಧಿಕಾರವನ್ನು ಉಳಿಸಿಕೊಂಡಿದೆ, ಮಹಾ ವಿಕಾಸ್ ಅಘಾಡಿಹೀನಾಯ ಸೋಲು ಕಂಡಿದೆ. 288 ಸದಸ್ಯರ ಸದನದಲ್ಲಿ ಮಹಾಯುತಿ 230 ಸ್ಥಾನಗಳನ್ನು ಮತ್ತು ಎಂವಿಎ ಕೇವಲ 46 ಸ್ಥಾನಗಳನ್ನು ಗೆದ್ದಿದೆ.

ಠಾಕ್ರೆ ನೇತತ್ವದ ಸೇನೆ 20 ಸ್ಥಾನಗಳನ್ನು ಗೆಲ್ಲುವ ಮೂಲಕ ವಿರೋಧ ಪಾಳಯದಲ್ಲಿ ಅತಿದೊಡ್ಡ ಪಕ್ಷವಾಗಿ ಹೊರಹೊಮಿದೆ, ನಂತರ ಕಾಂಗ್ರೆಸ್ 16 ಕ್ಷೇತ್ರಗಳನ್ನು ಗೆದ್ದುಕೊಂಡಿತು, ಆದರೆ ಎನ್‌ಸಿಪಿ 10 ಸ್ಥಾನಗಳೊಂದಿಗೆ ಕೊನೆಯ ಸ್ಥಾನದಲ್ಲಿದೆ. ಪಿಟಿಐ ಜೊತೆ ಮಾತನಾಡಿದ ಮುಂಬೈನ ಚಂಡಿವಾಲಿ ವಿಧಾನಸಭಾ ಕ್ಷೇತ್ರದಿಂದ ಚುನಾವಣೆಯಲ್ಲಿ ಪರಾಭವಗೊಂಡ ಕಾಂಗ್ರೆಸ್ ನಾಯಕ ಆರಿಫ್ ನಸೀಮ್ ಖಾನ್ ಅವರು, ಠಾಕ್ರೆ ಅವರೊಂದಿಗೆ ಚರ್ಚೆ ನಡೆಸಿ ದ್ದೇನೆ, ಇವಿಎಂಗಳನ್ನು ಟ್ಯಾಂಪರಿಂಗ್ ಮಾಡಬಹುದೆಂದು ತಮ ಪಕ್ಷದ ಕಾರ್ಯಕರ್ತರಿಂದ ದೂರುಗಳು ಬಂದಿವೆ ಎಂದು ಹೇಳಿದರು.

### ಬಿಜೆಪಿಗೆ ಸಿಎಂ ಪಟ್ಟ ಕೊಟ್ಟ ಶಿಂಧೆ ಫಡ್ನಾವೀಸ್ ಮುಂದಿನ ಮುಖ್ಯಮಂತ್ರಿ


**ಮುಂಬೈ:** ಬಿಜೆಪಿಗೆ ಮಹಾರಾಷ್ಟ್ರ ಸಿಎಂ ಸ್ಥಾನವನ್ನು ಏಕನಾಥ್ ಶಿಂಧೆ ಬಿಟ್ಟುಕೊಟ್ಟಿದ್ದಾರೆ. ಈ ನಿರ್ಧಾರದ ಬೆನ್ನಲ್ಲೇ ಮಾಜಿ ಸಿಎಂ ದೇವೇಂದ್ರ ಫಡ್ನಾವೀಸ್ ಅವರು ಮುಖ್ಯಮಂತ್ರಿ ಪಟ್ಟ ಅಲಂಕರಿಸುವುದು ಬಹುತೇಕ ಖಚಿತವಾಗಿದೆ. ಬುಧವಾರ ಸಂಜೆ ಮಹತ್ವದ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಏಕನಾಥ್ ಶಿಂಧೆ, ನಾನು ಯಾವತ್ತೂ ಮುಖ್ಯಮಂತ್ರಿ ಆಗುತ್ತೇನೆ ಎಂದುಕೊಂಡಿರಲಿಲ್ಲ. ಬಿಜೆಪಿಗೆ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ನನ್ನಸಹಕಾರ ಯಾವಾಗಲೂ ಇರುತ್ತದೆ ಎಂದರು.

ನನ್ನ ಪ್ರಕಾರ ಸಿಎಂ ಎಂದರೆ ಕಾಮನ್ ಮ್ಯಾನ್. ನಾವು ತೆಗೆದು ಕೊಂಡ ನಿರ್ಧಾರಗಳು ಇತಿಹಾಸ ಪುಟದಲ್ಲಿ ಸೇರಿವೆ. ನನಗೆ ಮೇಲೆ ಯಾರ ಸಿಟ್ಟಿಲ್ಲ. ಒಗ್ಗಟ್ಟಾಗಿ ಕೆಲಸ ಮಾಡುತ್ತೇವೆ. ನಾನು ಪ್ರಚಾರಕ್ಕಾಗಿ ಕೆಲಸ ಮಾಡಿಲ್ಲ. ಸಾಮಾನ್ಯನಂತೆ ಕೆಲಸ ಮಾಡಿದ್ದೇನೆ. ಮಹಾಯುತಿ ಒಕ್ಕೂಟ ಯಾರನ್ನೂ ಆಯ್ಕೆ ಮಾಡುತ್ತದೋ ಅವರಿಗೆ ನನ್ನ ಬೆಂಬಲ ಇರಲಿದೆ ಎಂದು ತಿಳಿಸಿದರು. ನನಗೆ ಪ್ರಧಾನಿ ಮೋದಿ ಕರೆ ಮಾಡಿದ್ದರು. ಏನೇ ಆಗಲಿ ಜೊತೆಗೆ ಇರುತ್ತೇನೆ ಎಂದು ಹೇಳಿದ್ದೇನೆ. ನೀವು ತೆಗೆದುಕೊಳ್ಳುವ ನಿರ್ಧಾರಕ್ಕೆ ನಾನು ಬದ್ಧ. ಮೋದಿ ಅವರು ಕೈಗೊಳ್ಳುವ ನಿರ್ಧಾರಗಳೇ ಅಂತಿಮ ಎಂದು ಹೇಳಿದರು.

### ಇವಿಎಂ ಬೇಡ, ಬ್ಯಾಲೆಟ್ ಪೇಪರ್ ಬೇಕು ಮಹಾಸೋಲಿನ ಬೆನ್ನಲ್ಲೇ ಕೈಬೇಡಿಕೆ

**ನವದೆಹಲಿ:** ಮಹಾರಾಷ್ಟ್ರ ಚುನಾವಣೆಯಲ್ಲಿ ಬಿಜೆಪಿಗೆ ದಕ್ಕಿದ ಪ್ರಚಂಡ ಗೆಲುವಿನ ಬೆನ್ನಲ್ಲೇ ಕಾಂಗ್ರೆಸ್ ಇದೀಗ ಇವಿಎಂ ವಿರುದ್ಧವೇ ಚಳವಳಿಗೆ ಪ್ಲಾನ್ ಮಾಡುತ್ತಿದೆ. ಚುನಾವಣೆಗೆ ಮತಯಂತ್ರ ಬೇಡ. ಬ್ಯಾಲೆಟ್ ಪೇಪರ್ ಬೇಕು ಎಂಬ ಬೇಡಿಕೆಯನ್ನು ಕಾಂಗ್ರೆಸ್ ಪಕ್ಷ ಇರಿಸಿದೆ. ದೆಹಲಿಯಲ್ಲಿ ಹಮ್ಮಿಕೊಂಡಿದ್ದ ಸಂವಿಧಾನ್ ರಕ್ಷಕ್ ಅಭಿಯಾನದಲ್ಲಿ ಮಾತಾಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಚುನಾವಣೆಯಲ್ಲಿ ಮತ್ತೆ ಬ್ಯಾಲೆಟ್ ಪೇಪರ್ ಪದ್ಧತಿ ಮರು ಜಾರಿಗಾಗಿ ಮತ್ತೆ ಭಾರತ್ ಜೋಡೋ ಯಾತ್ರೆ ಮಾದರಿಯ ಚಳವಳಿಗೆ ಮುಂದಾಗಬೇಕು ಎಂದು ಕರೆ ನೀಡಿದ್ದಾರೆ. ಎಸ್‌ಸಿ, ಎಸ್‌ಟಿ, ಒಬಿಸಿ ಬಡ ಸಮುದಾಯಗಳ ಜನರ ಮತಗಳು ವ್ಯರ್ಥವಾಗುತ್ತಿವೆ. ಇವಿಎಂಗಳನ್ನು ಪಕ್ಕಕ್ಕೆ ಇರಿಸಿ. ನಮಗೆ ಇವಿಎಂ ಬೇಡ, ಬ್ಯಾಲೆಟ್ ಪೇಪರ್‌ನಲ್ಲಿ ಮತದಾನ ಬೇಕು.

ಪ್ರಧಾನಿ ಮೋದಿ, ಅಮಿತ್ ಶಾ ಅವರ ಮನೆಯಲ್ಲಿ ಇವಿಎಂ ಯಂತ್ರವನ್ನು ಇಡಲಿ. ಅಹಮದಾಬಾದ್‌ನಲ್ಲಿ ಸಾಕಷ್ಟು ಗೋದಾಮುಗಳಿದ್ದರೆ ಅವರು ಅಲ್ಲಿ ಯಂತ್ರಗಳನ್ನು ಇಡಲಿ ಎಂದು ವಾಗ್ದಾಳಿ ನಡೆಸಿದರು. ನಮ್ಮ ಪಕ್ಷವು ಇತರ ಎಲ್ಲಾ ಪಕ್ಷಗಳು ಸೇರಿದಂತೆ ಎಲ್ಲರಿಗೂ ಪ್ರಚಾರವನ್ನು ಪ್ರಾರಂಭಿಸಬೇಕು. ರಾಹುಲ್ ಗಾಂಧಿಯವರ ನೇತೃತ್ವದಲ್ಲಿ ಬ್ಯಾಲೆಟ್ ಪೇಪರ್ ಪದ್ಧತಿ ಮರು ಜಾರಿಗಾಗಿ ನಾವು ಭಾರತ್ ಜೋಡೋ ಯಾತ್ರೆಯಂತಹ ಚಳುವಳಿ ಯನ್ನು ಪ್ರಾರಂಭಿಸಬೇಕು ಎಂದು ಹೇಳಿದರು. ಖರ್ಗೆಯವರ ಈ ಮಾತು ಈಗ ಭಾರೀ ಚರ್ಚೆಗೆ ಗ್ರಾಸವಾಗಿದೆ.



# ಬಾ ಭಾವಿ ಪತಿ ಜೊತೆ ಚಂದನಾ ಭರ್ಜರಿ ಡ್ಯಾನ್ಸ್

ಲಕ್ಷ್ಮಿ ನಿವಾಸ'ದ ನಟಿ ಚಂದನಾ ಅನಂತಕೃಷ್ಣ ನ.28ರಂದು ಉದ್ಯಮಿ ಪ್ರತ್ಯಕ್ಷ್ ಜೊತೆ ಹಸೆಮಣೆ ಏರೋಕೆ ರೆಡಿಯಾಗಿದ್ದಾರೆ. ಸದ್ಯ ಮೆಹೆಂದಿ ಶಾಸ್ತ್ರ, ಸಂಗೀತ ಕಾರ್ಯಕ್ರಮವು ಅದ್ದೂರಿಯಾಗಿ ಜರುಗಿದ್ದು, ಭಾವಿ ಪತಿ ಜೊತೆ 'ಬಾರೇ ಬಾರೇ ಕಲ್ಯಾಣ ಮಂಟಪಕೆ ಬಾ' ಎಂದು ನಟಿ ಭರ್ಜರಿಯಾಗಿ ಹೆಜ್ಜೆ ಹಾಕಿದ್ದಾರೆ.

ಬೆಂಗಳೂರಿನಲ್ಲಿ ಮೆಹಂದಿ ಶಾಸ್ತ್ರ, ಸಂಗೀತ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿದ್ದು, ಕ್ಯೂಟ್ ಜೋಡಿ ಚಂದನಾ ಮತ್ತು ಪ್ರತ್ಯಕ್ಷ್ 'ಬಾರೇ ಬಾರೇ ಕಲ್ಯಾಣ ಮಂಟಪಕ್ಕೆ ಬಾ' ಅಂತ ಹೆಜ್ಜೆ ಹಾಕಿ ಸಂಭ್ರಮಿಸಿದೆ. ಅಪ್ಪು ಸಿನಿಮಾದ ಹಾಡಿಗೆ ಡ್ಯಾನ್ಸ್ ಮಾಡಿ ಖುಷಿಪಟ್ಟಿದ್ದಾರೆ. ಈ ಸಂಭ್ರಮದಲ್ಲಿ 'ಲಕ್ಷ್ಮಿ ನಿವಾಸ' ಸೀರಿಯಲ್ ತಂಡ ಕೂಡ ಜೊತೆಯಾಗಿದೆ. ಮಾನಸಾ ದಂಪತಿ, ದಿಶಾ ಮದನ್ ದಂಪತಿ, ನಟ ಮಧು, ಕ್ಲೋಸ್ ಫ್ರೆಂಡ್ ನಯನಾ ದಂಪತಿ ಸೇರಿದಂತೆ ಕಿರುತೆರೆಯ ಕಲಾವಿದರು ಆತ್ಮೀಯರು ಭಾಗಿಯಾಗಿದರು. ಇನ್ನೂ ನ.28ರಂದು ಉದ್ಯಮಿ ಪ್ರತ್ಯಕ್ಷ್ ಜೊತೆ ಪ್ಯಾಲೇಸ್ ಗ್ರೌಂಡ್‌ನಲ್ಲಿ ನಟಿ ಮದುವೆಯಾಗಲಿದ್ದಾರೆ. ಈ ಮದುವೆಗೆ ಬಿಗ್ ಬಾಸ್ ಮನೆಯ ಮಾಜಿ ಸ್ಪರ್ಧಿಗಳು, ಕಿರುತೆರೆಯ ಕಲಾವಿದರು ಭಾಗಿಯಾಗಲಿದ್ದಾರೆ. ಪ್ರತ್ಯಕ್ಷ್ ಅವರು ಉದ್ಯಮಿಯಾಗಿದ್ದಾರೆ. ವಿಶೇಷ ಅಂದರೆ, ಪ್ರತ್ಯಕ್ಷ್ ಪೋಷಕರು ಕೂಡ ಚಿತ್ರರಂಗದಲ್ಲಿ ಗುರುತಿಸಿಕೊಂಡಿದ್ದಾರೆ. ದಿವಂಗತ ಉದಯ್ ಹುತ್ತಿನಗದ್ದೆ ಅವರು ಡಾ.ರಾಜ್‌ಕುಮಾರ್ ಜೊತೆ ದೇವತಾ ಮನುಷ್ಯ ಚಿತ್ರದಲ್ಲಿ ನಟಿಸಿದ್ದರು. ಆರಂಭ, ಅಗ್ನಿಪರ್ವ, ಶುಭ ಮಿಲನ ಸೇರಿದಂತೆ ಹಲವು ಸಿನಿಮಾಗಳಲ್ಲಿ ಅವರು ನಟಿಸಿದರು.

ಅವರ ಪತ್ನಿ ಲಲಿತಾಂಜಲಿ ಉದಯ್ ಕೂಡ ಹಿರಿತೆರೆ, ಕಿರುತೆರೆಯಲ್ಲಿ ಸಕ್ರಿಯರಾಗಿದ್ದಾರೆ.

ಇನ್ನೂ ರಾಜ ರಾಣಿ, ಹೂ ಮಳೆ, ಬಿಗ್ ಬಾಸ್ ಕನ್ನಡ ಸೀಸನ್ 7 ಶೋ ಸೇರಿದಂತೆ ಹಲವು ಪ್ರಾಜೆಕ್ಟ್‌ಗಳಲ್ಲಿ ಚಂದನಾ ಕಾಣಿಸಿಕೊಂಡಿದ್ದಾರೆ.




# ಪುಷ್ಪ 3 ಬಗ್ಗೆ ರಶ್ಮಿಕಾ ಮಂದಣ್ಣ ಹಿಂಟ್

ಕೊಡಗಿನ ಬ್ಯೂಟಿ ರಶ್ಮಿಕಾ ಮಂದಣ್ಣ ಸದ್ಯ 'ಪುಷ್ಪ 2' ಸಿನಿಮಾ ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಇದೀಗ ಸೋಶಿಯಲ್ ಮೀಡಿಯಾದಲ್ಲಿ 'ಪುಷ್ಪ' ಸಿನಿಮಾದ ಜರ್ನಿ ನೆನೆದು ಭಾವುಕರಾಗಿದ್ದಾರೆ. 'ಪುಷ್ಪ' ಪಾರ್ಟ್ 3 ಬಗ್ಗೆ ಹಿಂಟ್ ಕೊಟ್ಟಿರೋದಲ್ಲದೇ, 5 ವರ್ಷಗಳ ಈ ಚಿತ್ರದ ಜರ್ನಿ ಕೊನೆ ಆಗಿದೆ. ಎಂಥ ಅದ್ಭುತ ಜರ್ನಿ ಎಂದು ನಟಿ ಎಮೋಷನಲ್ ಆಗಿದ್ದಾರೆ. ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ 'ಪುಷ್ಪ 2' ಸಿನಿಮಾ ಬಗ್ಗೆ ಸ್ಪೆಷಲ್ ನೋಟ್ ಬರೆದಿದ್ದಾರೆ.

ನ.25ರಂದು ಪುಷ್ಪ 2 ಚಿತ್ರ ಸಂಪೂರ್ಣ ಆಗಿದೆ ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ. ಕೆರಿಯರ್‌ನ ಏಳೆಂಟು ವರ್ಷದಲ್ಲಿ ಕಳೆದ 5 ವರ್ಷ 'ಪುಷ್ಪ 2' ಸೆಟ್ ನನ್ನ ಮನೆಯಾಗಿತ್ತು. ಅಂತೂ ಇದು ನನ್ನ ಕೊನೆಯ ದಿನ. ಪಾರ್ಟ್ 3 ಸಂಬಂಧಿಸಿ ಇನ್ನೂ ಬಹಳಷ್ಟು ಕೆಲಸ ಬಾಕಿ ಇದೆ. ಆದರೂ ನನಗೆ ಇದು ವಿಶೇಷವಾಗಿ ಅನಿಸುತ್ತಿದೆ. ಇದು ಕೊನೆಯಾಗುತ್ತಿದೆ ಎನ್ನುವ ಭಾವನೆ ಬಂದಿದೆ ಎಂದು ರಶ್ಮಿಕಾ ಬರೆದುಕೊಂಡಿದ್ದಾರೆ. ಈ ಮೂಲಕ ಪಾರ್ಟ್ -3 ಬರೋದು ಸ್ಪಷ್ಟವಾಗಿದೆ. ನನಗೂ ಅರ್ಥವಾಗದಂತಹ ನೋವು ನನ್ನನ್ನು ಕಾಡುತ್ತಿದೆ. ಎಲ್ಲಾ ಭಾವನೆಗಳು ಈಗ ಒಟ್ಟಾಗಿವೆ. ತುಂಬಾ ಕಷ್ಟಪಟ್ಟು ಕೆಲಸ ಮಾಡಿದ ದಿನಗಳು ನೆನಪಾಗುತ್ತಿವೆ. ಆ ದಿನಗಳಲ್ಲಿ ನಾನು ತುಂಬಾ ದಣಿದಿದ್ದೆ. ಈಗ ಎಲ್ಲಾ ನೆನಪಿಸಿಕೊಂಡರೆ ಎಲ್ಲಾ ಅದ್ಭುತ ಎನಿಸುತ್ತಿದೆ ಎಂದಿದ್ದಾರೆ. ನಿರ್ದೇಶಕ ಸುಕುಮಾರ್, ಅಲ್ಲು ಅರ್ಜುನ್ ಮತ್ತು ಇಡೀ ತಂಡಕ್ಕೆ ನಟಿ ಧನ್ಯವಾದ ತಿಳಿಸಿದ್ದಾರೆ. ನಟಿಯ ಪೋಸ್ಟ್ ಎಲ್ಲೆಡೆ ವೈರಲ್ ಆಗುತ್ತಿದೆ. ಅಂದಹಾಗೆ, ಇತ್ತೀಚೆಗೆ 'ಪುಷ್ಪ 3' ಬರೋದಾಗಿ ಚಿತ್ರದ ನಿರ್ಮಾಪಕ ಸುಳಿವು ನೀಡಿದ್ದರು. ರಶ್ಮಿಕಾ ಪೋಸ್ಟ್‌ನಿಂದ ಮತ್ತೊಮ್ಮೆ ಅಧಿಕೃತ ಮಾಹಿತಿ ಸಿಕ್ಕಿದೆ. ಇದು ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ಪುಷ್ಪರಾಜ್ ಅಲ್ಲು ಅರ್ಜುನ್‌ಗೆ ನಾಯಕಿಯಾಗಿ ಶ್ರೀವಲ್ಲಿ ಪಾತ್ರಕ್ಕೆ ರಶ್ಮಿಕಾ ಜೀವತುಂಬಿದ್ದರು. ಇದೇ ಡಿ.5ಕ್ಕೆ 'ಪುಷ್ಪ 2' ಸಿನಿಮಾ ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ. ಶ್ರೀಲೀಲಾ 'ಕಿಸ್ಸಿಕ್' ಸಿನಿಮಾದಲ್ಲಿನ ಮತ್ತೊಂದು ಹೈಲೆಟ್ ಆಗಿದ್ದು, ಚಿತ್ರಕ್ಕಾಗಿ ಅಭಿಮಾನಿಗಳು ಎದುರು ನೋಡುತ್ತಿದ್ದಾರೆ.


**5 ವರ್ಷಗಳ ಜರ್ನಿ ನೆನೆದು ನಟಿ ಎಮೋಷನಲ್**



# ಡಿ.25ಕ್ಕೆ ಮ್ಯಾಕ್ಸ್ ರಿಲೀಸ್‌ಗೆ ಮುಹೂರ್ತ ಫಿಕ್ಸ್

ಕನ್ನಡದ ಸ್ಟಾರ್ ನಟ ಕಿಚ್ಚ ಸುದೀಪ್ ನಟನೆಯ 'ಮ್ಯಾಕ್ಸ್' ಸಿನಿಮಾದ ರಿಲೀಸ್ ಡೇಟ್ ಅನೌನ್ಸ್ ಆಗಿದೆ. ಅಂತೂ ಇಂತೂ ಕಿಚ್ಚನ ಅಭಿಮಾನಿಗಳ ಕಾತರಕ್ಕೆ ಉತ್ತರ ಸಿಕ್ಕಿದೆ. ಇದೇ ಡಿಸೆಂಬರ್ 25ಕ್ಕೆ ಮ್ಯಾಕ್ಸ್ ಅಬ್ಬರ ಶುರುವಾಗಲಿದೆ. ಕಾರಣಾಂತಗಳಿಂದ 'ಮ್ಯಾಕ್ಸ್' ಸಿನಿಮಾದ ರಿಲೀಸ್‌ಗೆ ತಡವಾಗಿತ್ತು. ಇದೀಗ ಸುದೀಪ್ ಫ್ಯಾನ್ಸ್ ಚಿತ್ರತಂಡ ಸಿಹಿಸುದ್ದಿ ಕೊಟ್ಟಿದೆ. ಇದೇ ಡಿಸೆಂಬರ್ 25ಕ್ಕೆ ಮ್ಯಾಕ್ಸ್ ಚಿತ್ರ ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ. ಕ್ರಿಸ್‌ಮಸ್ ಹಬ್ಬದ ವೇಳೆ, ಥಿಯೇಟರ್‌ಗೆ ಸಿನಿಮಾ ಲಗ್ಗೆ ಇಡುತ್ತಿದೆ. ಈ ಚಿತ್ರದಲ್ಲಿ ಸುದೀಪ್ ಜೊತೆ ಬಿಗ್ ಬಾಸ್ ಉಗ್ರಂ ಮಂಜು, ಸಂಯುಕ್ತಾ ಹೊರನಾಡ್, ಸುಕೃತಾ ವಾಗ್ಲೆ, ವರಲಕ್ಷ್ಮಿ ಶರತ್ ಕುಮಾರ್ ಸೇರಿದಂತೆ ಅನೇಕರು ನಟಿಸಿದ್ದಾರೆ. ಈ ಚಿತ್ರವನ್ನು ವಿಜಯ್ ಕಾರ್ತಿಕೇಯ ನಿರ್ದೇಶನ ಮಾಡಿದ್ದಾರೆ.

# 47ನೇ ವಯಸ್ಸಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟ ಬಾಹುಬಲಿ ನಟ ಸುಬ್ಬರಾಜು



ಬಾಹುಬಲಿ' ಖ್ಯಾತಿಯ ನಟ ಸುಬ್ಬರಾಜು ಅವರು 47ನೇ ವಯಸ್ಸಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ಮದುವೆಯಾಗಿರುವ ಮಾಹಿತಿಯನ್ನು ನಟ ಹಂಚಿಕೊಂಡಿದ್ದಾರೆ. ಪತ್ನಿ ಜೊತೆ ಬೀಚ್ ಬಳಿ ವಧು- ವರರ ಕ್ಯಾಸ್ಟೂಮ್‌ನಲ್ಲಿ ನಿಂತಿರುವ ಫೋಟೋ ಶೇರ್ ಮಾಡಿ, 'ಕೊನೆಗೂ ಮದುವೆಯಾದೆ' ಎಂದು ಕ್ಯಾಪ್ಷನ್ ನೀಡಿದ್ದಾರೆ. ತೆಲುಗು ಪದ್ಧತಿಯಂತೆ ಈ ಮದುವೆ ಜರುಗಿದೆ. ಹೊಸ ಜೋಡಿಗೆ ಅಭಿಮಾನಿಗಳು ಸೋಶಿಯಲ್ ಮೀಡಿಯಾದಲ್ಲಿ ಶುಭಕೋರಿದ್ದಾರೆ. ಇನ್ನೂ ಹಲವು ಸಿನಿಮಾದಲ್ಲಿ ಸುಬ್ಬರಾಜು ಅವರು ಖಳನಟನ ಪಾತ್ರದಲ್ಲಿ ಮಿಂಚಿದ್ದಾರೆ. ಮಿರ್ಚಿ, ಪೋಕರಿ, ಬಾಹುಬಲಿ, ಕುಮಾರವರ್ಮಾ ಸೇರಿದಂತೆ ಹಲವು ಚಿತ್ರಗಳಲ್ಲಿ ಅವರು ನಟಿಸಿದ್ದಾರೆ. ಕನ್ನಡದ ಗಜ, ನಮ್ಮಣ್ಣ, ಸತ್ಯ ಇನ್ ಲವ್, ಸಂಚಾರಿ ಸೇರಿದಂತೆ ಹಲವು ಸಿನಿಮಾಗಳಲ್ಲಿ ಸುಬ್ಬರಾಜು ನಟಿಸಿದ್ದಾರೆ.



# ಬಾಲಿವುಡ್ ನೆಪೋಟಿಸಂ ಬಗ್ಗೆ ಕೃತಿ ಸನೋನ್ ಶಾಕಿಂಗ್ ಕಾಮೆಂಟ್

ಬಾಲಿವುಡ್‌ನ ಪರಮ ಸುಂದರಿ ಕೃತಿ ಸನೋನ್‌ಗೆಬೇಡಿಕೆಯಿದೆ. ಸಾಲು ಸಾಲು ಸಿನಿಮಾಗಳಲ್ಲಿ ಅವರು ತೊಡಗಿಸಿಕೊಂಡಿದ್ದಾರೆ. ಇದೀಗ ಸಂದರ್ಶನವೊಂದರಲ್ಲಿ ನಟಿ ಚಿತ್ರರಂಗದ ನೆಪೋಟಿಸಂ ಬಗ್ಗೆ ಶಾಕಿಂಗ್ ಕಾಮೆಂಟ್ ವೊಂದನ್ನು ಮಾಡಿದ್ದಾರೆ. ನೆಪೋಟಿಸಂ ಬೆಳೆಯಲು ಪ್ರೇಕ್ಷಕರೇ ಕಾರಣ ಎಂದಿದ್ದಾರೆ.ರಾಷ್ಟ್ರಪ್ರಶಸ್ತಿ ವಿಜೇತ ನಟಿ ಕೃತಿ ಸನೋನ್ ನೆಪೋ ಕಿಡ್ ಅಲ್ಲ. ಅವರಿಗೆ ಚಿತ್ರರಂಗದ ಹಿನ್ನೆಲೆ ಇಲ್ಲದೇ ಇದ್ದರೂ, ತಮ್ಮ ಟ್ಯಾಲೆಂಟ್‌ನಿಂದ ಸಕ್ಸಸ್ ಕಂಡಿದ್ದಾರೆ. ನೆಪೋಟಿಸಂಗೆ ಚಿತ್ರರಂಗ ಮಾತ್ರ ಜವಾಬ್ದಾರಿ ಅಲ್ಲ, ಪ್ರೇಕ್ಷಕರು ಕೂಡ ಆಗಿದ್ದಾರೆ.

ಕೆಲವು ಸ್ಟಾರ್ ಕಿಡ್‌ಗಳ ಬಗ್ಗೆ ಮಾಧ್ಯಮಗಳು ಏನು ತೋರಿಸುತ್ತವೆಯೋ ಅದನ್ನು ಪ್ರೇಕ್ಷಕರು ನೋಡಲು ಬಯಸುತ್ತಾರೆ. ಅವರ ಆಸಕ್ತಿ, ಅಭಿರುಚಿಯಂತೆ ಸಿನಿಮಾ ಮಾಡಲು ಚಿತ್ರರಂಗ ಬಯಸುತ್ತದೆ ಎಂದಿದ್ದಾರೆ. ಪ್ರತಿಭಾವಂತರಾಗಿದ್ದರೆ ನೀವು ನಿಮ್ಮ ಕನಸಿನ ಜಾಗಕ್ಕೆ ಬರುತ್ತೀರಿ. ಪ್ರೇಕ್ಷಕರೊಂದಿಗೆ ನೀವು ಸಂಪರ್ಕ ಹೊಂದಿಲ್ಲದಿದ್ದರೆ ಕನಸು ನನಸು ಮಾಡಿಕೊಳ್ಳುವುದು ಕಷ್ಟ ಎಂದಿದ್ದಾರೆ. ಈ ಮೂಲಕ ನೆಪೋಟಿಸಂಗೆ ಪ್ರೇಕ್ಷಕರು ಕಾರಣ ಎಂದು ನಟಿ ಮುಕ್ತವಾಗಿ ಮಾತನಾಡಿದ್ದಾರೆ.

# ಒಂದೇ ಒಂದು ಸೋಲಿಗೆ ಬೆದರಿದ ಆಸೀಸ್ ತಂಡಕ್ಕೆ ಹೊಸಬನ ಎಂಟ್ರಿ



ಕೇವಲ 4 ದಿನಗಳಲ್ಲಿ ಪರ್ತ್ ಟೆಸ್ಟ್‌ನಲ್ಲಿ ಸೋಲು ಕಂಡಿರುವ ಆತಿಥೇಯ ಆಸ್ಟ್ರೇಲಿಯಾ ತಂಡ ಅಡಿಲೇಡ್‌ನಲ್ಲಿ ನಡೆಯಲಿರುವ ಪಿಂಕ್ ಬಾಲ್ ಟೆಸ್ಟ್‌ಗೂ ಮುನ್ನ ತಂಡದಲ್ಲಿ ಮಹತ್ವದ ಬದಲಾವಣೆ ಮಾಡಿದೆ. ಅದರಂತೆ ಶತಾಯಗತಾಯ ಎರಡನೇ ಟೆಸ್ಟ್ ಪಂದ್ಯವನ್ನು ಗೆಲ್ಲಲೇಬೇಕೆಂಬ ಹಂಬಲದಲ್ಲಿರುವ ಆಸೀಸ್ ತಂಡಕ್ಕೆ ಯುವ ಆಟಗಾರನ ಆಗಮನವಾಗಿದೆ. ವಾಸ್ತವವಾಗಿ ಮೊದಲ ಟೆಸ್ಟ್ ಪಂದ್ಯದ ವೇಳೆ ತಂಡದ ಅನುಭವಿ ಆಲ್‌ರೌಂಡರ್ ಮಿಚೆಲ್ ಮಾರ್ಷ್ ಇಂಜುರಿಗೆ ತುತ್ತಾಗಿದ್ದರು. ಹೀಗಾಗಿ ಅವರು ಎರಡನೇ ಟೆಸ್ಟ್‌ನಲ್ಲಿ ಆಡುವುದು ಅನುಮಾನವಾಗಿದೆ. ಆದ್ದರಿಂದ ಮುಂಜಾಗ್ರತ ಕ್ರಮವಾಗಿ ಯುವ ಆಲ್‌ರೌಂಡರ್ ಬ್ಯೂ ವೆಬ್‌ಸ್ಟರ್ ಅವರನ್ನು ತಂಡಕ್ಕೆ ಆಯ್ಕೆ ಮಾಡಲಾಗಿದೆ. ಬ್ಯೂ ವೆಬ್‌ಸ್ಟರ್ ಅವರ ಇತ್ತೀಚಿನ ಫಾರ್ಮ್ ಮತ್ತು ಭಾರತ ಎ ವಿರುದ್ಧದ ಪಂದ್ಯದಲ್ಲಿ ಅವರ ಪ್ರದರ್ಶನವನ್ನು ಗಮನದಲ್ಲಿಟ್ಟುಕೊಂಡು ಅವರನ್ನು ತಂಡಕ್ಕೆ ಸೇರಿಸಲಾಗಿದೆ.

**ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ವೆಬ್‌ಸ್ಟರ್ ಅಬ್ಬರ:** ಬ್ಯೂ ವೆಬ್‌ಸ್ಟರ್ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ ಇದುವರೆಗೆ 12 ಶತಕಗಳೊಂದಿಗೆ 5297 ರನ್ ಗಳಿಸಿದ್ದಾರೆ. ಈ ಅವಧಿಯಲ್ಲಿ ಅವರ ಬ್ಯಾಟಿಂಗ್ ಸರಾಸರಿ 37ಕ್ಕಿಂತ ಹೆಚ್ಚಿದೆ. ಬೌಲಿಂಗ್‌ನಲ್ಲೂ ಕಮಾಲ್ ಮಾಡಿರುವ ಅವರು ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 148 ವಿಕೆಟ್‌ಗಳನ್ನು ಉರುಳಿಸಿದ್ದಾರೆ. ಇದರ ಜೊತೆಗೆ ಇತ್ತೀಚೆಗೆ ನಡೆದಿದ್ದ ಭಾರತ ಎ ವಿರುದ್ಧದ ಅಭ್ಯಾಸ ಪಂದ್ಯದಲ್ಲೂ ವೆಬ್‌ಸ್ಟರ್ ಅದ್ಭುತ ಪ್ರದರ್ಶನ ನೀಡಿದ್ದರು. ಆಡಿದ 2 ಪಂದ್ಯಗಳ 4 ಇನ್ನಿಂಗ್ಸ್‌ಗಳಲ್ಲಿ, ಅವರು ಒಂದು ಅರ್ಧಶತಕದೊಂದಿಗೆ 150 ಕ್ಕೂ ಹೆಚ್ಚು ರನ್ ಗಳಿಸಿದ್ದರು. ಜೊತೆಗೆ 7 ವಿಕೆಟ್ ಕೂಡ ಪಡೆದಿದ್ದರು.

ಬ್ಯೂ ವೆಬ್‌ಸ್ಟರ್ ಅವರು ನವೆಂಬರ್ 24 ರಿಂದ ನ್ಯೂ ಸೌತ್ ವೇಲ್ಸ್ ವಿರುದ್ಧದ ಪಂದ್ಯದಲ್ಲಿ ಅದ್ಭುತ ಪ್ರದರ್ಶನ ನೀಡಿದ್ದರು. ಈ ಪಂದ್ಯದಲ್ಲಿ, ಟ್ಯಾಸ್ಮೆನಿಯಾದ 55 ರನ್‌ಗಳ ಗೆಲುವಿನಲ್ಲಿ ವೆಬ್‌ಸ್ಟರ್ ಅವರ ಆಲ್‌ರೌಂಡರ್ ಪ್ರದರ್ಶನ ಪ್ರಮುಖ ಪಾತ್ರವಹಿಸಿತ್ತು. ವೆಬ್‌ಸ್ಟರ್ ಈ ಎರಡೂ ಇನ್ನಿಂಗ್ಸ್‌ಗಳಲ್ಲಿ 110 ರನ್ ಗಳಿಸಿದ್ದರೆ, ಬೌಲಿಂಗ್‌ಲ್ಲಿ 5 ವಿಕೆಟ್ ಪಡೆದಿದ್ದರು. ಹೀಗಾಗಿ ಅವರ ಪ್ರಸ್ತುತ ಪ್ರದರ್ಶನವನ್ನು ಪರಿಗಣಿಸಿ, ಆಸ್ಟ್ರೇಲಿಯಾ ತಂಡದ ಆಡಳಿತವು ಮಾರ್ಷ್‌ಗೆ ಪರ್ಯಾಯವಾಗಿ ಅವರನ್ನು ತಂಡಕ್ಕೆ ಸೇರಿಸಲು ನಿರ್ಧರಿಸಿದೆ.

**ಮಾರ್ಷ್‌ಗೆ ಗಾಯ:** ಪರ್ತ್ ಟೆಸ್ಟ್‌ನಲ್ಲಿ ಭಾರತ 295 ರನ್‌ಗಳ ಬೃಹತ್ ಅಂತರದಿಂದ ಆಸ್ಟ್ರೇಲಿಯಾವನ್ನು ಸೋಲಿಸಿತ್ತು. ಆ ಪಂದ್ಯದಲ್ಲಿ ಮಿಚೆಲ್ ಮಾರ್ಷ್ ಗಾಯಕೊಂಡಿದ್ದರು. ಇದರಿಂದಾಗಿ ವೆಬ್‌ಸ್ಟರ್ ಅವರನ್ನು ಬ್ಯಾಕಪ್ ಆಗಿ ತಂಡದಲ್ಲಿ ಸೇರಿಸಲಾಗಿದೆ. ಮಾರ್ಷ್ ಗಾಯದ ಮೇಲೆ ನಿರಂತರವಾಗಿ ಕಣ್ಣಿಟ್ಟಿದ್ದೇವೆ ಎಂದು ಆಸ್ಟ್ರೇಲಿಯಾ ತಂಡದ ಕೋಚ್ ಹೇಳಿದ್ದಾರೆ.

# 18 ಎಸೆತಗಳಲ್ಲಿ ಪಂದ್ಯ ಗೆದ್ದು ದಾಖಲೆ ಬರೆದ ಜಮ್ಮು ಕಾಶ್ಮೀರ

ಪ್ರಸ್ತುತ ನಡೆಯುತ್ತಿರುವ ಸೈಯದ್ ಮುಷ್ತಾಕ್ ಅಲಿ ಟ್ರೋಫಿ ಅಪರೂಪದ ಘಟನೆಗೆ ಸಾಕ್ಷಿಯಾಗಿದೆ. ನಡೆದ ಜಮ್ಮು ಮತ್ತು ಕಾಶ್ಮೀರ ಹಾಗೂ ಅರುಣಾಚಲ ಪ್ರದೇಶ ನಡುವಿನ ಪಂದ್ಯ ಸೈಯದ್ ಮುಷ್ತಾಕ್ ಅಲಿ ಟ್ರೋಫಿಯ ಅತಿದೊಡ್ಡ ಗೆಲುವಿಗೆ ಸಾಕ್ಷಿಯಾಗಿದೆ. ಅರುಣಾಚಲ ಪ್ರದೇಶ ಮತ್ತು ಜಮ್ಮು ಕಾಶ್ಮೀರ ತಂಡಗಳ ನಡುವಿನ ಈ ಪಂದ್ಯ ಮುಂಬೈನ ಶರದ್ ಪವಾರ್ ಕ್ರಿಕೆಟ್ ಅಕಾಡೆಮಿ ಬಿಕೆಸಿಯಲ್ಲಿ ನಡೆಯಿತು. ಈ ಪಂದ್ಯದಲ್ಲಿ ಜಮ್ಮು ಮತ್ತು ಕಾಶ್ಮೀರ ತಂಡ 10 ವಿಕೆಟ್‌ಗಳ ಜಯ ಸಾಧಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಅರುಣಾಚಲ ಪ್ರದೇಶ ತಂಡ ಕೇವಲ 9.1 ಓವರ್‌ಗಳಲ್ಲಿ 32 ರನ್‌ಗಳಿಗೆ ಆಲೌಟ್ ಆಯಿತು. ಈ ಇನ್ನಿಂಗ್ಸ್‌ನಲ್ಲಿ ಅರುಣಾಚಲ ಪ್ರದೇಶದ ಯಾವುದೇ ಬ್ಯಾಟ್ಸ್‌ಮನ್ ಎರಡಂಕಿ ಮುಟ್ಟಲು ಸಾಧ್ಯವಾಗಲಿಲ್ಲ ಎಂಬುದು ಇಲ್ಲಿ ವಿಶೇಷ.




**ಜಮ್ಮು ಮತ್ತು ಕಾಶ್ಮೀರ ತಂಡ 10 ವಿಕೆಟ್‌ಗಳ ಜಯ**

**ಕಡಿಮೆ ಸ್ಕೋರ್ ದಾಖಲಿಸಿದ ಎರಡನೇ ತಂಡ:** ಈ ಪಂದ್ಯದಲ್ಲಿ ಕೇವಲ 32 ರನ್‌ಗಳಿಗೆ ಆಲೌಟ್ ಆದ ಅರುಣಾಚಲ ಪ್ರದೇಶ ತಂಡ ಸೈಯದ್ ಮುಷ್ತಾಕ್ ಅಲಿ ಟ್ರೋಫಿ ಇತಿಹಾಸದಲ್ಲಿ ಅತಿ ಕಡಿಮೆ ಸ್ಕೋರ್ ದಾಖಲಿಸಿದ ಎರಡನೇ ತಂಡ ಎನಿಸಿಕೊಂಡಿದೆ. ಇದಕ್ಕೂ ಮುನ್ನ 2009ರಲ್ಲಿ ಜಾರ್ಖಂಡ್ ವಿರುದ್ಧ ತ್ರಿಪುರಾ ತಂಡ ಕೇವಲ 30 ರನ್‌ಗಳಿಗೆ ಆಲೌಟ್ ಆಗಿತ್ತು. ಅಂದರೆ ಅರುಣಾಚಲ ಪ್ರದೇಶದ ತಂಡ ದಾಖಲೆ ಮುರಿಯುವುದರಿಂದ ಸ್ವಲ್ಪದರಲ್ಲೇ ಪಾರಾಗಿದೆ. ಈ ಟೂರ್ನಿಯಲ್ಲಿ ಈ ಎರಡು ತಂಡಗಳನ್ನು ಬಿಟ್ಟರೆ ಬೇರೆ ಯಾವುದೇ ತಂಡ 40 ರನ್‌ಗಳಿಗಿಂತ ಕಡಿಮೆ ಸ್ಕೋರ್‌ಗೆ ಆಲೌಟ್ ಆಗಿಲ್ಲ.

**ಕೇವಲ 18 ಎಸೆತಗಳಲ್ಲಿ ಗೆಲುವು**

ಅರುಣಾಚಲ ಪ್ರದೇಶದ ಕಳಪೆ ಪ್ರದರ್ಶನದಿಂದಾಗಿ ಜಮ್ಮು, ಕಾಶ್ಮೀರಕ್ಕೆ ಈ ಪಂದ್ಯದಲ್ಲಿ ಗೆಲ್ಲಲು ಕೇವಲ 33 ರನ್‌ಗಳ ಗುರಿ ಸಿಕ್ಕಿತು. ಈ ಸಣ್ಣ ಗುರಿಯನ್ನು ಬೆನ್ನಟ್ಟಿದ ಜಮ್ಮು ಮತ್ತು ಕಾಶ್ಮೀರ ತಂಡ ಹೆಚ್ಚು ಸಮಯ ತೆಗೆದುಕೊಳ್ಳದೆ ಕೇವಲ 3 ಓವರ್‌ಗಳಲ್ಲಿ ಪಂದ್ಯವನ್ನು ಮುಗಿಸಿತು. ತಂಡದ ಪರ ಯುದ್ಧವೀರ್ ಸಿಂಗ್ 11 ಎಸೆತಗಳಲ್ಲಿ ಅಜೇಯ 21 ರನ್ ಗಳಿಸಿದರೆ, ಕಮ್ರಾನ್ ಇಕ್ಬಾಲ್ 10 ರನ್‌ಗಳಿಸಿ ಅಜೇಯರಾಗಿ ಉಳಿದರು. ಅಂದರೆ 102 ಎಸೆತಗಳು ಬಾಕಿ ಇರುವಂತೆಯೇ ಜಮ್ಮು ಮತ್ತು ಕಾಶ್ಮೀರ ತಂಡ ಈ ಪಂದ್ಯವನ್ನು ಗೆದ್ದುಕೊಂಡಿತು. ಇದು ಬಾಲ್‌ಗಳ ವಿಷಯದಲ್ಲಿ ಸೈಯದ್ ಮುಷ್ತಾಕ್ ಅಲಿ ಟ್ರೋಫಿಯ ಅತಿದೊಡ್ಡ ಗೆಲುವು. ಇದಕ್ಕೂ ಮುನ್ನ 2009ರಲ್ಲಿ ಜಾರ್ಖಂಡ್ ತಂಡ ತ್ರಿಪುರಾ ತಂಡವನ್ನು ಇನ್ನೂ 100 ಎಸೆತಗಳು ಬಾಕಿ ಇರುವಂತೆಯೇ ಸೋಲಿಸಿತ್ತು.

# ಬುಮ್ರಾ ಬೌಲಿಂಗ್ ಪ್ರಶ್ನಿಸಿದವರ ಮೈಚಳಿ ಬಿಡಿಸಿದ ಗ್ರೇಗ್ ಚಾಪೆಲ್



ಭಾರತ ಹಾಗೂ ಆಸ್ಟ್ರೇಲಿಯಾ ನಡುವೆ ಐದು ಪಂದ್ಯಗಳ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿ ಆರಂಭಕ್ಕೂ ಮುನ್ನ ಆಸ್ಟ್ರೇಲಿಯಾ ತಂಡದ ಆಟಗಾರರೂ ಸೇರಿದಂತೆ, ಅಲ್ಲಿನ ಮಾಜಿ ಆಟಗಾರರು, ಮಾಧ್ಯಮಗಳು ಟೀಂ ಇಂಡಿಯಾವನ್ನು ಇನ್ನಿಲ್ಲದಂತೆ ಲೇವಡಿ ಮಾಡಿದ್ದವು. ಆಸೀಸ್ ತಂಡದ ಕೆಲವು ಆಟಗಾರರು ಭಾರತ ತಂಡವನ್ನು ಲಘುವಾಗಿ ಪರಿಗಣಿಸಿ, ಈ ಸರಣಿಯಲ್ಲಿ ನಾವು ಕ್ಲೀನ್ ಸ್ವೀಪ್ ಸಾಧನೆ ಮಾಡುತ್ತೇವೆ ಎಂದಿದ್ದರು. ಇನ್ನೂ ಇದಕ್ಕಿಂತ ಒಂದು ಹೆಜ್ಜೆ ಮುಂದೆ ಹೋಗಿದ್ದ ಆಸೀಸ್ ತಂಡದ ಮಾಜಿ ಆಟಗಾರರು, ಕಳಪೆ ಫಾರ್ಮ್‌ನಿಂದ ಬಳಲುತ್ತಿರುವ ಟೀಂ ಇಂಡಿಯಾ, ಬಲಿಷ್ಠ ಆಸ್ಟ್ರೇಲಿಯಾದ ಮುಂದೆ ಹೇಳ ಹೆಸರಿಲ್ಲದಂತ್ತಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದರು. ಆದರೆ ಎಲ್ಲರ ಲೆಕ್ಕಾಚಾರವನ್ನು ಬುಡ ಮೇಲು ಮಾಡಿದ್ದ ಟೀಂ ಇಂಡಿಯಾ, ಆತಿಥೇಯರನ್ನು 295 ರನ್‌ಗಳಿಂದ ಸೋಲಿಸಿತ್ತು. ಇದೀಗ ಈ ಸೋಲನ್ನು ಅರಗಿಸಿಕೊಳ್ಳದ ಆಸ್ಟ್ರೇಲಿಯಾದ ಕೆಲವು ಮಾಧ್ಯಮಗಳು ಹಾಗೂ ಅಲ್ಲಿನ ನೆಟ್ಟಿಗರು, ಟೀಂ ಇಂಡಿಯಾ ನಾಯಕ ಬುಮ್ರಾ ಅವರ ಬೌಲಿಂಗ್ ಬಗ್ಗೆಯೇ ಪ್ರಶ್ನೆಗಳನ್ನು ಎತ್ತಿದ್ದರು.

ಇದೀಗ ತನ್ನ ತಂಡದ ಬೆಂಬಲಿಗರ ಮೈಚಳಿ ಬಿಡಿಸಿರುವ ಆಸ್ಟ್ರೇಲಿಯಾದ ಮಾಜಿ ಆಟಗಾರ ಹಾಗೂ ಟೀಂ ಇಂಡಿಯಾದ ಮಾಜಿ ಕೋಚ್ ಗ್ರೇಗ್ ಚಾಪೆಲ್, ಬುಮ್ರಾ ಮೇಲೆ ಈ ರೀತಿಯ ಅಸಂಬದ್ಧ ಆರೋಪಗಳನ್ನು ಮಾಡುವುದನ್ನು ನಿಲ್ಲಿಸಿ ಎಂದಿದ್ದಾರೆ.

**ಭಾರತ ತಂಡವನ್ನು ಹೊಗಳಿದ ಚಾಪೆಲ್:** ವಾಸ್ತವವಾಗಿ ಪರ್ತ್‌ನಲ್ಲಿ ನಡೆದ ಬಾರ್ಡರ್-ಗವಾಸ್ಕರ್ ಟ್ರೋಫಿ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ವಿರುದ್ಧ 295 ರನ್‌ಗಳ ಸೋಲಿನ ನಂತರ ಆಸ್ಟ್ರೇಲಿಯಾ ತಂಡದ ಕಳಪೆ ಪ್ರದರ್ಶನದ ಬಗ್ಗೆ ಒಂದೆಡೆ ಸಾಕಷ್ಟು ಟೀಕೆಗಳು ವ್ಯಕ್ತವಾಗುತ್ತಿದ್ದರೆ, ಮತ್ತೊಂದೆಡೆ ಕೆಲವರು ಜಸ್ಪ್ರೀತ್ ಬುಮ್ರಾ ಅವರ ಬೌಲಿಂಗ್ ಶೈಲಿ ಯೇ ಸಂಶಯಾಸ್ಪದವಾಗಿದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಆರೋಪ ಹೊರಿಸಲಾರಂಭಿಸಿದ್ದರು. ಇದೀಗ ಈ ಎಲ್ಲಾ ಆರೋಪಗಳನ್ನು ಅಲ್ಲಗಳೆದಿರುವ ಗ್ರೇಗ್ ಚಾಪೆಲ್, ಬಾರಿಗೆ ಭಾರತ ತಂಡವನ್ನು ಹೊಗಳಿ, ಆಸೀಸ್ ಆಟಗಾರರ ಪ್ರದರ್ಶನವನ್ನು ಪ್ರಶ್ನಿಸಿದ್ದಾರೆ.

# ಆರ್‌ಸಿಬಿ ಫ್ಯಾನ್ಸ್‌ಗೆ ಭಾವನಾತ್ಮಕ ಪತ್ರ ಬರೆದ ಫಾಫ್ ಡುಪ್ಲೆಸಿಸ್



ಐಪಿಎಲ್ ಮೆಗಾ ಹರಾಜಿಗೆ ಅದ್ದೂರಿ ತೆರೆ ಬಿದ್ದಿದ್ದು, ಎಲ್ಲಾ ಫ್ರಾಂಚೈಸಿಗಳು ಬಲಿಷ್ಠ ತಂಡ ಕಟ್ಟುವಲ್ಲಿ ಭಾಗಶಃ ಯಶಸ್ವಿಯಾಗಿವೆ. ಇದರಲ್ಲಿ ಆರ್‌ಸಿಬಿ ಕೂಡ ಸೇರಿದ್ದು, ಮುಂದಿನ ವರ್ಷ ಹೊಸ ತಂಡದೊಂದಿಗೆ ಈ ರೆಡ್ ಆರ್ಮಿ ಕ್ರಿಕೆಟ್ ಅಖಾಡಕ್ಕಿಳಿಯಲಿದೆ.

ವಾಸ್ತವವಾಗಿ ಹರಾಜಿಗೂ ಮುನ್ನ ಆರ್‌ಸಿಬಿ ಮೂವರು ಆಟಗಾರರನ್ನು ತಂಡದಲ್ಲಿ ಉಳಿಸಿಕೊಂಡಿತ್ತು. ಹೀಗಾಗಿ ಉಳಿದ ಮೂವರನ್ನು ಹರಾಜಿನಲ್ಲಿ ಆರ್‌ಟಿಎಮ್ ಬಳಸಿ ಮತ್ತೆ ತಂಡಕ್ಕೆ ಸೇರಿಸಿಕೊಳ್ಳಲಿದೆ ಎಂದು ಭಾವಿಸಿದ್ದರು. ಆ ಮೂವರು ಆಟಗಾರರಲ್ಲಿ ತಂಡದ ಮಾಜಿ ನಾಯಕ ಫಾಫ್ ಡುಪ್ಲೆಸಿಸ್, ಮೊಹಮ್ಮದ್ ಸಿರಾಜ್ ಹಾಗೂ ವಿಲ್ ಜ್ಯಾಕ್ಸ್ ಸೇರಿದ್ದರು. ಆದರೆ ಹರಾಜಿನ ವೇಳೆ ಆರ್‌ಸಿಬಿ, ಈ ಮೂವರ ಮೇಲೆ ಆರ್‌ಟಿಎಮ್ ಬಳಸಲಿಲ್ಲ. ಇದರರ್ಥ ಈ ಮೂವರು ಇದೀಗ ಹೊಸ ತಂಡದ ಪರ ಕಣಕ್ಕಿಳಿಯುವುದನ್ನು ನಾವು ಕಾಣಬಹುದಾಗಿದೆ. ಆದರೆ ಅದಕ್ಕೂ ಮುನ್ನ ತಂಡದೊಂದಿಗೆ ಸಾಕಷ್ಟು ವರ್ಷ ಆಡಿದ್ದ ಈ ಆಟಗಾರರು, ಆರ್‌ಸಿಬಿ ಹಾಗೂ ಅದರ ಅಭಿಮಾನಿಗಳಿಗೆ ಭಾವನಾತ್ಮಕ ಸಂದೇಶದ ಮೂಲಕ ಧನ್ಯವಾದ ತಿಳಿಸಿದ್ದಾರೆ.

ವಾಸ್ತವವಾಗಿ ಆರ್‌ಸಿಬಿ ಜೊತೆಗೆ ಬರೋಬ್ಬರಿ 7 ವರ್ಷ ಆಡಿದ್ದ ವೇಗಿ ಮೊಹಮ್ಮದ್ ಸಿರಾಜ್, ತಮ್ಮ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಭಾವನಾತ್ಮಕ ಪೋಸ್ಟ್ ಹಂಚಿಕೊಳ್ಳುವ ಮೂಲಕ ಆರ್‌ಸಿಬಿಗೆ ಧನ್ಯವಾದ ಹೇಳಿದ್ದರು. ಇದೀಗ ತಂಡದ ಮಾಜಿ ನಾಯಕ ಫಾಫ್ ಡುಪ್ಲೆಸಿಸ್ ಕೂಡ ತಮ್ಮ ಸೋಶೀಯಲ್ ಮೀಡಿಯಾ ಖಾತೆಯಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಳ್ಳುವ ಮೂಲಕ ಫ್ರಾಂಚೈಸಿ ಹಾಗೂ ಅಭಿಮಾನಿಗಳಿಗೆ ಧನ್ಯವಾದ ತಿಳಿಸಿದ್ದಾರೆ.

**ಫಾಫ್ ಭಾವನಾತ್ಮಕ ಪೋಸ್ಟ್:** ಇಂದು ತಮ್ಮ ಸೋಶಿಯಲ್ ಮೀಡಿಯಾ ಖಾತೆ ಇನ್‌ಸ್ಟಾಗ್ರಾಮ್‌ನಲ್ಲಿ ವೀಡಿಯೊವೊಂದನ್ನ ಹಂಚಿಕೊಂಡಿರುವ ಫಾಫ್, ಆರ್‌ಸಿಬಿ ಜೊತೆ ಕಳೆದ ಮೂರು ವರ್ಷಗಳನ್ನು ಎಂದಿಗೂ ಮರೆಯುವುದಿಲ್ಲ ಎಂದು ಹೇಳಿದ್ದಾರೆ. ' ಆರ್‌ಸಿಬಿ ಜೊತೆಗಿನ ನನ್ನ ಅಧ್ಯಾಯ ಮುಗಿದಿದೆ. ಆರ್‌ಸಿಬಿ ಜೊತೆಗಿನ ಈ ಮೂರು ವರ್ಷಗಳ ಪ್ರಯಾಣ ಅದ್ಭುತವಾಗಿತ್ತು. ನಾನು ಮೂರು ವರ್ಷಗಳ ಹಿಂದೆ ಆರ್‌ಸಿಬಿಗೆ ಸೇರಿದಾಗ, ಈ ಪ್ರಯಾಣವು ಇಷ್ಟು ಅದ್ಭುತವಾಗಿ ಆರಂಭವಾಗುತ್ತದೆ ಎಂದು ನನಗೆ ತಿಳಿದಿರಲಿಲ್ಲ. ಬೆಂಗಳೂರು ನಗರ ಮತ್ತು ಆರ್‌ಸಿಬಿಯ ಅಭಿಮಾನಿಗಳೆಂದರೆ ನನಗೆ ತುಂಬಾ ಅಚ್ಚುಮೆಚ್ಚು. ಬೆಂಗಳೂರು ಮತ್ತು ಬೆಂಗಳೂರಿನ ಜನರು ನನ್ನ ವ್ಯಕ್ತಿತ್ವದ ಭಾಗವಾಗಿದ್ದಾರೆ. ನಾನು ಯಾವಾಗಲೂ ಈ ನೆನಪುಗಳನ್ನು ಮತ್ತು ಒಡನಾಟವನ್ನು ನನ್ನೊಂದಿಗೆ ಕೊಂಡೊಯ್ಯುತ್ತೇನೆ. ಈ ಮೂರು ವರ್ಷಗಳನ್ನು ತುಂಬಾ ವಿಶೇಷವಾಗಿಸಿದ್ದಕ್ಕಾಗಿ ಧನ್ಯವಾದಗಳು.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**